ಸಂಪುಟ: 05 ಸಂಚಿಕೆ: 121 ಪುಟಗಳು: 08 ಸೋಮವಾರ 14 ಜುಲೈ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ನಾವು ಯುದ್ಧದಲ್ಲಿ ಹೋರಾಡಿದಂತೆಯೇ ಧೈರ್ಯದಿಂದ ಶಾಂತಿಗಾಗಿ ಹೋರಾಡಬೇಕು.

ಉದಯ UV ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಬೆಂಗಳೂರಿನ ಬೀದಿ ನಾಯಿಗಳಿಗೆ ಚಿಕನ್ ರೈಸ್, ಬಿರಿಯಾನಿ ಕೊಡಲ್ಲ!

• **ಉದಯವಾಹಿನಿ, ಬೆಂಗಳೂರು**

ಬೀದಿ ನಾಯಿಗಳಿಗೆ ವಿಶೇಷವಾಗಿ ತಯಾರಿಸಿದ ಭಕ್ಷ್ಯ ನೀಡುತ್ತಿಲ್ಲ. ಇದು ಮಾನವ ದರ್ಜೆಯ ಆಹಾರವಲ್ಲ. ನಾಯಿಗಳಿಗೆ ನೀಡುವ ದರ್ಜೆಯ ಆಹಾರ ಒದಗಿಸಲಾಗುತ್ತದೆ. ಟೆಂಡರ್‌ನಲ್ಲಿ ಊಟದ ಪದಾರ್ಥಗಳನ್ನು ನಮೂದಿಸಿದ್ದನ್ನು ಬಿಟ್ಟರೆ, ವಿತರಿಸುವ ಆಹಾರಕ್ಕೆ ಹೆಸರಿಟ್ಟಿಲ್ಲ ಎಂದು ಬಿಬಿಎಂಪಿ ಭಾನುವಾರ ಸ್ಪಷ್ಟೀಕರಣ ನೀಡಿದೆ.

ಬೀದಿ ನಾಯಿಗಳಿಗೆ ಮಾಂಸದೂಟ ನೀಡುವ ಬಿಬಿಎಂಪಿ ನಿರ್ಧಾರ ವ್ಯಾಪಕ ಟೀಕೆಗೆ ಗುರಿಯಾಗಿತ್ತು. ಅಲ್ಲದೆ, ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಹೆಚ್ಚಿನ ಚರ್ಚೆಯೂ ನಡೆಯುತ್ತಿದೆ. ಹಲವರು ತರಹೇವಾರಿ ಮೀಮ್‌ಗಳನ್ನು ಹಂಚಿಕೊಂಡು ಬಿಬಿಎಂಪಿ ಕಾಲೆಳೆಯುತ್ತಿದ್ದಾರೆ. ಇದರಿಂದ ಮುಜುಗರಕ್ಕೆ ಒಳಗಾಗಿರುವ ಪಾಲಿಕೆ, ತನ್ನ ನಿರ್ಧಾರದ ಬಗ್ಗೆ ಸ್ಪಷ್ಟೀಕರಣ ನೀಡಿದೆ. ಕೋಳಿ ಮಾಂಸದ ತ್ಯಾಜ್ಯವನ್ನು ಬಳಸಿ ಆಹಾರ ಸಿದ್ಧಪಡಿಸಿ ನೀಡಲಾಗುವುದು ಎಂದು ಸಮರ್ಥನೆ ಮಾಡಿಕೊಂಡಿದೆ. ಬೀದಿ ನಾಯಿಗಳಿಗೆ ಊಟ ಒದಗಿಸಲು ಕೋಳಿಯನ್ನು ಸಾಯಿಸುವುದಿಲ್ಲ. ಟೆಂಡರ್‌ನಲ್ಲಿ ಬೀದಿ ನಾಯಿಗಳಿಗೆ ತಯಾರಿಸುವ ಆಹಾರ ಪದಾರ್ಥ ಎಂದು ಮಾತ್ರ ನಮೂದಿಸಲಾಗಿದೆ.

## ಗ್ಯಾರಂಟಿ ಯೋಜನೆಯಿಂದ ಮಹಿಳಾ ಸಬಲೀಕರಣ: ಸಿಎಂ ಸಿದ್ದರಾಮಯ್ಯ

• **ಉದಯವಾಹಿನಿ, ಬೆಂಗಳೂರು**

ಒಕ್ಕಲಿಗರ ಸಂಘ, ವೀರಶೈವ ಮಹಾಸಭಾ, ಕುರುಬರ ಸಂಘದ ರೀತಿ ಮಾದರ ಮಹಾಸಭಾ ಕಟ್ಟಲು ತೀರ್ಮಾನಿಸಿದ್ದು, 12 ವರ್ಷಗಳ ನಂತರ ಸದಸ್ಯತ್ವ ನೋಂದಣಿಗೆ ವೇಗ ನೀಡಲಾಗಿದೆ ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದರು. ಸಾಮಾನ್ಯ ಸದಸ್ಯತ್ವಕ್ಕೆ 500, ಆಜೀವ ಸದಸ್ಯತ್ವಕ್ಕೆ 25,000, ಪೋಷಕ ಸದಸ್ಯತ್ವಕ್ಕೆ 50,000, ಮಹಾಪೋಷಕ ಸದಸ್ಯತ್ವಕ್ಕೆ 1 ಲಕ್ಷ ನಿಗದಿ ಮಾಡಲಾಗಿದೆ. ರಾಜ್ಯ ಸಮಿತಿಗೆ ಚುನಾವಣೆ ಮೂಲಕ ಆಯ್ಕೆ ನಡೆಯಬೇಕು. ಉತ್ತಮ ಬುನಾದಿ ಹಾಕಲು ಎಲ್ಲಾ ಪದಾಧಿಕಾರಿಗಳು ಶ್ರಮಿಸಬೇಕು ಎಂದರು. ಎನ್. ರಾಚಯ್ಯ ನಮ್ಮ ಹೋರಾಟಕ್ಕೆ ಪ್ರೇರಣೆ. ಇಷ್ಟು ದಿನವಾದರೂ ಸಂಘ ಕಟ್ಟುವಲ್ಲಿ ವಿಫಲರಾಗಿದ್ದೇವೆ. ಪಕ್ಷಭೇದ ಮರೆತು ಸಂಘ ಕಟ್ಟಲು ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಸಂಘಕ್ಕೆ ಶಾಶ್ವತ ನೆಲೆ ಕಲ್ಪಿಸಲು ನಿವೇಶನ ಒದಗಿಸುವಂತೆ ಮುಖ್ಯಮಂತ್ರಿಗೆ ಮನವಿ ಮಾಡಿದ್ದೇವೆ ಎಂದು ಹೇಳಿದರು. ಕೇಂದ್ರದ ಮಾಜಿ ಸಚಿವ ಎ. ನಾರಾಯಣಸ್ವಾಮಿ, ಮಾಜಿ ಸಚಿವ ಎಚ್. ಆಂಜನೇಯ, ಮಾಜಿ ಸಂಸದರಾದ ಎಲ್. ಹನುಮಂತಯ್ಯ, ಬಿ.ಎನ್. ಚಂದ್ರಪ್ಪ, ಮುಖಂಡರಾದ ತಿಮ್ಮಯ್ಯ, ಆರ್. ಧರ್ಮಸೇನ, ಡಾ.ಎಚ್. ನಟರಾಜ್, ಶಿವಪ್ಪ, ಪುರುಷೋತ್ತಮ್, ದೊಡ್ಡೇರಿ ವೆಂಕಟೇಶ್, ಕೋಗಿಲು ವೆಂಕಟೇಶ್, ರಾಮಕೃಷ್ಣ, ಮಾತಾಂಗ ಲೋಕೇಶ್ ಉಪಸ್ಥಿತರಿದ್ದರು.

## ಒಕ್ಕಲಿಗ, ವೀರಶೈವರ ರೀತಿ ಮಾದರ ಮಹಾಸಭಾ: ಸಚಿವ ಮುನಿಯಪ್ಪ

• **ಉದಯವಾಹಿನಿ, ಬೆಂಗಳೂರು**

'ಲಿಂಗನಮಕ್ಕಿ ಹಿನ್ನೀರಿನಲ್ಲಿ ನಿರ್ಮಿಸಿರುವ ಸೇತುವೆ ಉದ್ಘಾಟನೆಯ ಕಾರ್ಯಕ್ರಮದ ಕರಡು ಆಹ್ವಾನ ಪತ್ರಿಕೆಯ, ಆಹ್ವಾನಿತರ ಪಟ್ಟಿಯಲ್ಲಿ ನನ್ನ ಹೆಸರನ್ನು ಮುದ್ರಿಸಲಾಗಿದೆ. ಆದರೆ ಈ ಬಗ್ಗೆ ನಿಮ್ಮ ಸಚಿವಾಲಯದಿಂದ ನನಗೆ ಮಾಹಿತಿಯನ್ನೇ ನೀಡಿಲ್ಲ' ಎಂದು ಆಕ್ಷೇಪ ವ್ಯಕ್ತಪಡಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಪತ್ರ ಬರೆದಿದ್ದಾರೆ. ಶಿವಮೊಗ್ಗದ ಸಾಗರ ತಾಲ್ಲೂಕಿನಲ್ಲಿ ಸೋಮವಾರ (ಜುಲೈ 14) ಸೇತುವೆ ಉದ್ಘಾಟನೆ ಕಾರ್ಯಕ್ರಮವನ್ನು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ ಆಯೋಜಿಸಿದೆ. ಈ ಕಾರ್ಯಕ್ರಮದಲ್ಲಿ ನಿತಿನ್ ಗಡ್ಕರಿ ಅವರು ಭಾಗಿಯಾಗಲಿದ್ದಾರೆ. ಇದೇ 11ರಂದು ಪತ್ರ ಬರೆದಿರುವ ಅವರು, 'ಸಾಧ್ಯವಾದರೆ ಕಾರ್ಯಕ್ರಮ ಮುಂದೂಡಿ. ನಿಮ್ಮ ಅನುಕೂಲದ ದಿನಾಂಕಗಳನ್ನು ತಿಳಿಸಿದರೆ ನಾನೂ ಜತೆಯಾಗುತ್ತೇನೆ' ಎಂದಿದ್ದಾರೆ.


## ಬೆಂಗಳೂರಿನ 3 ರೈಲ್ವೆ ನಿಲ್ದಾಣ ವಿಶ್ವದರ್ಜೆಗೆ ಅಭಿವೃದ್ಧಿ: ವಿ ಸೋಮಣ್ಣ

• **ಉದಯವಾಹಿನಿ, ಬೆಂಗಳೂರು**

' ಬೆಂಗಳೂರಿನ ಮೂರು ರೈಲ್ವೆ ನಿಲ್ದಾಣಗಳನ್ನು ವಿಶ್ವದರ್ಜೆಗೆ ಅಭಿವೃದ್ಧಿ ಮಾಡಲಾಗುತ್ತಿದೆ. ಜತೆಗೆ ಸುತ್ತ 100 ಕಿ.ಮೀ ವ್ಯಾಪ್ತಿಯ ಎಲ್ಲಾ ರೈಲ್ವೆ ಗೇಟ್ ಲೆವೆಲ್ ಕ್ರಾಸ್ 3 ವರ್ಷಗಳಲ್ಲಿ ತೆರವು ಮಾಡುವುದಾಗಿ ರೈಲ್ವೆ ರಾಜ್ಯ ಖಾತೆ ಸಚಿವ ವಿ ಸೋಮಣ್ಣ ತಿಳಿಸಿದ್ದಾರೆ.

ಬೆಂಗಳೂರು-ಮೈಸೂರು ರೈಲ್ವೆ ಮಾರ್ಗದ ಕೆಂಗೇರಿ - ಹೆಜ್ಜಾಲ ಭಾಗದಲ್ಲಿ ಬರುವ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ 16 (ರಾಮೋಹಳ್ಳಿ ಗೇಟ್) ಕ್ಕೆ ಬದಲಾಗಿ ರಸ್ತೆ ಕೆಳ ಸೇತುವೆಯ ನಿರ್ಮಾಣಕ್ಕೆ ಶಂಕುಸ್ಥಾಪನೆಯನ್ನು ಸಚಿವ ಸೋಮಣ್ಣ ಭಾನುವಾರ ನೆರವೇರಿಸಿದರು. ಜತೆಗೆ ಲೆವೆಲ್ ಕ್ರಾಸಿಂಗ್ ಸಂಖ್ಯೆ ಗೇಟ್ ಸಂಖ್ಯೆ 15ರ (ಚಲ್ಲಘಟ್ಟ ಗೇಟ್) ಬದಲಾಗಿ ನಿರ್ಮಿಸಲಾದ ರಸ್ತೆ ಕೆಳ ಸೇತುವೆಯನ್ನು ಉದ್ಘಾಟಿಸಿದರು. ಈ ಯೋಜನೆಗಳಿಂದ ಈ ಪ್ರದೇಶದಲ್ಲಿ ಸುಗಮ ಸಂಚಾರ ಮತ್ತು ರಸ್ತೆ ಸುರಕ್ಷತೆ ಸುಧಾರಿಸಲಿದೆ.

# ಕುರ್ಚಿ ಕುರುಕ್ಷೇತ್ರ




## ಬಿಹಾರ ಚುನಾವಣೆ ನಂತರ ರಾಜ್ಯ ರಾಜಕೀಯದಲ್ಲಿ ಬದಲಾವಣೆ

### ಕರ್ನಾಟಕ ರಾಜಕೀಯದ ದಿಕ್ಕು ಬದಲಾಗುತ್ತದೆಯೇ..

• **ಉದಯವಾಹಿನಿ, ಬೆಂಗಳೂರು**

ಬಿಹಾರ ವಿಧಾನಸಭೆ ಚುನಾವಣೆ ಫಲಿತಾಂಶ ಕಾಂಗ್ರೆಸ್ ಹೈಕಮಾಂಡ್‌ನ ಬಲಾ-ಬಲವನ್ನು ಪರೀಕ್ಷೆ ಒಳಪಡಿಸಲಿದ್ದು, ಸಹಜವಾಗಿಯೇ ರಾಜ್ಯ ರಾಜಕಾರಣದ ಮೇಲೆ ಪರಿಣಾಮ ಬೀರುವ ನಿರೀಕ್ಷೆಗಳಿವೆ. ಈ ಹಿನ್ನೆಲೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲ ನಡೆಸುತ್ತಿರುವ ಸರಣಿ ಸಭೆಗಳು ತೀವ್ರ ಕುತೂಹಲ ಕೆರಳಿಸಿವೆ. ಸಚಿವ ಸಂಪುಟ ಪುನರ್ ರಚನೆ, ನಿಗಮ ಮಂಡಳಿಗಳ ನೇಮಕಾತಿ ಸೇರಿದಂತೆ ಹಲವಾರು ವಿಚಾರಗಳಲ್ಲಿ ಈವರೆಗೂ ಹೈಕಮಾಂಡ್‌ನ ಪ್ರಭಾವ ಎದ್ದುಕಾಣುತ್ತಿದೆ. ಒಂದು ವೇಳೆ ಬಿಹಾರದ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದ್ದಾದರೆ ಸಿದ್ದರಾಮಯ್ಯ ಅವರು ಹೆಚ್ಚು ಪ್ರಭಾವಿಯಾಗಲಿದ್ದು, ಡಿ.ಕೆ. ಶಿವಕುಮಾರ್ ಬಣಕ್ಕೆ ಮತ್ತಷ್ಟು ಹಿನ್ನಡೆಯಾಗುವ ನಿರೀಕ್ಷೆಯಿದೆ.ರಾಷ್ಟ್ರ ರಾಜಕಾರಣದ ನಾಯಕತ್ವದಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿಯೇ ಹೈಕಮಾಂಡ್ ಎಂಬ ರೀತಿ ಬಿಂಬಿತವಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೆಪ ಮಾತ್ರಕ್ಕೆ ಅಧ್ಯಕ್ಷರು ಎಂಬಂತೆ ರಾಜ್ಯದಲ್ಲಿ ಕೆಲ ನಾಯಕರು ವರ್ತಿಸುತ್ತಿದ್ದಾರೆ.

**1** ರಾಹುಲ್ ಗಾಂಧಿ ಭೇಟಿಯಾಗದೇ ವಾಪಸ್ ಆಗಿದ್ದ ಸಿಎಂ, ಡಿಸಿಎಂ

**2** ಡಿ.ಕೆ ಶಿವಕುಮಾರ್‌ಗೆ ದೆಹಲಿಗೆ ಬರುವಂತೆ ಹೈಕಮಾಂಡ್ ಆಹ್ವಾನ

**3** ಶಿರಡಿ ಸಾಯಿಬಾಬಾನ ದರ್ಶನ ಪಡೆದ ಬೆನ್ನಲ್ಲೇ ವರಿಷ್ಠರ ಸಂದೇಶ

ನಾಯಕತ್ವದ ಕುರಿತು ಚರ್ಚೆಯಲ್ಲಿ ಯಾರೂ ಹಸ್ತಕ್ಷೇಪ ಮಾಡಬಾರದು ಎಂದು ಮಲ್ಲಿಕಾರ್ಜುನ್ ಖರ್ಗೆಯವರೇ ಹೇಳಿಕೆ ನೀಡಿದ ಬಳಿಕವೂ, ಪದೇಪದೇ ಬೆಂಕಿ ಬಿರುಗಾಳಿಯಂಥ ಮಾತುಗಳನ್ನಾಡುತ್ತಾ ಸರ್ಕಾರ ಮತ್ತು ಪಕ್ಷದಲ್ಲಿ ಕೆಲವರು ಗೊಂದಲ ಸೃಷ್ಟಿಸುತ್ತಲೇ ಇದ್ದಾರೆ.

### ತವರಿನಲ್ಲಿ ಶಕ್ತಿ ಸಿಎಂ ಪ್ರದರ್ಶನ

5 ವರ್ಷ ಅಧಿಕಾರ ಗಟ್ಟಿಯಾಗುತ್ತಿದಂತೆ ಸಿಎಂ ಸಿದ್ದರಾಮಯ್ಯ ಮೈಸೂರಿನಲ್ಲಿ ಶಕ್ತಿ ಪ್ರದರ್ಶನಕ್ಕೆ ಮುಂದಾಗಿದ್ದಾರೆ. ಹೌದು. ತವರು ಜಿಲ್ಲೆಯಲ್ಲಿ ಸಾಧನ ಸಮಾವೇಶ ಹೆಸರಿನಲ್ಲಿ ಜುಲೈ 19 ಶನಿವಾರ ರಂದು ಬೃಹತ್ ಸಮಾವೇಶಕ್ಕೆ ಸಿದ್ಧತೆ ನಡೆದಿದೆ. ಮೂರು ದಿನ ಮೈಸೂರು ಪ್ರವಾಸ ಕೈಗೊಳ್ಳಲಿರುವ ಸಿಎಂ ಮೈಸೂರಿನ ಮಹರಾಜ ಕಾಲೇಜು ಮೈದಾನದಲ್ಲಿ ಸಮಾವೇಶ ಆಯೋಜನೆಗೊಂಡಿದೆ. ಸರ್ಕಾರದ ಸುಮಾರು 2,600 ಕೋಟಿ ಮೊತ್ತದ ಹಲವು ಕಾಮಗಾರಿಗಳ ಗುದ್ದಲಿ ಪೂಜೆ ಹಾಗೂ ಲೋಕಾರ್ಪಣೆ ನಡೆಯಲಿದೆ. ಬೃಹತ್ ಸಮಾವೇಶದ ಮೂಲಕ ಪಕ್ಷದ ಹೈ ಕಮಾಂಡ್ ಪರೋಕ್ಷ ಸಂದೇಶ ರವಾನಿಸಲಿದ್ದಾರೆ. ಸಾಧನ ಸಮಾವೇಶ ಮೂಲಕ ಹಳೇ ಮೈಸೂರು ಭಾಗದಲ್ಲಿ ತನ್ನ ಶಕ್ತಿ ತೋರಿಸಲು ಸಿದ್ದರಾಮಯ್ಯ ಮಾಸ್ಟರ್ ಪ್ಲಾನ್ ಮಾಡಿದ್ದು, ಸಮಾವೇಶದ ಸಂಪೂರ್ಣ ಜವಾಬ್ದಾರಿಯನ್ನು ಸಿಎಂ ಆಪ್ತ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ ಮಹದೇವಪ್ಪ ನೋಡಿಕೊಳ್ಳಲಿದ್ದಾರೆ.

ಅಂಥವರ ವಿರುದ್ಧ ಕ್ರಮಕೈಗೊಳ್ಳಲು ಸಾಧ್ಯವಾಗದೆ ಕಾಂಗ್ರೆಸ್‌ನ ಹಿರಿಯ ನಾಯಕರು ಕೈ-ಕೈ ಹಿಸುಕಿಕೊಳ್ಳುತ್ತಿದ್ದಾರೆ. ಎಐಸಿಸಿಯಲ್ಲಿ ರಾಹುಲ್‌ಗಾಂಧಿ ಪ್ರಭಾವಿ ನಾಯಕರಾಗಿದ್ದು, ಅವರ ಬೆಂಬಲಿತ ನಾಯಕತ್ವಕ್ಕೆ ಹೆಚ್ಚಿನ ಬೆಂಬಲ ದೊರೆಯುತ್ತಿದೆ.

### ಸೋಲಿನ ನಾಯಕ

ರಾಹುಲ್ ಗಾಂಧಿಯವರನ್ನು ಸೋಲಿನ ನಾಯಕ ಎಂದು ಬಿಂಬಿಸಲಾಗಿದೆ. ಬಹುತೇಕ ಅವರ ಪ್ರಾಬಲ್ಯ ತಗ್ಗಿದ ಹೊತ್ತಿನಲ್ಲಿ 2023ರ ಲೋಕಸಭೆ ಚುನಾವಣೆ ವಿರೋಧ ಪಕ್ಷ ನಾಯಕನನ್ನು ಘೋಷಿಸುವಷ್ಟು ಸಾಮರ್ಥ್ಯಗಳಿಸಿಕೊಂಡಿದ್ದಾರೆ. ಹೀಗಾಗಿ ರಾಹುಲ್‌ಗಾಂಧಿ ಪುಟಿದೆದ್ದಿದ್ದರು. ಹೈಕಮಾಂಡ್‌ನಲ್ಲಿ ಮತ್ತೆ ಪ್ರಭಾವಿಯಾಗಿ ಮುಂದುವರೆದಿದ್ದಾರೆ.

### ಸಿದ್ದು-ಡಿಕೆಶಿ ಕಿತ್ತಾಟಕ್ಕೆ ಪಕ್ಷ ಬಲಿ

ಇಬ್ಬರು ಮಾಸ್ ಲೀಡರ್‌ಗಳ ಕಿತ್ತಾಟ ಈಗ ಪಕ್ಷಕ್ಕೆ ಯಾವ ಮಟ್ಟಿಗೆ ಡ್ಯಾಮೇಜ್ ತಂದಿದೆ ಅಂದ್ರೆ ಒಬ್ಬೊಬ್ಬರದ್ದು ಒಂದೊಂದು ಧಿಕ್ಕು ಆಗಿದೆ. ಶಾಸಕರದ್ದೇ ಒಂದು ತಾಳ.. ಸಚಿವರದ್ದೇ ಒಂದು ತಾಳ.. ಇಲ್ಲಿ ನಾಯಕ ಯಾರೂ ಅನ್ನೋದೆ ಗೊಂದಲ ಗೂಡಾಗಿದೆ.. ದಿಲ್ಲಿಯಲ್ಲಿ ಸ್ಪಷ್ಟವಾಗಿ ಸಿದ್ದರಾಮಯ್ಯ ನಾನೇ ಐದು ವರ್ಷ ಸಿಎಂ ಅಂತ ಹೇಳಿದ್ರು ಕೂಡ, ನಂಬದಂಥ ಸ್ಥಿತಿ ಕಾಂಗ್ರೆಸ್‌ನಲ್ಲಿ ಇಲ್ಲ.. ಯಾಕಂದ್ರೆ ರಾಹುಲ್ ಗಾಂಧಿಯಾಗಲಿ, ಮಲ್ಲಿಕಾರ್ಜುನ ಖರ್ಗೆಯಾಗಲಿ, ಸೋನಿಯಾ ಗಾಂಧಿಯಾಗಲಿ ಈ ಮಾತು ಹೇಳದೇ ಇರುವುದು ಗೊಂದಲಕ್ಕೆ ಕಾರಣವಾಗಿದೆ. ಅಲ್ಲದೇ ದೆಹಲಿಗೆ ಒಬ್ಬ ಮುಖ್ಯಮಂತ್ರಿ ಅದರಲ್ಲೂ ಕರ್ನಾಟಕದ ಮಾಸ್ ಲೀಡರ್ ಸಿದ್ದರಾಮಯ್ಯ ಹೋಗಿ ರಾಹುಲ್ ಗಾಂಧಿಯನ್ನು ಭೇಟಿ ಮಾಡಬೇಕು ಅಂದಾಗಲು ಅವರು ಭೇಟಿಗೆ ಸಮಯ ನೀಡದೇ ಇರುವುದು ಈಗ ಇನ್ನೊಂದು ಚರ್ಚೆಗೆ ನಾಂದಿ ಹಾಡಿದೆ.. ಈ ಬಗ್ಗೆ ಸಿದ್ದರಾಮಯ್ಯಗೂ ಬೇಸರ ಆಗಿದೆ ಎಂದು ಹೇಳಲಾಗುತ್ತಿದೆ. ಪವರ್ ಶೇರಿಂಗ್ ವಿಚಾರವಾಗಿ ಕರ್ನಾಟಕದಲ್ಲಿ ಯಾವ ಪರಿಸ್ಥಿತಿ ಇದೆ ಅನ್ನೋದು ನಿಮಗೆಲ್ಲ ಗೊತ್ತೇ ಇದೆ..

### ಡಿಕೆಶಿ ದಿಢೀರ್ ದೆಹಲಿಗೆ ದೌಡು!



ಪವರ್ ಶೇರಿಂಗ್ ಫೈಟ್‌ನಲ್ಲಿ ದಿನಕ್ಕೊಂದು ಟರ್ನ್. ಕ್ಷಣಕ್ಕೊಂದು ಟ್ವಿಸ್ಟ್ ಕಾಣಸಿಗ್ತಿದೆ. ಸಿದ್ದರಾಮಯ್ಯ 5 ವರ್ಷದ ಜಪ ಮಾಡ್ತಿದ್ರೆ, ಡಿ.ಕೆ. ಶಿವಕುಮಾರ್ ಮೌನಕ್ಕೆ ಜಾರಿದ್ರು. ಈ ಬೆನ್ನಲ್ಲೇ ಸಾಯಿಬಾಬಾನ ದರ್ಶನಕ್ಕೆ ಮುಂದಾಗಿದ್ರು. ಈ ಹೊತ್ತಲ್ಲೇ ಮತ್ತೆ ಡಿಕೆಶಿ ದೆಹಲಿಗೆ ಹಾರಿದ್ದಾರೆ. ದಂಪತಿ ಸಮೇತ ಶಿರಡಿ ಸಾಯಿಬಾಬಾ ದರ್ಶನ ಮಾಡಿದ ಡಿಸಿಎಂ ಡಿಕೆ ಶಿವಕುಮಾರ್, ಶ್ರದ್ಧೆ ನಂಬಿಕೆ ಮತ್ತು ತಾಳ್ಮೆ ಇದ್ದರೆ ಎಲ್ಲವೂ ಸಾಧ್ಯ ಅಂತ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಅಲ್ಲದೇ ಪ್ರಯತ್ನ ವಿಫಲವಾಗಬಹುದು ಪ್ರಾರ್ಥನೆ ವಿಫಲವಾಗಲ್ಲ ಅಂತಾ ಸಂದೇಶ ರವಾನಿಸಿದ್ರು. ಪ್ರಾರ್ಥನೆ ವಿಫಲವಾಗಲ್ಲ ಅಂತಾ ದೇವರ ಮೊರೆ ಹೋದ ಬೆನ್ನಲ್ಲೇ ಹೈಕಮಾಂಡ್ ಗಂಟೆ ಬಾರಿಸಿದಂತಿದೆ. ಡಿ.ಕೆ ಶಿವಕುಮಾರ್ ದಿಢೀರ್ ದೆಹಲಿ ದಾರಿ ಹಿಡಿದಿದ್ದಾರೆ.ಡಿ.ಕೆ ಶಿವಕುಮಾರ್ ತಾಳ್ಮೆಯ ದೀಕ್ಷೆ ಪಡೆದು, ಪ್ರಾರ್ಥನೆ ಮೂಲಕ ಫಲ ಬಯಸ್ತಿರೋ ಹೊತ್ತಲ್ಲಿ ಮತ್ತೆ ಡಿ.ಕೆ ಶಿವಕುಮಾರ್‌ಗೆ ದೆಹಲಿಗೆ ಪ್ರಯಾಣಿಸ್ತಿದ್ದಾರೆ. ಸಹಜವಾಗಿ ಇಂದು ಕುತೂಹಲದ ಬುಟ್ಟಿಯನ್ನ ಓಪನ್ ಮಾಡಿದೆ.

**ಪವರ್ ಶೇರಿಂಗ್ ಫೈಟ್‌ನಲ್ಲಿ ಭಾರೀ ಟ್ವಿಸ್ಟ್**

ಹೀಗಾಗಿ ರಾಜ್ಯದಲ್ಲಿ ಗೊಂದಲ ಮೂಡಿಸುತ್ತಿದ್ದರೂ ಸಿದ್ದರಾಮಯ್ಯ ಅವರ ಬೆಂಬಲಿಗರಿಗೆ ಯಾವುದೇ ಕ್ರಮಗಳಾಗುತ್ತಿಲ್ಲ. ಸಂಪುಟದಲ್ಲಿ ಹಲವಾರು ಸಚಿವರು ಸೆಪ್ಟಂಬರ್ ಕ್ರಾಂತಿ ಸೇರಿದಂತೆ ಅನೇಕ ರೀತಿಯ ಹೇಳಿಕೆಗಳನ್ನು ನೀಡಿದ್ದಾರೆ.

ಅವರ ವಿರುದ್ಧ ಸಣ್ಣ ಮಟ್ಟದ ಗದರಿಕೆಗಳೂ ಕೇಳಿಬಂದಿಲ್ಲ. ಅದೇ ಡಿ.ಕೆ. ಶಿವಕುಮಾರ್ ಪರವಾಗಿ ಮಾತನಾಡಿದವರಿಗೆ ನೋಟೀಸ್ ನೀಡಲಾಗಿದೆ. ಈ ರೀತಿಯ ತಾರತಮ್ಯಗಳು ಪಕ್ಷದಲ್ಲಿ ನಾನಾ ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿವೆ. ಹೈಕಮಾಂಡ್‌ನಲ್ಲಿ ಪ್ರಾಬಲ್ಯ ಹೆಚ್ಚಿದೆ ಎಂಬ ಕಾರಣಕ್ಕೆ ಸಿದ್ದರಾಮಯ್ಯ ಅವರ ಬೆಂಬಲಿಗರು ಮನಸ್ಸಿಗೆ ಬಂದಂತೆ ಎಂಬ ಟೀಕೆಗಳಿವೆ. ಬಿಹಾರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಥವಾ ಅದರ ಮಿತ್ರಕೂಟ ಸರ್ಕಾರ ರಚಿಸಿದ್ದಾದರೆ ರಾಹುಲ್‌ಗಾಂಧಿ ಅವರ ನಾಯಕತ್ವಕ್ಕೆ ರಾಷ್ಟ್ರ ಮಟ್ಟದಲ್ಲಿ ಮಾನ್ಯತೆ ಉಳಿಯುತ್ತದೆ. ಈ ವರೆಗೂ ನಡೆದಿರುವ ಲೋಕಸಭೆ ಹಾಗೂ ವಿವಿಧ ರಾಜ್ಯದ ವಿಧಾನಸಭೆ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ತೀವ್ರ ಹಿನ್ನಡೆ ಅನುಭವಿಸಿದೆ. ಬಿಹಾರ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲದೆ ಇದ್ದರೆ ರಾಹುಲ್‌ಗಾಂಧಿ ಅವರ ನಾಯಕತ್ವಕ್ಕೆ ಹಿನ್ನಡೆಯಾಗಲಿದೆ. ಅನಂತರ ರಾಹುಲ್‌ಗಾಂಧಿ ಅವರನ್ನೇ ಹೈಕಮಾಂಡ್‌ನ ನಾಯಕತ್ವದಲ್ಲಿ ಮುಂಚೂಣಿಯಲ್ಲಿಡಬೇಕೆ ಅಥವಾ ಪ್ರಿಯಾಂಕ ಗಾಂಧಿ ಅವರನ್ನು ಮುನ್ನೆಲೆಗೆ ತರಬೇಕೆ ಎನ್ನುವ ಬಗ್ಗೆ ಚರ್ಚೆಗಳು ಶುರುವಾಗಲಿವೆ. ಈ ಹಿನ್ನೆಲೆಯಲ್ಲಿ ಪ್ರಿಯಾಂಕಗಾಂಧಿ ಭವಿಷ್ಯದ ಕಾಂಗ್ರೆಸ್ಸಿನ ಪ್ರಭಾವಿ ನಾಯಕಿಯಾಗುವ ಸಾಧ್ಯತೆಯಿದೆ. ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿದ ಡಿ.ಕೆ. ಶಿವಕುಮಾರ್ ಅವರು ರಾಹುಲ್ ಗಾಂಧಿ ಅಥವಾ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಭೇಟಿಯಾಗದೇ ಪ್ರಿಯಾಂಕ ಗಾಂಧೀ ಅವರನ್ನು ಭೇಟಿಯಾಗಿದ್ದು, ಈ ಎಲ್ಲಾ ಚರ್ಚೆಗಳಿಗೆ ಪುಷ್ಟಿ ನೀಡಿದಂತಾಗದೆ. ಒಂದು ವೇಳೆ ನಿರೀಕ್ಷೆಯಂತೆ ಬಿಹಾರದ ಫಲಿತಾಂಶ ಕಾಂಗ್ರೆಸ್ ಪರವಾಗಿ ಬಂದರೆ ಸಿದ್ದರಾಮಯ್ಯ ಅವರ ಬಣಕ್ಕೆ ರಾಜ್ಯದಲ್ಲಿ ಹೆಚ್ಚಿನ ಬಲಬಂದಂತಾಗುತ್ತದೆ. ಬಿಹಾರದ ಚುನಾವಣೆ ಫಲಿತಾಂಶ ನಿರೀಕ್ಷೆ ಹುಸಿ ಮಾಡಿದರೆ ಡಿ.ಕೆ. ಶಿವಕುಮಾರ್ ಅವರ ಬಣದ ಕೈಮೇಲಾಗಲಿದೆ.

## ಮನಿ ಪವರ್ ಬಳಸಿ ಕುದುರೆ ವ್ಯಾಪಾರ; ಪ್ರಹ್ಲಾದ ಜೋಶಿ

• **ಉದಯವಾಹಿನಿ, ಹುಬ್ಬಳ್ಳಿ**

'ಮುಖ್ಯಮಂತ್ರಿ ಸ್ಥಾನ ಉಳಿಸಿಕೊಳ್ಳಲು ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿಯಾಗಬೇಕೆಂದು ಡಿ.ಕೆ. ಶಿವಕುಮಾರ್ ಅವರು, ಶಾಸಕರು ತಮ್ಮ ಪರವಾಗಿದ್ದಾರೆ ಎಂದು ತೋರಿಸಿಕೊಳ್ಳಲು ಮನಿ ಪವರ್ ಬಳಸಿ ಕುದುರೆ ವ್ಯಾಪಾರಕ್ಕೆ ಇಳಿದಿದ್ದಾರೆ' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದರು.

55 ಶಾಸಕರ ಪಟ್ಟಿ ಹಿಡಿದುಕೊಂಡು ಬಿಜೆಪಿ ಇಡಿ ಹೆಸರಲ್ಲಿ ಬೆದರಿಕೆಯೊಡ್ಡಿ ಅಪರೇಷನ್ ಕಮಲಕ್ಕೆ ಮುಂದಾಗಿದೆ ಎನ್ನುವ ಕಾಂಗ್ರೆಸ್ ಶಾಸಕ ವಿಜಯಾನಂದ ಕಾಶಪ್ಪನವರ್ ಹೇಳಿಕೆಗೆ ನಗರದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿ ಸ್ಥಾನಕ್ಕೆ ಕಾಂಗ್ರೆಸ್‌ನಲ್ಲಿ ಅವರದ್ದೇ ಶಾಸಕರ ಖರೀದಿ ನಡೆಯುತ್ತಿದೆ. ಇದು ಹೊರಗೆ ಬರಬಾರದು ಎಂದು, ಜನತೆಯ ದಿಕ್ಕುತಪ್ಪಿಸಲು ಕಾಶಪ್ಪನವರ್ ಸುಳ್ಳು ಆರೋಪ ಮಾಡಿದ್ದಾರೆ. ಅವ್ಯವಹಾರ ನಡೆಸಿದವರು ಮಾತ್ರ ಇಡಿ (ಜಾರಿ ನಿರ್ದೇಶನಾಲಯ) ದಾಳಿಗೆ ಹೆದರಬೇಕು. ಕಾಶಪ್ಪನವರ್ ಅಂತಹ ತಪ್ಪು ಏನು ಮಾಡಿದ್ದಾರೆ' ಎಂದು ಪ್ರಶ್ನಿಸಿದರು.

**ಜನತೆಯ ದಿಕ್ಕು ತಪ್ಪಿಸಲು ಸುಳ್ಳು ಆರೋಪ**

ಡಿ.ಕೆ. ಶಿವಕುಮಾರ್‌ಗೆ ಶಾಸಕರ ಬೆಂಬಲ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಕ್ಕೆ, ಕಾಂಗ್ರೆಸ್‌ನಲ್ಲಿ ಆಂತರಿಕ ಕಚ್ಚಾಟ ನಡೆದಿದೆ. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಒಬ್ಬರಿಗೊಬ್ಬರು ಸ್ಪರ್ಧೆಗೆ ಬಿದ್ದವರಂತೆ. ತಮ್ಮ ಸಾಮರ್ಥ್ಯ ಹೈಕಮಾಂಡ್ ಎದುರು ಪ್ರದರ್ಶಿಸಲು ಹಣ ನೀಡಿ ಶಾಸಕರನ್ನು ಖರೀದಿಸುತ್ತಿದ್ದಾರೆ. ಅವರಲ್ಲಿ ವ್ಯಾಪಾರ ಮಾಡುವವರು ಮತ್ತು ಕೊಳ್ಳುವವರು ಬಲಾಢ್ಯರಾಗಿದ್ದಾರೆ. ವ್ಯಾಪಾರಕ್ಕೂ ಕುದುರೆಗಳು ಮತ್ತು ವಸ್ತುಗಳು ಸಿದ್ಧವಾಗಿ, ಮಾರುಕಟ್ಟೆಯಲ್ಲಿ ಬಿಕರಿಯಾಗುತ್ತಿವೆ' ಎಂದು ಗೇಲಿ ಮಾಡಿದರು.



ಕರ್ನಾಟಕ ರಾಜ್ಯದ ಜನತೆ ಕಾಂಗ್ರೆಸ್‌ಗೆ ಬಹುಮತ ನೀಡಿ ಸರ್ಕಾರ ನಡೆಸಲು ಅವಕಾಶ ನೀಡಿದೆ. ಅವರು ಐದು ವರ್ಷ ಸಂಪೂರ್ಣ ಆಡಳಿತ ನಡೆಸಬೇಕು ಎನ್ನುವುದು ನಮ್ಮ ಉದ್ದೇಶ. ಆದರೆ, ಮುಖ್ಯಮಂತ್ರಿ ಸ್ಥಾನಕ್ಕಾಗಿ ಅವರ ನಡುವೆಯೇ ಕಚ್ಚಾಟ ನಡೆದಿದೆ. 2019ರಲ್ಲಿ ಸರ್ಕಾರ ನಡೆಸಲು ನಮಗೆ ಒಂಬತ್ತು ಶಾಸಕರ ಅಗತ್ಯವಿತ್ತು. ಆಗ, ಬೇರೆ ಪಕ್ಷದ ಶಾಸಕರು ನಮಗೆ ಕೈ ಜೋಡಿಸಿದರು. ಇದೀಗ, ಕಾಂಗ್ರೆಸ್ ಹೈಕಮಾಂಡ್ ರಾಜ್ಯ ಕಾಂಗ್ರೆಸ್‌ನ್ನು ನಿಯಂತ್ರಿಸಲಾಗದೆ, ಯಾರಿಗೆ ಹೆಚ್ಚು ಶಾಸಕರ ಬೆಂಬಲವಿದೆಯೋ ಅವರು ಮುಖ್ಯಮಂತ್ರಿ ಎನ್ನುವ ಸ್ಥಿತಿಗೆ ಬಂದು ಮುಟ್ಟಿದೆ. ಅದಕ್ಕಾಗಿ, ಹೀಗೆಲ್ಲ ನಡೆಯುತ್ತಿದೆ' ಎಂದು ಜೋಶಿ ವ್ಯಂಗ್ಯವಾಡಿದರು.




'ಅಧಿಕಾರಕ್ಕಾಗಿ ನಡೆಯುತ್ತಿರುವ ಕಚ್ಚಾಟದಿಂದ ಆಡಳಿತದಲ್ಲಿ ದುಷ್ಪರಿಣಾಮ ಬೀರಿದ್ದು, ಕಾಂಗ್ರೆಸ್ ಹೈಕಮಾಂಡ್ ಇದನ್ನು ತುಂಬಾ ಗಂಭೀರವಾಗಿ ಪರಿಗಣಿಸಬೇಕು.ದಿನದಿಂದ ದಿನಕ್ಕೆ ಭ್ರಷ್ಟಾಚಾರ ಹೆಚ್ಚುತ್ತಿದೆ. ಶಾಸಕರು ತಾವೇ ಪ್ರಭುಗಳು ಎನ್ನುವ ಬೇಕಾಬಿಟ್ಟಿಯಾಗಿ, ರಾಜ್ಯವನ್ನು ಲೂಟಿ ಮಾಡುತ್ತಿದ್ದಾರೆ. ವರ್ಗಾವಣೆ ಹೆಸರಲ್ಲಿ ಲೂಟಿ ನಡೆಯುತ್ತಿದೆ. ಖಾಲಿ ಹುದ್ದೆ ಭರ್ತಿ ಮಾಡಿಕೊಳ್ಳಲು ಸರ್ಕಾರದಲ್ಲಿ ಹಣವಿಲ್ಲದೆ, ಜನಸಾಮಾನ್ಯರು ಪರದಾಡುವಂತಾಗಿದೆ' ಎಂದರು.

## ಪರ್ಸಂಟೇಜ್ ಕೊಟ್ಟು ಹಣ ರಿಲೀಸ್ ಮಾಡಿಸುವ ದುಸ್ಥಿತಿ

● ಇಂತಹ ದರಿದ್ರ ಸರಕಾರ ನಾನೆಂದು ಕಂಡಿಲ್ಲ: ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ ● ಶೇ.13 ಪರ್ಸೆಂಟ್ ಕೊಟ್ಟರೆ ಹಣ ಬಿಡುಗಡೆ

• **ಉದಯವಾಹಿನಿ, ಬೆಂಗಳೂರು**

ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಬಡವರಿಗೆ 300 ಬೋರ್‌ವೆಲ್ ಕೊರೆಸಿದ್ದೇನೆ. ಆದರೆ ಇಂತಹ ದರಿದ್ರ ಸರಕಾರವನ್ನು ನಾನೆಂದು ಕಂಡಿಲ್ಲ. ಶಾಸಕರ ನಿಧಿ 4 ಕೋಟಿ ರೂ.ಮಾತ್ರ ಬಂದಿದ್ದು ಪರಿಶಿಷ್ಟರ ಕೇರಿಗಳ ಅಭಿವೃದ್ಧಿಗೆ ಬಳಸಲಾಗಿದೆ. ಯೋಜನೆಗಳ ಮಂಜೂರಾತಿಗೆ ವಿಧಾನಸೌಧ ಅಧಿಕಾರಿಗಳಿಗೆ ಶೇ.13 ಪರ್ಸೆಂಟ್ ಕೊಟ್ಟು ಹಣ ಬಿಡುಗಡೆ ಮಾಡಿಸುವ ದುಸ್ಥಿತಿ ಬಂದಿದೆ ಎಂದು ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ ಗಂಭೀರ ಆರೋಪ ಮಾಡಿದರು.



**ಎಲ್ಲದ್ದಕ್ಕೂ ಮಾಜಿ ಅಡ್ಡಿ:** ಇಲ್ಲಿನ ಪುಂಗನೂರು ಕ್ರಾಸ್‌ನಲ್ಲಿ ನಡೆದ ಜೆಡಿಎಸ್ ಪಕ್ಷದ ಕಾರ್ಯಕರ್ತರ ಸಮಾವೇಶದ ಅಧ್ಯಕ್ಷತೆ ವಹಿಸಿ ಮಾತನಾಡಿ ಕ್ಷೇತ್ರಗಳ ವಿಶೇಷ ಯೋಜನೆಗಳ ಅಡಿಯಲ್ಲಿ ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿಸಿದ್ದೆ. ಅದಕ್ಕೆ ಮಾಜಿ ಸ್ಪೀಕರ್ ರಮೇಶ್ ಕುಮಾರ್ ನಜೀರ್ ಆಹ್ಮದ್‌ರಿಂದ ಒತ್ತಡ ಹೇರಿ 26 ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ತಡೆ ಒಡ್ಡಿದ್ದಾರೆ. ತಾಲ್ಲೂಕಿನ ಸರ್ವತೋಮುಖ ಅಭಿವೃದ್ಧಿಗೆ ನಾನು ಒತ್ತು ನೀಡಿ ಕೈಗಾರಿಕೆಗಳ ಸ್ಥಾಪನೆಗೆ ಮುಂದಾದರೆ ಅದಕ್ಕೂ ಕಲ್ಲುಹಾಕಿದ್ದಾರೆ.

ಈ ಬಗ್ಗೆ ನಾನು ಕೈಗಾರಿಕೆ ಸಚಿವರನ್ನೇ ಮಾತಾಡಿಸಿದ್ದು, ಅವರು ನೇರವಾಗಿ ಮಹಾತ್ಮರ ಬಗ್ಗೆ ತಿಳಿಸಿದರು. ರೈಲ್ವೆ ಕೋಚ್ ಫಾಕ್ಟರಿಗೆ ಮೀಸಲಾಗಿದ್ದ ಸ್ಥಳವನ್ನು ಕೆಐಎಡಿಬಿ ಇಲಾಖೆ ಭೂಸ್ವಾಧೀನ ಮಾಡಿಕೊಂಡು ಆ ಸ್ಥಳದಲ್ಲಿ ಔಷಧಗಳ ತಯಾರಿಕ ಕಾರ್ಖಾನೆಗಳ ಪಾರ್ಕ್ ಸ್ಥಾಪಿಸಲು ಮುಂದಾಗಿದೆ. ಅದಕ್ಕೂ ಕೊಕ್ಕೆ ಹಾಕಿದ್ದ ಅವರಿಗೆ ತಾಲ್ಲೂಕಿನ ಅಭಿವೃದ್ಧಿ ಬೇಕಾಗಿಲ್ಲ. ಮೆಡಿಕಲ್ ಕಾಲೇಜು ಮಾಡಿಸುತ್ತೇನೆ. ಕ್ಯಾನ್ಸರ್ ಆಸ್ಪತ್ರೆ ತರುತ್ತೇನೆ ಎನ್ನುತ್ತಿದ್ದವರು ಎಲ್ಲಿ ತಂದರು ಎಂದು ಲೇವಡಿ ಮಾಡಿದರು.



### ನನಗೆ ನಿವೃತ್ತಿಯೇ ಇಲ್ಲ

ಮಾಜಿ ಸ್ಪೀಕರ್ ಮಂತ್ರಿಯಾಗಲು ಚೀಟಿಂಗ್ ಮಾಡಿ ಜನರನ್ನು ಮೋಸ ಮಾಡಿ ಅಧಿಕಾರ ಪಡೆದುಕೊಂಡಿದ್ದಾರೆ. ನಾನು ಸುಳ್ಳು ಹೇಳಿದರೆ ನನಗೆ ನಿದ್ದೆ ಬರುವುದಿಲ್ಲ. 5 ಬಾರಿ ಗೆದ್ದ ನಾನು ಸದಾ ನಿಮ್ಮ ಸೇವಕನಾಗಿರುತ್ತೇನೆ. ನಾನು ನಿವೃತ್ತಿ ಎನ್ನುವ ಪ್ರಶ್ನೆ ಇಲ್ಲ ಎಂದು ಮತ್ತೆ ಚುನಾವಣೆಗೆ ನಿಲ್ಲುವ ಅಭಿಮತ ವ್ಯಕ್ತಪಡಿಸಿದರು. ಸಂಸದ ಮಲ್ಲೇಶ್ ಬಾಬು ಮಾತನಾಡಿ, ನಾನು ಗೆದ್ದಾಗಿಂದ ಕೇಂದ್ರದಲ್ಲಿ ಸಂಬಂಧಪಟ್ಟ ಸಚಿವರನ್ನು ಭೇಟಿ ಮಾಡಿ 5 ಸೇತುವೆಗಳನ್ನು ಮಂಜೂರು ಮಾಡಿಸಿದ್ದೇನೆ. ಹೊಸಕೋಟೆಯಿಂದ ಆಂಧ್ರ ಗಡಿವರೆಗೆ ಚತುಷ್ಪತ ರಸ್ತೆ ಅಬಿವೃದ್ಧಿ ಮಂಜೂರು ಮಾಡಿಸಿದ್ದೇನೆ. ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಜೆಜೆಎಂ ಯೋಜನೆ ಅನುಷ್ಠಾನಕ್ಕೆ ಒತ್ತು ನೀಡಿ ಹಣ ಬಿಡುಗಡೆ ಮಾಡಿಸಲಾಗಿದೆ. ಇನ್ನು ತಾಲ್ಲೂಕಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರೊಂದಿಗೆ ಮಾತಾಡಿದ್ದೇನೆ. ಹೈವೆ ರಸ್ತೆ ಮತ್ತು ರೈಲ್ವೇ ಸಂಪರ್ಕ ಅಭಿವೃದ್ಧಿ ಯೋಜನೆಗಳ ಪ್ರಗತಿಗೆ ನಾನಿದ್ದೇನೆ. ಮುಂಬರುವ ಚುನಾವಣೆಗಳಲ್ಲಿ ಪಕ್ಷ ಗೆಲ್ಲುವ ಸಂಘಟನೆಯೊಂದಿಗೆ ಕಾರ್ಯಕರ್ತರು ಮುಖಂಡರು ಒತ್ತುಕೊಡಬೇಕೆಂದು ತಾಕೀತು ಮಾಡಿದರು

**26 ರಸ್ತೆಗಳ ಅಭಿವೃದ್ಧಿ ಕಾಮಗಾರಿ ತಡೆ**

ಇದೇ ವೇಳೆ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಆರ್.ನಾರಾಯಣಸ್ವಾಮಿ ಮಾತನಾಡಿದರು. ಎಂಎಲ್ಸಿ ಇಂಚರ ಗೋವಿಂದರಾಜು, ಮಾಜಿ ಶಾಸಕ ಜೆ.ಕೆ. ಕೃಷ್ಣಾರೆಡ್ಡಿ, ಮಾಜಿ ಎಂಎಲ್ಸಿ ಚೌಡರೆಡ್ಡಿ, ಸಿಎಂಆರ್ ಶ್ರೀನಾಥ್, ಬಿ.ವಿ.ಶಿವಾರೆಡ್ಡಿ, ಎಸ್‌ಎಲ್‌ಎನ್ ಮಂಜು, ಪುರಸಭ ಮಾಜಿ ಅಧ್ಯಕ್ಷ ಎಸ್.ಶ್ರೀನಿವಾಸಪ್ಪ, ಪುರಸಭ ಉಪಾಧ್ಯಕ್ಷೆ ಸುನಿತ, ಒಕ್ಕಲಿಗರ ಸಂಘದ ಅಧ್ಯಕ್ಷ ವೇಣುಗೋಪಾಲರೆಡ್ಡಿ, ನೀಲಟೂರು ಚಿನ್ನಪರೆಡ್ಡಿ, ಮನಿಗಾನಹಳ್ಳಿ ವೆಂಕಟೇಶ್ ಹಾಜರಿದ್ದರು.

| ಈ ದಿನದ ದರ | | | | |
|---|---|---|---|---|
| ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,971/Gram24ct | ₹9,140/Gram22ct | ಬೆಳ್ಳಿ: ₹115.00/Gram |

# ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಕಾಮಗಾರಿ

## ಆ. 15ರಿಂದ ಜ. 15ರವರೆಗೆ ರೈಲುಗಳ ಸಂಚಾರದಲ್ಲಿ ಬದಲಾವಣೆ, 153 ದಿನಗಳವರೆಗೆ ಸಂಚಾರ ಬದಲಾವಣೆ ಬಗ್ಗೆ ಪ್ರಕಟಣೆ

• **ಉದಯವಾಹಿನಿ, ಬೆಂಗಳೂರು**

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣದ ಯಾರ್ಡ್‌ನಲ್ಲಿ ಮೂಲಸೌಕರ್ಯ ಕಾಮಗಾರಿ ನಡೆಯುತ್ತಿರುವುದರಿಂದ ಆ.15ರಿಂದ ಜನವರಿ 15ರವರೆಗೆ 153 ದಿನಗಳ ಕಾಲ ರೈಲು ಸಂಚಾರದಲ್ಲಿ ಬದಲಾವಣೆ ಮಾಡಲಾಗಿದೆ. ಈ ಅವಧಿಯಲ್ಲಿಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ, ರೈಲುಗಳು ಎಸ್‌ಎಂವಿಟಿ ಬೆಂಗಳೂರು, ಯಶವಂತಪುರ ನಿಲ್ದಾಣಗಳಿಂದ ಪ್ರಯಾಣವನ್ನು ಆರಂಭಿಸಿ ಕೊನೆಗೊಳಿಸಲಿವೆ. ಅಲ್ಲದೆ, ಈ ರೈಲುಗಳು ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಲಿವೆ.

ಆ.15 ರಿಂದ ಜನವರಿ 15ರವರೆಗೆ ಎರ್ನಾಕುಲಂನಿಂದ ಹೊರಡುವ ಎರ್ನಾಕುಲಂ-ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸ್‌ಪ್ರೆಸ್ ರೈಲು (ರೈ.ಸಂ 12678), ಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ ಎಸ್‌ಎಂವಿಟಿ ಬೆಂಗಳೂರಿನಲ್ಲಿ(ರಾತ್ರಿ 9) ತನ್ನ ಪ್ರಯಾಣ ಕೊನೆಗೊಳಿಸಲಿದೆ. ಈ ರೈಲು ಕಾರ್ಮೆಲರಾಮ್, ಬೈಯಪ್ಪನಹಳ್ಳಿ, ಎಸ್‌ಎಂವಿಟಿ ಬೆಂಗಳೂರು ಮಾರ್ಗವಾಗಿ ಸಂಚರಿಸಲಿದ್ದು, ಬೆಂಗಳೂರು ಕಂಟೋನ್ಮೆಂಟ್, ಕೆಎಸ್‌ಆರ್ ಬೆಂಗಳೂರು ನಿಲ್ದಾಣಗಳಲ್ಲಿ ನಿಲುಗಡೆ ಇರುವುದಿಲ್ಲ. ಆ.16ರಿಂದ ಜನವರಿ 16ರವರೆಗೆ ಹೊರಡುವ ಕೆಎಸ್‌ಆರ್ ಬೆಂಗಳೂರು-ಎರ್ನಾಕುಲಂ ಡೈಲಿ ಎಕ್ಸ್‌ಪ್ರೆಸ್ ರೈಲು (ರೈ. ಸಂ 12677), ಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ ಎಸ್‌ಎಂವಿಟಿ ಬೆಂಗಳೂರಿನಿಂದ (ಬೆಳಿಗ್ಗೆ 6.10) ತನ್ನ ಪ್ರಯಾಣ ಪ್ರಾರಂಭಿಸಲಿದೆ. ಈ ರೈಲು ಎಸ್‌ಎಂವಿಟಿ ಬೆಂಗಳೂರು, ಬೈಯಪ್ಪನಹಳ್ಳಿ, ಕಾರ್ಮೆಲರಾಮ್ ಮಾರ್ಗವಾಗಿ ಸಂಚರಿಸಲಿದ್ದು, ಕೆಎಸ್‌ಆರ್ ಬೆಂಗಳೂರು, ಬೆಂಗಳೂರು ಕಂಟೋನ್ಮೆಂಟ್ ನಿಲ್ದಾಣಗಳಲ್ಲಿನಿಲುಗಡೆ ಇರುವುದಿಲ್ಲ. ಆ.15 ರಿಂದ ಜನವರಿ 15ರವರೆಗೆ ನಾಂದೇಡ್ ನಿಲ್ದಾಣದಿಂದ ಹೊರಡುವ ನಾಂದೇಡ್-ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸ್ ಪ್ರೆಸ್ (ರೈ. ಸಂ.16594), ಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ ಯಶವಂತಪುರದಲ್ಲಿ(ಬೆಳಗ್ಗೆ 4:15) ತನ್ನ ಪ್ರಯಾಣ ಕೊನೆಗೊಳಿಸಲಿದೆ.

ಈ ರೈಲು ಯಲಹಂಕ, ಲೊಟ್ಟೆಗೊಲ್ಲಹಳ್ಳಿ, ಯಶವಂತಪುರ ಮಾರ್ಗವಾಗಿ ಸಂಚರಿಸಲಿದ್ದು, ಬೆಂಗಳೂರು ಕಂಟೋನ್ಮೆಂಟ್, ಕೆಎಸ್ ಆರ್ ಬೆಂಗಳೂರು ನಿಲ್ದಾಣಗಳಲ್ಲಿನಿಲುಗಡೆ ಇರುವುದಿಲ್ಲ. ಆ.16 ರಿಂದ ಜನವರಿ 16ರವರೆಗೆ ಕೆಎಸ್‌ಆರ್‌ಬೆಂಗಳೂರು-ನಾಂದೇಡ್ ಡೈಲಿ ಎಕ್ಸ್‌ಪ್ರೆಸ್ (ರೈ.ಸಂ 16593), ಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ ಯಶವಂತಪುರದಿಂದ (ರಾತ್ರಿ 11:15) ತನ್ನ ಪ್ರಯಾಣ ಪ್ರಾರಂಭಿಸಲಿದೆ. ಈ ರೈಲು ಯಶವಂತಪುರ, ಲೊಟ್ಟೆಗೊಲ್ಲಹಳ್ಳಿ ಮತ್ತು ಯಲಹಂಕ ಮಾರ್ಗವಾಗಿ ಸಂಚರಿಸಲಿದ್ದು, ಕೆಎಸ್‌ಆರ್ ಬೆಂಗಳೂರು, ಬೆಂಗಳೂರು ಕಂಟೋನ್ಮೆಂಟ್ ನಿಲ್ದಾಣಗಳಲ್ಲಿನಿಲುಗಡೆ ಇರುವುದಿಲ್ಲ. ಆ. 15 ರಿಂದ ಜನವರಿ 15ರವರೆಗೆ ಕಣ್ಣೂರಿನಿಂದ ಹೊರಡುವ ಕಣ್ಣೂರು-ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸ್ ಪ್ರೆಸ್ (ರೈ. ಸಂ.16512), ಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ ಎಸ್‌ಎಂವಿಟಿ ಬೆಂಗಳೂರಿನಲ್ಲಿ(ಬೆಳಿಗ್ಗೆ 7:45) ತನ್ನ ಪ್ರಯಾಣ ಕೊನೆಗೊಳಿಸಲಿದೆ.


ಉದಯವಾಹಿನಿ ಚಿತ್ರ

**ರೈಲುಗಳು ಪರ್ಯಾಯ ಮಾರ್ಗ**

### ಶಿವಮೊಗ್ಗಕ್ಕೆ 2 ವಂದೇ ಭಾರತ್ ರೈಲು

**ಶಿವಮೊಗ್ಗವನ್ನು ಪ್ರಮುಖ ರೈಲು ಕೇಂದ್ರವನ್ನಾಗಿ ಮಾಡುವ ಮಹತ್ವಾಕಾಂಕ್ಷೆಯ ಯೋಜನೆಗೆ ನೀಲನಕ್ಷೆ ಸಿದ್ಧವಾಗಿದೆ. ಈ ಯೋಜನೆಯಡಿ, ಮಲೆನಾಡು ಪ್ರದೇಶದಿಂದ ದೇಶದ ಪ್ರಮುಖ ನಗರಗಳಿಗೆ ಸಂಪರ್ಕ ಕಲ್ಪಿಸುವ ಏಳು ಹೊಸ ರೈಲುಗಳು ಸಂಚಾರ ಆರಂಭಿಸಲಿವೆ. ಇದರಲ್ಲಿ ಎರಡು ಪ್ರತಿಷ್ಠಿತ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಸೇರಿವೆ. ಈ ಬೃಹತ್ ಯೋಜನೆಗೆ ಪೂರಕವಾಗಿ, ರಾಜ್ಯದ ನಾಲ್ಕನೇ ರೈಲ್ವೆ ಕೋಚಿಂಗ್ ಡಿಪೋ ಕೂಡ ಶಿವಮೊಗ್ಗದಲ್ಲಿ ಸ್ಥಾಪನೆಯಾಗಲಿದೆ. ಇದು ಶಿವಮೊಗ್ಗದ ರೈಲು ಸಂಪರ್ಕವನ್ನು ಇನ್ನಷ್ಟು ಬಲಪಡಿಸಲಿದೆ.**


**ಜಾರ್ಖಂಡಲ್ಲಿ ರೈಲ್ವೇ ಹಳಿ ಬಳಿಯೇ ಆನೆ ಮರಿಗೆ ಜನ್ಮ:** ಜಾರ್ಖಂಡ್‌ನ ಹಝಾರಿಬಾಗ್ ರೈಲು ನಿಲ್ದಾಣದ ಬಳಿ ಆನೆಯೊಂದು ಮರಿಗೆ ಜನ್ಮ ನೀಡುತ್ತಿದ್ದ ಕಾರಣ ಗೂಡ್ಸ್ ರೈಲನ್ನು ಎರಡು ಗಂಟೆಗಳ ಕಾಲ ನಿಲ್ಲಿಸಲಾಯಿತು. ಅರಣ್ಯಾಧಿಕಾರಿಗಳ ಸಮಯೋಚಿತ ಮತ್ತು ಮಾನವೀಯ ಕ್ರಮದಿಂದಾಗಿ ಆನೆಯು ಯಾವುದೇ ತೊಂದರೆಯಿಲ್ಲದೆ ಮರಿಗೆ ಜನ್ಮ ನೀಡಲು ಸಾಧ್ಯವಾಯಿತು.

### ಬೆಂಗಳೂರಿನಲ್ಲಿ ನಿಲುಗಡೆ ಇರುವುದಿಲ್ಲ

**ಈ ರೈಲು ಕುಣಿಗಲ್, ಚಿಕ್ಕಬಾಣಾವರ, ಯಶವಂತಪುರ, ಹೆಬ್ಬಾಳ, ಬಾಣಸವಾಡಿ ಮತ್ತು ಎಸ್‌ಎಂವಿಟಿ ಬೆಂಗಳೂರು ಮಾರ್ಗವಾಗಿ ಸಂಚರಿಸಲಿದ್ದು, ಕೆಎಸ್‌ಆರ್ ಬೆಂಗಳೂರಿನಲ್ಲಿನಿಲುಗಡೆ ಇರುವುದಿಲ್ಲ. ಆ. 16ರಿಂದ ಜನವರಿ 16ರವರೆಗೆ ಕೆಎಸ್‌ಆರ್‌ಬೆಂಗಳೂರು-ಕಣ್ಣೂರು ಡೈಲಿ ಎಕ್ಸ್‌ಪ್ರೆಸ್ (ರೈ. ಸಂ.16511), ಕೆಎಸ್‌ಆರ್ ಬೆಂಗಳೂರಿಗೆ ಬದಲಾಗಿ ಎಸ್‌ಎಂವಿಟಿ ಬೆಂಗಳೂರಿನಿಂದ ತನ್ನ ಪ್ರಯಾಣ ಪ್ರಾರಂಭಿಸಲಿದೆ. ಈ ರೈಲು ಎಸ್‌ಎಂವಿಟಿ ಬೆಂಗಳೂರು, ಬಾಣಸವಾಡಿ, ಹೆಬ್ಬಾಳ, ಯಶವಂತಪುರ, ಚಿಕ್ಕಬಾಣಾವರ, ಕುಣಿಗಲ್ ಮಾರ್ಗವಾಗಿ ಸಂಚರಿಸಲಿದ್ದು, ಕೆಎಸ್‌ಆರ್ ಬೆಂಗಳೂರಿನಲ್ಲಿ ನಿಲುಗಡೆ ಇರುವುದಿಲ್ಲ.**

# ಸ್ಯಾಕ್ಸೋಫೋನ್ ವಾದನ

• **ಉದಯವಾಹಿನಿ, ಬೆಂಗಳೂರು**



ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶೇಷಾದ್ರಿಪುರದ ಫ್ಲಾಟ್ ಫಾರ್ಮ್ ರಸ್ತೆಯಲ್ಲಿರುವ (ಮಂತ್ರಿ ಮಾಲ್ ಮೆಟ್ರೋ ಸ್ಟೇಷನ್ ಎದುರು) ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ವಾರ್ಷಿಕೋತ್ಸವದ ಅಂಗವಾಗಿ ಜುಲೈ 15, ಮಂಗಳವಾರ ಸಂಜೆ 6-30ಕ್ಕೆ ಕು|| ದಿವ್ಯಶ್ರೀ ರಂಗನಾಥನ್ ರವರಿಂದ ಸ್ಯಾಕ್ಸೋಫೋನ್ ವಾದನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಸಹವಾದ್ಯ: ಶ್ರೀ ಅಭಯ್ (ಪಿಟೀಲು), ಶ್ರೀ ಕಾರ್ತೀಕ್ ಪ್ರಣವ್ (ಮೃದಂಗ) ಸಾಥ್ ನೀಡಲಿದ್ದಾರೆ.

# ಭೂಸ್ವಾಧೀನಕ್ಕೆ ಮುಂದಾದರೆ ಸರ್ಕಾರ ಪತನ: ರೈತರ ಎಚ್ಚರಿಕೆ

• **ಉದಯವಾಹಿನಿ, ದೇವನಹಳ್ಳಿ**

ಭೂಸ್ವಾಧೀನ ವಿರೋಧಿಸಿ ಸಾವಿರಕ್ಕೂ ಹೆಚ್ಚು ದಿನಗಳಿಂದ ಹೋರಾಟ ನಡೆಸಿರುವ ಚನ್ನರಾಯಪಟ್ಟಣದ ರೈತರ ಪರ ರಾಜ್ಯ ಸರ್ಕಾರ ಜುಲೈ 25ರಂದು ಗಟ್ಟಿ ನಿರ್ಧಾರ ತೆಗೆದುಕೊಳ್ಳದೆ ಹೋದರೆ ಸರ್ಕಾರ ಪತನ ಆಗಬಹುದು ಎಂದು ಚನ್ನರಾಯಪಟ್ಟಣ ಭೂಸ್ವಾಧೀನ ವಿರೋಧಿ ಹೋರಾಟಗಾರರು ಎಚ್ಚರಿಕೆ ನೀಡಿದ್ದಾರೆ. ಒಂದು ವೇಳೆ ಸರ್ಕಾರ ರೈತರ ವಿರುದ್ಧ ನಿರ್ಧಾರ ಕೈಗೊಂಡರೆ ಹೋರಾಟವನ್ನು ರಾಷ್ಟ್ರಮಟ್ಟಕ್ಕೆ ಕೊಂಡೊಯ್ಯುತ್ತೇವೆ ಎಂದು ಸಂಘಟನೆಯ ಮುಖಂಡರು ದೇವನಹಳ್ಳಿ ಪತ್ರಿಕಾಗೋಷ್ಠಿಯಲ್ಲಿ ಎಚ್ಚರಿಸಿದರು.

ರೈತರ ಹೋರಾಟಕ್ಕೆ ಸ್ಪಂದಿಸಿ ಸರ್ಕಾರ ರೈತರ ಪರವಾದ ನಿಲುವು ತಾಳಬೇಕು. ಇಲ್ಲದಿದ್ದರೆ ಕಾಂಗ್ರೆಸ್ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆ. ಇದೇ ಕಾರಣಕ್ಕೆ ಸರ್ಕಾರ ಪತನವಾದರೂ ಆಗಬಹುದು ಎಂದು ಹೇಳಿದರು. ಭೂಮಿ ಕೊಡುವುದಾಗಿ ಇತ್ತೀಚೆಗೆ ಕೆಲವರು ಹೇಳಿದ್ದಾರೆ. ಹೋರಾಟ ನಿರ್ಣಾಯಕ ಹಂತ ತಲುಪಿರುವಾಗ ಈ ರೀತಿಯ ಹೇಳಿಕೆಗೆ ಸರ್ಕಾರದ ಪ್ರಚೋದನೆ ಕಾರಣ. ಚನ್ನರಾಯಪಟ್ಟಣ ಹೋಬಳಿ 13 ಹಳ್ಳಿ ರೈತರು, ಜನರು ಒಗ್ಗೂಡಿ ಹೋರಾಡುತ್ತಿರುವಾಗ ಸರ್ಕಾರ ಆ ಒಗ್ಗಟ್ಟು ಮುರಿಯಲು ಭೂಸ್ವಾಧೀನ ಪರವಾದ ತಂಡ ಹುಟ್ಟು ಹಾಕಿದೆ. ಇದು ಸರ್ಕಾರಿ ಪ್ರಾಯೋಜಿತ ದಲ್ಲಾಳಿಗಳ ತಂಡ ಎಂದು ಹೋರಾಟಗಾರರು ಟೀಕಿಸಿದರು.

# ಜಾಗತಿಕ ಮಟ್ಟದಲ್ಲಿ ಕನ್ನಡ ಸಾಹಿತ್ಯದ ಚರ್ಚೆ: ಗಿರೀಶ್ ಕಾಸರವಳ್ಳಿ

• **ಉದಯವಾಹಿನಿ, ಬೆಂಗಳೂರು**

ಬಾನು ಮುಷ್ತಾಕ್, ದೀಪಾ ಭಾಸ್ತಿ ಅವರಿಂದಾಗಿ ಕನ್ನಡ ಸಾಹಿತ್ಯ ಜಾಗತಿಕ ಮಟ್ಟದಲ್ಲಿ ಚರ್ಚೆಯಾಗುತ್ತಿದೆ. ಕನ್ನಡದ ಮೇರು ಕೃತಿಗಳು ವಿಶ್ವಮಟ್ಟದಲ್ಲಿ ಪರಿಚಯವಾಗಬೇಕಾದರೆ ಇಂಗ್ಲಿಷ್ ಭಾಷಾಂತರ ಅಗತ್ಯ ಎಂದು ಚಲನಚಿತ್ರ ನಿರ್ದೇಶಕ ಗಿರೀಶ್ ಕಾಸರವಳ್ಳಿ ಹೇಳಿದರು. ಸಪ್ನ ಬುಕ್ ಹೌಸ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 15 ಪುಸ್ತಕಗಳ ಜನಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕುವೆಂಪು ಅವರ ಮಲೆಗಳಲ್ಲಿ ಮದುಮಗಳು, ಶಿವರಾಮ ಕಾರಂತರ ಚೋಮನದುಡಿ ಸೇರಿದಂತೆ ಕನ್ನಡದ ಹಲವು ಮಹತ್ವದ ಕೃತಿಗಳು ಜಾಗತಿಕ ಮಟ್ಟದ ಪ್ರಶಸ್ತಿಗಳಿಗೆ ಅರ್ಹವಾಗಿವೆ. ಆದರೆ 600ರಿಂದ 700 ಪುಟದ ಈ ಕೃತಿಗಳು ಭಾಷಾಂತರಗೊಂಡಾಗ 150 ಪುಟಗಳಿಗೆ ಇಳಿಸಲಾಗಿದೆ. ಕನ್ನಡ ಸಾಹಿತ್ಯದ ಮೌಲ್ಯ ಜಾಗತಿಕ ಮಟ್ಟದಲ್ಲಿಸಿಗಬೇಕಾದರೆ ಸಮರ್ಪಕವಾಗಿ ಭಾಷಾಂತರ ಮಾಡಬೇಕು ಎಂದರು.

ಇತ್ತೀಚೆಗೆ ಸೃಜನಶೀಲ ಸಾಹಿತ್ಯಕ್ಕೆ ಸಿಗುತ್ತಿರುವ ಮಹತ್ವ ವೈಚಾರಿಕ ಸಾಹಿತ್ಯ, ವಿಮರ್ಶೆಗೂ ಸಿಗುತ್ತಿದೆ. ಪುಸ್ತಕಗಳನ್ನು ಓದುವವರ ಸಂಖ್ಯೆ ಕಡಿಮೆ ಆಗುತ್ತಿದೆ ಎನ್ನುವುದರ ನಡುವೆ ಒಂದೇ ವೇದಿಕೆಯಲ್ಲಿ 15 ಪುಸ್ತಕಗಳು ಜನಾರ್ಪಣೆ ಆಗುತ್ತಿರುವುದು ಪುಸ್ತಕ ಓದುವವರ ಸಂಖ್ಯೆಯು ಹೆಚ್ಚುತ್ತಿದೆ ಎಂಬುದಕ್ಕೆ ಸಾಕ್ಷಿ ಎಂದು ಹೇಳಿದರು.


# ಅಕ್ರಮವಾಗಿ ಭಾರತೀಯ ಚುನಾವಣಾ ಗುರುತಿನ ಚೀಟಿ ನೇಪಾಳಿ ಮಹಿಳೆ ಬಂಧನ

• **ಉದಯವಾಹಿನಿ, ಬೆಂಗಳೂರು**

ಅಕ್ರಮವಾಗಿ ಭಾರತೀಯ ಚುನಾವಣಾ ಗುರುತಿನ ಚೀಟಿ ಹೊಂದಿದ್ದ ನೇಪಾಳಿ ಮಹಿಳೆಯನ್ನು ಪೊಲೀಸರು ಬಂಧಿಸಿದ್ದಾರೆ. ವಿಮಾನ ನಿಲ್ದಾಣದ ವಲಸೆ ವಿಭಾಗದ ಅಧಿಕಾರಿ ಶೈಲೇಂದ್ರ ಕುಮಾರ್ ಮೀನಾ ಅವರ ದೂರಿನ ಮೇರೆಗೆ ರೇಖಾ ಎಂಬುವರನ್ನು ಬಂಧಿಸಿ, ವಿಚಾರಣೆ ನಡೆಸುತ್ತಿದ್ದಾರೆ. ಜುಲೈ 10ರಂದು ರೇಖಾ ಅವರು ನೇಪಾಳದಿಂದ ವಿಮಾನದ ಮೂಲಕ ಬೆಂಗಳೂರಿಗೆ ಬಂದಿದ್ದಾರೆ. ವಿಮಾನ ನಿಲ್ದಾಣದಲ್ಲಿ ವಲಸಿಗರ ವಿಭಾಗದ ಅಧಿಕಾರಿಗಳು ಮಹಿಳೆಯ ದಾಖಲೆಗಳ ಪರಿಶೀಲನೆ ನಡೆಸಿದ ವೇಳೆ ನೇಪಾಳ ಹಾಗೂ ಭಾರತೀಯ ಚುನಾವಣಾ ಗುರುತಿನ ಚೀಟಿಗಳು ಪತ್ತೆಯಾಗಿವೆ. ಈ ಬಗ್ಗೆ ಪ್ರಶ್ನಿಸಿದಾಗ ಹುಣಸೇಮಾರನಹಳ್ಳಿಯ ಗ್ರಾಮ ಪಂಚಾಯಿತಿ ಅಧಿಕಾರಿಗಳು ಗುರುತಿನ ಚೀಟಿ ಮಾಡಿಕೊಟ್ಟಿದ್ದಾರೆ ಎಂದು ಮಹಿಳೆ ಹೇಳಿದ್ದಾಳೆ. ನೇಪಾಳ ದೇಶದ ನಾಗರಿಕರಾಗಿದ್ದರೂ ಭಾರತದ ಗುರುತಿನ ಚೀಟಿಯನ್ನು ಅಕ್ರಮವಾಗಿ ಪಡೆದುಕೊಂಡಿರುವ ಈಕೆ ವಿರುದ್ಧ ಸೂಕ್ತ ಕ್ರಮಕ್ಕೆಗೊಳ್ಳಬೇಕು ಎಂದು ಅಧಿಕಾರಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

# ಉಗ್ರರಿಗೆ ನೆರವು ನೀಡಿದ ಆರೋಪ; ಹಣದ ಮೂಲ ಪತ್ತೆಗೆ ತನಿಖೆ

• **ಉದಯವಾಹಿನಿ, ಬೆಂಗಳೂರು**




ಕೇಂದ್ರ ಕಾರಾಗೃಹದಲ್ಲಿ ಉಗ್ರರಿಗೆ ನೆರವು ನೀಡಿದ ಆರೋಪದಡಿ ಬಂಧಿಸಲಾಗಿರುವ ಮೂವರು ಆರೋಪಿಗಳ ವಿಚಾರಣೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ಅಧಿಕಾರಿಗಳು ತೀವ್ರಗೊಳಿಸಿದ್ದಾರೆ. ಪರಪ್ಪನ ಅಗ್ರಹಾರ ಜೈಲಿನ ಮನೋವೈದ್ಯ ನಾಗರಾಜ್, ಸಶಸ್ತ್ರ ಮೀಸಲು ಪಡೆಯ ಎಎಸ್‌ಐ ಚಾಂದ್ ಪಾಷಾ ಹಾಗೂ ವಿದೇಶದಲ್ಲಿ ತಲೆಮರೆಸಿಕೊಂಡಿರುವ ಆರೋಪಿ ಜುನೈದ್ ಅಹಮದ್‌ನ ತಾಯಿ ಅನೀಸ್ ಫಾತಿಮಾ ಅವರ ಬ್ಯಾಂಕ್ ಖಾತೆಗಳನ್ನು ಪರಿಶೀಲಿಸಿರುವ ಎನ್‌ಐಎ, ಲಕ್ಷಾಂತರ ರೂಪಾಯಿ ವಹಿವಾಟು ನಡೆಸಿರುವುದನ್ನು ಪತ್ತೆ ಹಚ್ಚಿದೆ. ಮೂವರು ಆನ್‌ಲೈನ್, ನಗದು, ಕೊಡುಗೆ ರೂಪದಲ್ಲಿ ಸ್ವೀಕರಿಸಿದ್ದಾರೆ. ಉಗ್ರ ಟಿ.ನಾಸೀರ್ ಸೂಚನೆ ಮೇರೆಗೆ ಹಣ ಪಡೆದಿರುವುದು ಗೊತ್ತಾಗಿದೆ. ಚಾಂದ್ ಪಾಷಾ ಅವರು ತನ್ನ ಖಾತೆ ಮಾತ್ರವಲ್ಲದೇ ಪುತ್ರನ ಖಾತೆಗೂ ಹಣ ಹಾಕಿಸಿಕೊಂಡಿದ್ದಾರೆ. ನಾಗರಾಜು ಸಹಾಯಕಿ ಪವಿತ್ರಾ ಅವರ ಖಾತೆಯಲ್ಲಿ ಸುಮಾರು 70 ಲಕ್ಷ ವಹಿವಾಟು ನಡೆದಿರುವುದು ಪತ್ತೆಯಾಗಿದೆ. ದೇಶ, ವಿದೇಶಗಳಿಂದ ಆರೋಪಿಗಳಿಗೆ ಹಣ ಸಂದಾಯವಾಗಿರುವ ಬಗ್ಗೆ ಶಂಕೆ ವ್ಯಕ್ತವಾಗಿದೆ. ಹಾಗಾಗಿ ಎನ್‌ಐಎ ಅಧಿಕಾರಿಗಳು ಈ ಹಣದ ಮೂಲ ಪತ್ತೆ ಮಾಡುವ ನಿಟ್ಟಿನಲ್ಲಿ ತನಿಖೆ ಆರಂಭಿಸಿದ್ದಾರೆ. ಚಾಂದ್ ಪಾಷಾ ಮನೆಯಲ್ಲಿ ಎನ್‌ಐಎ ಶೋಧ ನಡೆಸಿದ ವೇಳೆ ಪತ್ತೆಯಾದ ಹಾರ್ಡ್‌ಡಿಸ್ಕ್, ಪೆನ್‌ಡ್ರೈವ್ ಹಾಗೂ ಡೈರಿಯಲ್ಲಿ ಮಹತ್ವದ ಮಾಹಿತಿ ಲಭ್ಯವಾಗಿದೆ. ಜೈಲಿಗೆ ಬರುವ ಶಂಕಿತ ಉಗ್ರರು, ಕೈದಿಗಳು ಹಾಗೂ ಪ್ರಭಾವಿಗಳಿಗೆ 2012ರಿಂದ ಮೊಬೈಲ್ ಸೇರಿ ಇತರೆ ವಸ್ತುಗಳನ್ನು ಪೂರೈಸಿ ಲಕ್ಷಾಂತರ ರೂಪಾಯಿ ಸಂಪಾದನೆ ಮಾಡಿರುವುದು ಎನ್‌ಐಎ ವಿಚಾರಣೆ ಗೊತ್ತಾಗಿದೆ. ಅಕ್ರಮ ಸಂಪಾದನೆಯಿಂದ ಬೇರೆ ಕಡೆ ಆಸ್ತಿ, ನಿವೇಶನ ಹೊಂದಿರುವ ಬಗ್ಗೆ ಎನ್‌ಐಎ ಪರಿಶೀಲನೆ ನಡೆಸುತ್ತಿದೆ.

# ಪೊಲೀಸರ ಕರ್ತವ್ಯಕ್ಕೆ ಅಡ್ಡಿ ನಕಲಿ ವಕೀಲನ ಬಂಧನ

• **ಉದಯವಾಹಿನಿ, ಬೆಂಗಳೂರು**



ಮಹಿಳೆಯರಿಗೆ 30 ಕೋಟಿಗೂ ಹೆಚ್ಚು ವಂಚನೆ ಮಾಡಿದ್ದ ಆರೋಪಿಯ ಪರ ಬಂದು ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದ ನಕಲಿ ವಕೀಲರೊಬ್ಬರನ್ನು ಬಸವೇಶ್ವರ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ರಾಜಾಜಿನಗರ 4ನೇಹಂತದ ನಿವಾಸಿ ಯೋಗಾನಂದ್ (52) ಅವರನ್ನು ಬಂಧಿಸಿ, ನ್ಯಾಯಾಂಗ ವಶಕ್ಕೆ ನೀಡಲಾಗಿದೆ.

ಆರೋಪಿ ಸವಿತಾ ಪರ ವಕೀಲನೆಂದು ಹೇಳಿಕೊಂಡು ಬಸವೇಶ್ವರ ನಗರ ಠಾಣೆ ಬಳಿ ತೆರಳಿದ್ದ ಯೋಗಾನಂದ್, ಯಾವ ಆಧಾರದಲ್ಲಿ ಬಂಧಿಸಿದ್ದೀರಿ? ಎಂದು ಪೊಲೀಸರನ್ನು ಪ್ರಶ್ನಿಸಿದ್ದರು. ನಂತರ ಠಾಣೆಯಲ್ಲಿದ್ದ ಸವಿತಾ ಅವರಿಂದ ಮನೆ ಬೀಗವನ್ನು ಪಡೆದುಕೊಂಡು ಹೋಗಲು ಯತ್ನಿಸಿದ್ದರು.

ಬೀಗವನ್ನು ತೆಗೆದುಕೊಂಡು ಹೋಗಲು ಸಾಧ್ಯವಿಲ್ಲ ಎಂದು ತಡೆದಾಗ ಅವರು ಪೊಲೀಸ್ ಸಿಬ್ಬಂದಿಗೆ ಬೆದರಿಸಿದ್ದರು. ಇದೇ ವೇಳೆ ಸ್ಥಳದಲ್ಲಿದ್ದ ಕೆ.ಪಿ.ಅಗ್ರಹಾರ ಠಾಣೆಯ ಇನ್‌ಸ್ಪೆಕ್ಟರ್ ಗೋವಿಂದರಾಜ್, ಈ ಹಿಂದೆ ತಾವು ಬಸವೇಶ್ವರ ನಗರ ಠಾಣೆಯಲ್ಲಿ ಕರ್ತವ್ಯದಲ್ಲಿದ್ದ ವೇಳೆ ವೃದ್ಧೆಯ ಮೇಲೆ ಹಲ್ಲೆಗೈದ ಪ್ರಕರಣದಲ್ಲಿ ಯೋಗಾನಂದ್ ಬಂಧಿಸಿದ್ದನ್ನು ನೆನಪಿಸಿಕೊಂಡರು.

ಆರೋಪಿಯನ್ನು ವಶಕ್ಕೆ ಪಡೆದು ವಿಚಾರಿಸಿದಾಗ ವಕೀಲ ಅಲ್ಲ ಎಂಬುದು ಗೊತ್ತಾಗಿದೆ. ಈತ ಸವಿತಾಳ ಕಾಲೇಜು ಸಹಪಾಠಿಯಾಗಿದ್ದ ಎಂಬುದು ವಿಚಾರಣೆ ವೇಳೆ ಗೊತ್ತಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಪ್ರಕರಣದ ಹಿನ್ನೆಲೆ:** ಪ್ರಭಾವಿ ರಾಜಕಾರಣಿಗಳ ಸಂಬಂಧಿ ಸೋಗಿನಲ್ಲಿ ಕಡಿಮೆ ಬೆಲೆಗೆ ಚಿನ್ನ ಕೊಡಿಸುವುದಾಗಿ ನಂಬಿಸಿ ಮಹಿಳೆಯರಿಗೆ 30 ಕೋಟಿಗೂ ಹೆಚ್ಚು ವಂಚನೆ ಮಾಡಿದ್ದ ಸವಿತಾ(49), ಆಕೆಯ ಸಹಚರನಾದ ಪುನೀತ್ (28) ಎಂಬಾತನನ್ನು ಬಸವೇಶ್ವರ ನಗರ ಠಾಣೆ ಪೊಲೀಸರು ಬಂಧಿಸಿದ್ದರು.

ಶ್ರೀಮಂತ ಮಹಿಳೆಯರನ್ನು ಪರಿಚಯಿಸಿಕೊಳ್ಳುತ್ತಿದ್ದ ಆರೋಪಿ, ಅವರನ್ನು ಕಿಟ್ಟಿ ಪಾರ್ಟಿಗೆ ಆಹ್ವಾನಿಸುತ್ತಿದ್ದಳು. ಪ್ರಭಾವಿ ರಾಜಕಾರಣಿಗಳು ಸಂಬಂಧಿಕರು, ಇನ್ನೂ ಹಲವರ ಪರಿಚಯವಿದೆ ಎಂದು ನಂಬಿಸಿದ್ದಳು. ಅಲ್ಲದೇ, ತನ್ನ ಪತಿ, ಕೆಲ ಸಂಬಂಧಿಕರು ವಿದೇಶದಲ್ಲಿ ನೆಲಸಿದ್ದು, ಅಲ್ಲಿಂದ ಕಡಿಮೆ ಬೆಲೆಗೆ ಚಿನ್ನ ತರಿಸಿ ಕೊಡುವುದಾಗಿ, ಉದ್ಯಮದಲ್ಲಿ ಹೂಡಿಕೆ ಮಾಡಿದರೆ ಲಾಭ ನೀಡುವುದಾಗಿ ಹಣ ಪಡೆದು ವಂಚಿಸಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.

**ಸವಿತಾಳ ಮಾತು ನಂಬಿ 95 ಲಕ್ಷ ನೀಡಿ ವಂಚನೆಗೊಳಗಾಗಿದ್ದ ಕುಸುಮಾ ಎಂಬುವವರು ಠಾಣೆಗೆ ದೂರು ನೀಡಿದ್ದರು. ಆರೋಪಿಯು 20ಕ್ಕೂ ಹೆಚ್ಚು ಮಹಿಳೆಯರಿಗೆ ಸುಮಾರು 30 ಕೋಟಿ ವಂಚಿಸಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದ್ದು, ಸವಿತಾ, ಪುನೀತ್‌ನನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.**

# 185 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಣೆ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಉದ್ಯೋಗ ಪಡೆದ 185 ಅಭ್ಯರ್ಥಿಗಳಿಗೆ ಕೇಂದ್ರ ಸಣ್ಣ, ಮಧ್ಯಮ ಉದ್ಯಮಗಳು ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಅವರು ನೇಮಕಾತಿ ಪತ್ರಗಳನ್ನು ವಿತರಿಸಿದರು. ನಂತರ ಮಾತನಾಡಿದ ಅವರು, ರಾಷ್ಟ್ರನಿರ್ಮಾಣದಲ್ಲಿ ಸರ್ಕಾರಿ ನೌಕರರ ಪಾತ್ರ ಪ್ರಮುಖವಾಗಿದೆ. ಜ್ಞಾನ, ಕೌಶಲ ಮತ್ತು ಕಠಿಣ ಪರಿಶ್ರಮ, ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವ ಮೂಲಕ ಇಲಾಖೆಗಳ ಬೆಳವಣಿಗೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಉದ್ಯೋಗ ಸೃಷ್ಟಿಗೆ ಹೆಚ್ಚು ಆದ್ಯತೆ ನೀಡುತ್ತಿದ್ದಾರೆ. ದೇಶದ ಯುವಜನರ ಸಬಲೀಕರಣ ಮತ್ತು ದೇಶ ನಿರ್ಮಾಣದಲ್ಲಿ ಅವರ ಪಾಲ್ಗೊಳ್ಳುವಿಕೆಯನ್ನು ಅರ್ಥಪೂರ್ಣ ಅವಕಾಶ ನೀಡುವಲ್ಲಿ ಉದ್ಯೋಗ ಮೇಳವು ಮಹತ್ವದ ಪಾತ್ರ ವಹಿಸುತ್ತಿದೆ. ದೇಶದಾದ್ಯಂತ ಇದುವರೆಗೆ 10 ಲಕ್ಷಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರೈಲ್ವೆ ಇಲಾಖೆ (61), ಸಾರ್ವಜನಿಕ ವಲಯದ ಬ್ಯಾಂಕ್‌ಗಳಲ್ಲಿ (46), ಬಿಎಸ್‌ಎಫ್, ಸಿಐಎಸ್‌ಎಫ್‌ನಲ್ಲಿ (14), ಅಂಚೆ ಇಲಾಖೆಯ (12), ಆದಾಯ ತೆರಿಗೆ ಇಲಾಖೆ (7), ಆಯುಷ್ ಇಲಾಖೆ (2), ನಿಮ್ಹಾನ್ಸ್ (10), ಭಾರತೀಯ ಪುರಾತತ್ವ ಇಲಾಖೆ (11), ಮರ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆ (9) ಮತ್ತು ಕೇಂದ್ರ ತೆರಿಗೆ (ಸಿಜಿಎಸ್‌ಟಿ) (13) ಅಭ್ಯರ್ಥಿಗಳು ಸೇರಿದಂತೆ ಒಟ್ಟು 185 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು.

# ಮುಜರಾಯಿ ಸುಪರ್ದಿಗೆ ಗಾಳಿ ಆಂಜನೇಯ ದೇವಸ್ಥಾನ ಕೋರ್ಟ್ ಮೊರೆಹೋದ ಆಡಳಿತ ಮಂಡಳಿ

• **ಉದಯವಾಹಿನಿ, ಬೆಂಗಳೂರು**

ನಗರದ ಸುಪ್ರಸಿದ್ಧ ಗಾಳಿ ಆಂಜನೇಯಸ್ವಾಮಿ ದೇವಾಲಯ ಮುಜರಾಯಿ ಇಲಾಖೆ ಸುಪರ್ದಿಗೆ ಬಂದಿದೆ. ದೇವಾಲಯದ ಆಡಳಿತವನ್ನು ಸರ್ಕಾರ ತನ್ನ ಅಧೀನಕ್ಕೆ ಪಡೆದಿದ್ದು, ಧಾರ್ಮಿಕ ದತ್ತಿ ಇಲಾಖೆಯ ಅಧಿಕಾರಿಗಳು ಇನ್ಮುಂದೆ ದೇವಾಲಯದ ಉಸ್ತುವಾರಿಯ ನಡೆಸಿಕೊಂಡು ಹೋಗಲಿದೆ. ದೇವಾಲಯದ ಆಡಳಿತ ಮಂಡಳಿ ಈಗ ಬೇರೆ ದಾರಿ ಕಾಣದೇ ಸರ್ಕಾರದ ನಿರ್ಧಾರದ ವಿರುದ್ಧ ಕೋರ್ಟ್ ಮೊರೆಹೋಗಲು ಸಜ್ಜಾಗಿದೆ.

ಈಗಾಗಲೇ ಧಾರ್ಮಿಕ ದತ್ತಿ ಇಲಾಖೆ ದೇವಾಲಯದ ನಿರ್ವಹಣೆಗೆ ಕಾರ್ಯಪಾಲಕ ಅಧಿಕಾರಿಯನ್ನು ನೇಮಕ ಮಾಡಿದೆ. ಇಓ ನಾರಾಯಣಸ್ವಾಮಿ ಅಧಿಕಾರ ವಹಿಸಿಕೊಂಡು ದೇವಾಲಯದ ಅಧಿಕಾರ ಪಡೆದುಕೊಂಡಿದ್ದಾರೆ. ಸರ್ಕಾರದ ಈ ನಿರ್ಧಾರವನ್ನು ದೇವಾಲಯದ ಆಡಳಿತ ಮಂಡಳಿ ಖಂಡಿಸಿದೆ. ನಮ್ಮ ಪೂರ್ವಿಕರಿಂದ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯತ್ವ ದೊರತಿದ್ದು, ಇಷ್ಟು ವರ್ಷ ದೇವಸ್ಥಾನದ ಅಭಿವೃದ್ಧಿಗಾಗಿ ಶ್ರಮಿಸಿದ ನಮಗೆ ಅನ್ಯಾಯವಾಗಿದೆ ಎಂದು ಗ್ರಾಮಸ್ಥರು, ಟ್ರಸ್ಟಿಗಳು ಆಕ್ರೋಶ ಹೊರಹಾಕುತ್ತಿದ್ದಾರೆ.



**ಕೋರ್ಟ್ ಮೊರೆ ಹೋಗಲು ಸಜ್ಜು**

**ಸಮಸ್ಯೆ ಆಗದಂತೆ ಸರ್ಕಾರ ಮುನ್ನೆಚ್ಚರಿಕೆ**

**ಈಗಾಗಲೇ ಧಾರ್ಮಿಕ ದತ್ತಿ ಇಲಾಖೆ ದೇವಸ್ಥಾನದ ಸಂಪೂರ್ಣ ಆಡಳಿತವನ್ನ ತನ್ನ ಅಧೀನಕ್ಕೆ ತೆಗೆದುಕೊಂಡಿದೆ. ಸೋಮವಾರ ಹೈಕೋರ್ಟ್‌ನಲ್ಲಿ ಅರ್ಜಿ ಹಾಕಿ ಸರ್ಕಾರದ ವಿರುದ್ಧ ಕಾನೂನಿನ ಹೋರಾಟ ಮಾಡಲು ಟ್ರಸ್ಟಿಗಳು ಸಜ್ಜಾಗಿದ್ದಾರೆ. ಆಡಳಿತ ಮಂಡಳಿಯ ಕಿತ್ತಾಟದ ಮಧ್ಯೆ ಪ್ರತಿನಿತ್ಯ ಸಾವಿರಾರು ಭಕ್ತರು ಗಾಳಿ ಆಂಜನೇಯನ ದರ್ಶನ ಪಡೆಯುತ್ತಾರೆ. ಭಕ್ತರಿಗೆ, ಅಲ್ಲಿನ ಪುರೋಹಿತ ವರ್ಗಕ್ಕೆ ಯಾವುದೇ ಸಮಸ್ಯೆ ಆಗದಂತೆ ಸರ್ಕಾರ ಮುನ್ನೆಚ್ಚರಿಕೆ ವಹಿಸಿದೆ.**

# ಬ್ರಿಟಿಷ್ ಕಾಲದ ಕಾಯ್ದೆ ಬದಲಾಯಿಸಲು ಚಿಂತನೆ

• **ಉದಯವಾಹಿನಿ, ಬೆಂಗಳೂರು**

ಬ್ರಿಟಿಷರ ಕಾಲದ ಕಾರ್ಮಿಕ ಕಾನೂನುಗಳನ್ನು ಬದಲಾಯಿಸಿ ನಾಲ್ಕು ಸಂಹಿತೆಗಳನ್ನು ರೂಪಿಸಲಾಗುತ್ತಿದೆ. ಅಸಂಘಟಿತ ಕಾರ್ಮಿಕರಿಗೂ ಸಾಮಾಜಿಕ ಭದ್ರತೆಯನ್ನು ಒದಗಿಸುವುದಕ್ಕಾಗಿ ಒಂದು ಸಂಹಿತೆ ಇರಲಿದೆ ಎಂದು ಕೇಂದ್ರ ಸೂಕ್ಷ್ಮ, ಸಣ್ಣ, ಮಧ್ಯಮ ಉದ್ಯಮಗಳ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದರು. ಬಿ.ಪ್ಯಾಕ್, ಸಿಜಿಐ ಹಮ್ಮಿಕೊಂಡಿದ್ದ ಮಹಿಳೆಯರು ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತ ಆಟೊ ಚಾಲನಾ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬ್ರಿಟಿಷರು ಇಲ್ಲಿನ ದುಡಿಮೆಗಾರರನ್ನು ಕಾರ್ಮಿಕರೆಂಬಂತೆ ನೋಡದೆ ಗುಲಾಮರು ಎಂದು ಭಾವಿಸಿದ್ದರು. ಅವರು ರೂಪಿಸಿದ 29 ಕಾರ್ಮಿಕ ಕಾಯ್ದೆಗಳಿವೆ. ಅವೆಲ್ಲವನ್ನು ಕೇಂದ್ರ ಸರ್ಕಾರ ಒಟ್ಟುಗೂಡಿಸಿ ನಾಲ್ಕು ಸಂಹಿತೆ ಮಾಡಲಿದೆ ಎಂದು ವಿವರಿಸಿದರು. ದೇಶದಲ್ಲಿ 90 ಕೋಟಿ ಜನರು ದುಡಿಯುವವರಾಗಿದ್ದಾರೆ. ಅದರಲ್ಲಿ ಶೇ 10ರಷ್ಟು ಮಾತ್ರ ಸರ್ಕಾರಿ ಅಥವಾ ಖಾಸಗಿ ಸಂಘಟಿತ ನೌಕರರು. ಉಳಿದವರು ಅಸಂಘಟಿತ ಕಾರ್ಮಿಕರಾಗಿದ್ದಾರೆ. ಮಹಿಳೆಯರು ಆಟೊ ಚಾಲಕರಾದರೆ ಮಹಿಳಾ ಪ್ರಯಾಣಿಕರು ಧೈರ್ಯವಾಗಿ ರಾತ್ರಿಯೂ ಸಂಚರಿಸಲು ಸಾಧ್ಯ ಎಂದರು.


ಉದಯವಾಹಿನಿ ಚಿತ್ರ

**ಈಗ ಮಹಾನಗರಗಳಲ್ಲಿ ಗಿಗ್ ಕಾರ್ಮಿಕರ ಸಂಖ್ಯೆ ಹೆಚ್ಚಾಗುತ್ತಿದೆ. ಆನ್‌ಲೈನ್‌ನಲ್ಲಿ ಬುಕ್ಕಿಂಗ್ ಮಾಡಿದಾಗ ಮನೆಗೆ ತಲುಪಿಸುವ ಕಾರ್ಮಿಕರು ಅವರು. ಇನ್ನು 10 ವರ್ಷದಲ್ಲಿ ಗಿಗ್ ಕಾರ್ಮಿಕರ ಸಂಖ್ಯೆ 25 ಕೋಟಿ ದಾಟಲಿದೆ. ಗಿಗ್ ಕಾರ್ಮಿಕರು, ಆಟೊ ಚಾಲಕರೂ ಸೇರಿದಂತೆ ಎಲ್ಲಾ ಅಸಂಘಟಿತ ಕಾರ್ಮಿಕರಿಗೂ ಸಂಘಟಿತ ನೌಕರರಿಗೆ ಸಿಗುವ ಸಾಮಾಜಿಕ ಭದ್ರತೆ ಸಿಗಬೇಕು ಎಂಬುದು ಕೇಂದ್ರ ಸರ್ಕಾರದ ಚಿಂತನೆ ಎಂದು ಹೇಳಿದರು.**

# ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ ಜನಜಾಗೃತಿ

• **ಉದಯವಾಹಿನಿ, ಬೆಂಗಳೂರು**

ಅಕ್ರಮ ಮುಸ್ಲಿಂ ವಲಸಿಗರು ಭಯೋತ್ಪಾದನೆ, ಜನೋತ್ಪಾದನೆಯಲ್ಲಿ ನಿರಂತರವಾಗಿ ತೊಡಗಿದ್ದಾರೆ. ದೇಶದಿಂದ ತೊಲಗಿಸಿದರೆ ಮಾತ್ರ ದೇಶಕ್ಕೂ, ಹಿಂದೂಗಳಿಗೂ ಉಳಿಗಾಲ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಗುಡುಗಿದ್ದಾರೆ. ಬೆಂಗಳೂರಿನ ಮಹಾದೇವಪುರ ಕ್ಷೇತ್ರದಲ್ಲಿ ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ ಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತಾನಾಡಿದರು.

ಈ ವೇಳೆ, ರೋಹಿಂಗ್ಯಾ ಮುಸ್ಲಿಮರು, ಪಾಕ್ ಮುಸ್ಲಿಮರು ಭಾರತಕ್ಕೆ ಬರಲಿ ಎನ್ನುವ ಮನಸ್ಥಿತಿ ಕಾಂಗ್ರೆಸ್ ನವರದ್ದು. ನಮ್ಮ ಮಹಿಳೆಯರಿಗೆ ಒಂದು ಮಗುವನ್ನು ಹೆರೋದ್ರೊಳಗೆ ಸೊಂಟ ಬಿದ್ದು ಹೋಗುತ್ತದೆ. ಆದರೆ ಅಕ್ರಮ ಮುಸ್ಲಿಂ ವಲಸಿಗರು ಪುರುಸೊತ್ತಿಲ್ಲದೇ ಮಕ್ಕಳನ್ನು ಹೆರುತ್ತಲೇ ಇರುತ್ತಾರೆ. ಈ ವಲಸಿಗರು ಭಾರತದಲ್ಲಿದ್ರೆ ನಮ್ಮ ಜಾಗ ಕಬಳಿಸ್ತಾರೆ. ಭಯೋತ್ಪಾದನೆ ಜತೆಗೆ ಪುರುಸೊತ್ತಿಲ್ಲದೇ ಜನೋತ್ಪಾದನೆ ಮಾಡ್ತಾರೆ.




ಹಿಂದೂಗಳಿಗೆ ಇರೋದು ಒಂದೇ ದೇಶ, ನಮಗೆ ಯಾರೂ ಆಶ್ರಯ ಕೊಡಲ್ಲ. ಭಾರತವನ್ನು ಭಾರತವಾಗಿ ಉಳಿಸಿಕೊಳ್ಳಬೇಕು ಎಂದಿದ್ದಾರೆ.

ಅಕ್ರಮ ಬಾಂಗ್ಲಾದವರು ಕಡಿಮೆ ಹಣಕ್ಕೆ ಸಿಗ್ತಾರೆ ಎಂದು ಕೆಲಸಕ್ಕೆ ಸೇರಿಸಿಕೊಳ್ಳಬೇಡಿ. ಅವರು ಬಂದಿರೋ ಉದ್ದೇಶವೇ ಬೇರೆ. ನಾವು ಎಚ್ಚೆತ್ತುಕೊಳ್ಳಬೇಕು. ಮೋದಿಯವರನ್ನು ಎರಡು ಬಾರಿ ಬಹುಮತದ ಮೂಲಕ ಗೆಲ್ಲಿಸಿದ್ರಿ. ಕಳೆದ ಬಾರಿ ನೀವು ಸ್ವಲ್ಪ ಸೋಮಾರಿ ಆಗಿದ್ದಕ್ಕೆ 242 ಸೀಟು ನೀಡಿದ್ರಿ.ಮತ್ತೊಮ್ಮೆ ನಾವೆಲ್ಲರೂ ಎಚ್ಚೆತ್ತುಕೊಳ್ಳಬೇಕಿದೆ. ನಮ್ಮದು ಹಿಂದೂ ರಾಷ್ಟ್ರ. ನಮಗೆ ಬೇರೆ ಎಲ್ಲೂ ನೆಲೆ ಇಲ್ಲ. ಹೀಗಾಗಿ ನಾವು ನಮ್ಮ ದೇಶ ಉಳಿಸಬೇಕು. ಈ ಹೋರಾಟ ರಾಜಕೀಯ ಕಾರಣಕ್ಕೆ ಅಲ್ಲ ಎಂದಿದ್ದಾರೆ.

**ಬಾಂಗ್ಲಾದಲ್ಲಿ ಸ್ವಾತಂತ್ರ್ಯ ಬಂದಾಗ 24% ಮುಸ್ಲಿಮರು ಇದ್ರು, ಇವತ್ತು ಎಷ್ಟಿದ್ದಾರೆ? ಪಾಕ್‌ನಲ್ಲಿ ಹಿಂದೂಗಳು ಮೊದಲು 15% ಇದ್ರು, ಈಗ 2% ಇದ್ದಾರೆ. ಅಲ್ಲಿ ಹಿಂದೂಗಳನ್ನು ಓಡಿಸಿ ಈಗ ಆ ಮುಸ್ಲಿಮರು ನಮ್ಮಲ್ಲಿ ಬಂದಿದ್ದಾರೆ. ಇಂಥವರು ನಮ್ಮ ದೇಶ, ರಾಜ್ಯದಲ್ಲಿ ಇರಬಾರದು. ಪಕ್ಕದಲ್ಲಿ ಇರೋ ದೇಶಗಳ ಮುಸ್ಲಿಮರು ಭಾರತಕ್ಕೆ ಬಂದ್ರೆ, ನಾವೆಲ್ಲಿ ಹೋಗಬೇಕು? ಈ ಮುಸ್ಲಿಂ ವಲಸಿಗರಿಗೆ ಜಗತ್ತಿನ 57 ಮುಸ್ಲಿಂ ದೇಶಗಳು ಯಾಕೆ ಆಶ್ರಯ ಕೊಡ್ತಿಲ್ಲ? ಯಾಕೆ ಇವರಿಗೆ ಭಾರತವೇ ಆಶ್ರಯ ಕೊಡಬೇಕು ಎಂದು ಅವರು ಪ್ರಶ್ನಿಸಿದ್ದಾರೆ.**

# ದಲಿತ ವಿದ್ಯಾರ್ಥಿಗಳ ಹಿತರಕ್ಷಣೆಯ ಆಶಯ

## ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ತಾರತಮ್ಯ ತಡೆಗೆ ಹೊಸ ಕಾಯಿದೆ ಜಾರಿ, ಘನತೆಯ ಹಕ್ಕಿನ ನಿರಾಕರಣೆಯೂ ಜಾಮೀನು ರಹಿತ ಅಪರಾಧ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಸಾರ್ವಜನಿಕ, ಖಾಸಗಿ, ಡೀಮ್ಡ್ ಸೇರಿದಂತೆ ಎಲ್ಲಾ ವಿಶ್ವ ವಿದ್ಯಾಲಯಗಳಲ್ಲಿ ಪರಿಶಿಷ್ಟರು, ಹಿಂದುಳಿದ ವರ್ಗ, ಅಲ್ಪಸಂಖ್ಯಾತರಿಗೆ ಶಿಕ್ಷಣ, ಘನತೆಯ ಹಕ್ಕು ರಕ್ಷಣೆ ಮಾಡಲು ರೋಹಿತ್ ವೇಮುಲ ಹೆಸರಿನಲ್ಲಿ ಹೊಸ ಕಾಯಿದೆ ಜಾರಿಗೆ ರಾಜ್ಯ ಸರ್ಕಾರ ತಯಾರಿ ನಡೆಸಿದೆ. ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಸೂಚನೆ ಆಧರಿಸಿ ರಾಜ್ಯ ಸರ್ಕಾರ ಕರ್ನಾಟಕ ರೋಹಿತ್ ವೇಮುಲ ಶಿಕ್ಷಣ ಮತ್ತು ಘನತೆಯ ಹಕ್ಕು ವಿಧೇಯಕ -2025 ಕರಡು ಅಂತಿಮಗೊಂಡಿದ್ದು, ಆಗಸ್ಟ್ 2ನೇ ವಾರದಲ್ಲಿ ಆರಂಭವಾಗಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಮಂಡನೆಗೆ ಬಯಸಿದೆ. ರೋಹಿತ್ ವೇಮುಲ ವಿಧೇಯಕ ಕುರಿತು ಈಗಾಗಲೇ ಚರ್ಚೆ ಆರಂಭವಾಗಿದೆ. ಯಾವುದೇ ವಿದ್ಯಾರ್ಥಿ ಜಾತಿ, ವರ್ಗ ಅಥವಾ ಧರ್ಮದ ಆಧಾರದ ಮೇಲೆ ತಾರತಮ್ಯಕ್ಕೆ ಒಳಗಾಗದಂತೆ ರಕ್ಷಣೆ ನೀಡುವುದು ವಿಧೇಯಕದ ಆಶಯ. ಕಾಯಿದೆ ಉಲ್ಲಂಘನೆಯು ಜಾಮೀನು ರಹಿತ ಅಪರಾಧವಾಗಲಿದ್ದು, ತಪ್ಪಿತಸ್ಥರಿಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸುವ ಜತೆಗೆ ಸಂಬಂಧಪಟ್ಟ ಸಂಸ್ಥೆಗೆ ಸರ್ಕಾರದ ಎಲ್ಲಾ ರೀತಿಯ ಹಣಕಾಸು ನೆರವು ಮತ್ತು ಅನುದಾನ ನಿಲ್ಲಿಸಲು ವಿಧೇಯಕದಲ್ಲಿಅವಕಾಶ ಕಲ್ಪಿಸಲಾಗಿದೆ. ನೂತನ ವಿಧೇಯಕದ ಕರಡು ಸಿದ್ಧವಾಗಿ ಕಾನೂನು ಇಲಾಖೆ ಪರಾಮರ್ಶೆಗೆ ಒಳಪಟ್ಟಿದ್ದು, ಮುಂದಿನ ಸಚಿವ ಸಂಪುಟದಲ್ಲಿ ಚರ್ಚೆಗೆ ಬರಲಿದೆ.

ಆಗಸ್ಟ್ 11ರಿಂದ ಆರಂಭವಾಗಲಿರುವ ರಾಜ್ಯ ವಿಧಾನಮಂಡಲದ ಮಳೆಗಾಲದ ಅಧಿವೇಶನದಲ್ಲಿ ವಿಧೇಯಕ ಮಂಡಿಸಿ ಹೊಸ ಕಾಯಿದೆ ರೂಪಿಸಲು ಸರಕಾರ ಉದ್ದೇಶಿಸಿದೆ. ಜಾತಿ, ಧರ್ಮದ ಆಧಾರದಲ್ಲಿ ತಾರತಮ್ಯ ಅಥವಾ ಘನತೆಗೆ ಕುಂದು ತರುವ ಜತೆಗೆ ಅದಕ್ಕೆ ಪ್ರಚೋದನೆ ನೀಡುವ ವ್ಯಕ್ತಿ ಅಥವಾ ವ್ಯಕ್ತಿಗಳೂ ಶಿಕ್ಷೆ ಮತ್ತು ದಂಡ ಅನ್ವಯ ಆಗಲಿದೆ. ಜತೆಗೆ ಅಂತಹ ಸಂಸ್ಥೆಗೆ ರಾಜ್ಯ ಸರ್ಕಾರದ ಯಾವುದೇ ಹಣಕಾಸಿನ ನೆರವು ಅಥವಾ ಅನುದಾನ ನೀಡುವಂತಿಲ್ಲ ಎಂಬ ಅಂಶವನ್ನು ವಿಧೇಯಕದ ಕರಡಿನಲ್ಲಿ ಸೇರ್ಪಡೆ ಮಾಡಲಾಗಿದೆ.

**ಮುಕ್ತ ಪ್ರವೇಶ:** ವರ್ಗ, ಜಾತಿ, ಧರ್ಮ, ಲಿಂಗ ಬೇಧವಿಲ್ಲದೆ ಉನ್ನತ ಶಿಕ್ಷಣ ಸಂಸ್ಥೆಗಳ ಪ್ರವೇಶವು ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಅರ್ಹತಾ ಪರೀಕ್ಷೆ ಮತ್ತು ಮೀಸಲು ನೀತಿ ಅನ್ವಯ ಇರಬೇಕು. ಈ ವಿಚಾರದಲ್ಲಿ ಯಾವುದೇ ವ್ಯಕ್ತಿಗೆ ತಾರತಮ್ಯ ಇರಬಾರದು ಎಂದು ಉದ್ದೇಶಿತ ಕಾಯಿದೆಯಲ್ಲಿ ಸ್ಪಷ್ಟಪಡಿಸಲಾಗಿದೆ. ತಾರತಮ್ಯಕ್ಕೆ ಒಳಗಾದ ವ್ಯಕ್ತಿ, ಅವನ ಪೋಷಕರು, ಸಹೋದರ, ಸಹೋದರಿ ಅಥವಾ ರಕ್ತ ಸಂಬಂಧಿ ಅಥವಾ ಸಹೋದ್ಯೋಗಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಕಾಯಿದೆ ಉಲ್ಲಂಘನೆಗಾಗಿ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ರಾಹುಲ್ ಕಾಳಜಿ:** ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ದಲಿತ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಸಮಾನ ಪ್ರವೇಶ ಅವಕಾಶ ನೀಡುವ ಜತೆಗೆ, ಜಾತಿ, ಧರ್ಮ, ಲಿಂಗದ ಆಧಾರದಲ್ಲಿ ತಾರತಮ್ಯಕ್ಕೆ ಆಸ್ಪದವಾಗದಂತೆ ಘನತೆಯಿಂದ ನಡೆಸಿಕೊಳ್ಳಲು ಪೂರಕವಾಗಿ ಸ್ಪಷ್ಟ ಕಾಯಿದೆ ರೂಪಿಸುವಂತೆ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಪಕ್ಷದ ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿದ್ದರು. ಇದಕ್ಕೆ ಸ್ಪಂದಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಶೀಘ್ರ ಹೊಸ ಕಾಯಿದೆ ರೂಪಿಸುವುದಾಗಿ ಕಳೆದ ಏಪ್ರಿಲ್ ತಿಂಗಳಲ್ಲಿ ಪ್ರಕಟಿಸಿದ್ದರು.


ಉದಯವಾಹಿನಿ ಚಿತ್ರ

**ರಾಜ್ಯ ಸರ್ಕಾರಕ್ಕೆ ಸೂಚನೆ**

**ರೋಹಿತ್ ವೇಮುಲ ಯಾರು?**

**ಹೈದರಾಬಾದ್ ವಿಶ್ವವಿದ್ಯಾಲಯದ 26 ವರ್ಷಗಳ ಹರೆಯದ ಸಂಶೋಧನಾ ವಿದ್ಯಾರ್ಥಿ ರೋಹಿತ್ ವೇಮುಲ ಆತ್ಮಹತ್ಯೆ ಪ್ರಕರಣ ರಾಷ್ಟ್ರಾದ್ಯಂತ ಸಂಚಲನ ಸೃಷ್ಟಿಸಿತ್ತು. ರಾಜ್ಯ ಪ್ರಾಯೋಜಿತ ಜಾತಿ ತಾರತಮ್ಯದಿಂದ ಈ ಸಾವು ಸಂಭವಿಸಿದೆ ಎಂದು ದೇಶಾದ್ಯಂತ ನಾನಾ ವಿಶ್ವವಿದ್ಯಾಲಯಗಳಲ್ಲಿ ಪ್ರತಿಭಟನೆ ನಡೆದಿದ್ದವು. ಈ ಪ್ರಕರಣದಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ತಾರತಮ್ಯ ತಡೆ ಹಾಗೂ ಶೋಷಿತ ಸಮುದಾಯಗಳ ವಿದ್ಯಾರ್ಥಿಗಳ ಘನತೆ ರಕ್ಷಣೆಗಾಗಿ ಕಠಿಣ ಕಾನೂನು ರೂಪಿಸುವ ಅಗತ್ಯವನ್ನು ಕಾಂಗ್ರೆಸ್ ಪ್ರತಿಪಾದಿಸಿತ್ತು.**

**ಜಾಮೀನು ರಹಿತ ಅಪರಾಧ**

**ರೋಹಿತ್ ವೇಮುಲ ಕಾಯಿದೆಯಡಿ ಪ್ರತಿಯೊಂದು ಅಪರಾಧವು ಸಂಜ್ಞೆಯ ಮತ್ತು ಜಾಮೀನು ರಹಿತವಾಗಿರುತ್ತದೆ. ಕಾಯಿದೆ ಉಲ್ಲಂಘನೆಗೆ ಸಂಬಂಧಿತ ಸಂಸ್ಥೆಯ ವ್ಯವಹಾರಗಳ ಉಸ್ತುವಾರಿ ಹೊಂದಿರುವ ವ್ಯಕ್ತಿ ಅಥವಾ ವ್ಯಕ್ತಿಗಳು ಹೊಣೆಗಾರರಾಗಲಿದ್ದು, ಒಂದು ವರ್ಷದ ಅವಧಿಗೆ ಜೈಲು ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಅಪರಾಧ 2ನೇ ಬಾರಿಗೆ ಪುನಾವರ್ತನೆಯಾದರೆ ಕನಿಷ್ಠ ಮೂರು ವರ್ಷಗಳ ಜೈಲು ಶಿಕ್ಷೆ ಹಾಗೂ ಒಂದು ಲಕ್ಷ ರೂ. ದಂಡಕ್ಕೆ ಗುರಿಯಾಗಬೇಕಾಗುತ್ತದೆ.**

# ವೀಳ್ಯದೆಲೆ ದರ ಕುಸಿತ: ರೈತರು ಕಂಗಾಲು

• ಉದಯವಾಹಿನಿ, ಬಂಗಾರಪೇಟೆ:

ಗ್ರಾಮೀಣ ಭಾಗದ ರೈತರ ಪ್ರಮುಖ ಆದಾಯ ಮೂಲವಾಗಿರುವ ವೀಳ್ಯದೆಲೆ ದರವು ಭಾರಿ ಪ್ರಮಾಣದಲ್ಲಿ ಕುಸಿತ ಕಂಡಿದೆ. ಇದರಿಂದಾಗಿ ರೈತರು ಸಂಕಷ್ಟಕ್ಕೀಡಾಗಿದ್ದಾರೆ. ಉತ್ತಮ ಮಳೆ, ತೇವಾಂಶ ಹೆಚ್ಚಳದಿಂದ ಉತ್ತಮ ಫಸಲು ಕೈಸೇರಿದೆ. ಆದರೆ, ಬೆಲೆ ಪಾತಾಳಕ್ಕೆ ಇಳಿದಿದ್ದರಿಂದ ರೈತರು ನಷ್ಟದ ಸುಳಿಗೆ ಸಿಲುಕುವಂತಾಗಿದೆ. ತಾಲ್ಲೂಕಿನಲ್ಲಿ 260 ಹೆಕ್ಟೇರ್ ಪ್ರದೇಶದಲ್ಲಿ ವೀಳ್ಯದೆಲೆ ಬೆಳೆಯಲಾಗಿದೆ. ಗ್ರಾಮೀಣ ಪ್ರದೇಶದ ನೂರಾರು ರೈತರು ಈ ಬೆಳೆಯನ್ನೇ ಅವಲಂಬಿಸಿದ್ದಾರೆ. ಮೂರು ತಿಂಗಳಿಂದ ಇಳಿ ಮುಖವಾಗಿರುವ ವೀಳ್ಯದೆಲೆ ಬೆಲೆಯು ಏರಿಕೆ ಹಾದಿಗೆ ಮರಳಲಿದೆ ಎಂಬ ಆಸೆ ರೈತರಲ್ಲಿ ಚಿಗುರೊಡೆದಿತ್ತು. ಆದರೆ, ಈ ಲಕ್ಷಣಗಳೇ ಕಾಣುತ್ತಿಲ್ಲವಾದ್ದರಿಂದ ರೈತರು ಆತಂಕಗೊಂಡಿದ್ದಾರೆ. ಫೆಬ್ರುವರಿ, ಮಾರ್ಚ್‌ನಲ್ಲಿ 12,000 ವೀಳ್ಯದೆಲೆಯ ಒಂದು ಹೊರೆಗೆ ಸರಾಸರಿ 14,000ಕ್ಕೆ ಮಾರಾಟವಾಗುತ್ತಿತ್ತು. ಮೂಡಣ ದಿಕ್ಕಿನಿಂದ ಗಾಳಿ ಬೀಸುತ್ತಿದ್ದಾಗ ವೀಳ್ಯದೆಲೆ ಇಳುವರಿ ಕುಂಠಿತವಾಗುತ್ತದೆ. ಮಾರುಕಟ್ಟೆಯಲ್ಲಿ



ಆವಕ ಕಡಿಮೆಯಾಗಿ ಬೆಲೆ ಹೆಚ್ಚಾಗಿತ್ತು.

ಏ. ಬಳಿಕ ಮಳೆ ಆರಂಭವಾಗಿದ್ದರಿಂದ ವೀಳ್ಯದೆಲೆಗೆ ಪೂರಕ ವಾತಾವರಣ ನಿರ್ಮಾಣವಾಗಿದ್ದು, ಬೆಲೆ ಪಾಳತಕ್ಕೆ ಕುಸಿಯತೊಡಗಿತು. ಜೂನ್‌ನಲ್ಲಿ ಇದು ಕನಿಷ್ಟಕ್ಕೆ ತಲುಪಿದ್ದು, ವೀಳ್ಯದೆಲೆಯ ಪ್ರತಿ ಹೊರೆಯು ಮಾರುಕಟ್ಟೆಯಲ್ಲಿ ಕೇವಲ 2,500 ಬಿಕರಿಯಾಗುತ್ತಿದೆ. ಪ್ರತಿ ವರ್ಷ ಜೂನ್ ಬಳಿಕ ದರ ಕಡಿಮೆಯಾಗುತ್ತಿತ್ತು. ಮುಂಗಾರು ಪೂರ್ವ ಮಳೆ ಉತ್ತಮವಾಗಿ ಸುರಿದಿದ್ದರಿಂದ ವೀಳ್ಯದೆಲೆ ಇಳುವರಿ ಹೆಚ್ಚಿತು. ಇದರಿಂದ ಮಾರುಕಟ್ಟೆಯಲ್ಲಿ ದರ ಕಡಿಮೆಯಾಗಿದೆ. ವೀಳ್ಯದೆಲೆ ಬೆಲೆ ಹೀಗೆ ಕುಸಿಯುತ್ತಿದ್ದರೆ, ವೀಳ್ಯದೆಲೆ ಬೆಳೆಯಿಂದಲೇ ವಿಮುಖಬೇಕಾಗುತ್ತದೆ ಎಂದು ಪೋಲೇನಹಳ್ಳಿ ರೈತ ವೆಂಕಟೇಶ ಅಳಲು ತೋಡಿಕೊಂಡರು. ವೀಳ್ಯದೆಲೆ ಬಳ್ಳಿಯ ಪೋಷಣೆಗೆ ಹೆಚ್ಚು ನಿಗಾವಹಿಸಬೇಕು. ನಿತ್ಯವೂ ತೋಟದಲ್ಲೇ ಉಳಿದುಕೊಂಡು, ಬಳ್ಳಿಯನ್ನು ಆರೈಕೆ ಮಾಡಬೇಕು. ಕಳೆ ತೆಗೆಯುವುದು, ಬಳ್ಳಿ ಕಟ್ಟುವುದು, ನೀರು ಹಾಯಿಸುವ ಕೆಲಸವಂತೂ ಪ್ರತಿದಿನ ಇದ್ದೇ ಇರುತ್ತದೆ. ವೀಳ್ಯದೆಲೆ ತೋಟದಲ್ಲಿ ಕೆಲಸ ಮಾಡುವ ಕೃಷಿ ಕಾರ್ಮಿಕರಿಗೆ ದಿನವೊಂದಕ್ಕೆ 600 ಕೂಲಿ ನೀಡಬೇಕು. ಮಾರುಕಟ್ಟೆಯಲ್ಲಿ ಸಿಗುವ ದರದಲ್ಲಿ ನಿರ್ವಹಣಾ ವೆಚ್ಚ ಕೂಡ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸುತ್ತಾರೆ

### ತಮಿಳುನಾಡು, ಆಂಧ್ರಕ್ಕೂ ರವಾನೆ

**ತಾಲ್ಲೂಕಿನ ಕಾಮಸಮುದ್ರ ಮತ್ತು ಬೂದಿಕೋಟೆ ಹೋಬಳಿಯ ವ್ಯಾಪ್ತಿಯ ಗ್ರಾಮಗಳಲ್ಲಿ ವೀಳ್ಯದೆಲೆ ಪ್ರಮುಖ ವಾಣಿಜ್ಯ ಬೆಳೆ. ಇತ್ತೀಚಿನ ದಿನಗಳಲ್ಲಿ ಹೈನುಗಾರಿಕೆ ಜೊತೆಗೆ, ರೈತರು ವೀಳ್ಯದೆಲೆಯನ್ನೂ ಬೆಳೆಯುತ್ತಿದ್ದಾರೆ. ಹೀಗೆ ಬೆಳೆದ ವೀಳ್ಯದೆಲೆಯನ್ನು ರೈತರು ಕಾಮಸಮುದ್ರ, ಬಂಗಾರಪೇಟೆ, ಬೂದಿಕೋಟೆ ಅಷ್ಟೇ ಅಲ್ಲದೆ, ಆಂಧ್ರಪ್ರದೇಶ, ತಮಿಳುನಾಡಿಗೂ ರಫ್ತು ಮಾಡುತ್ತಾರೆ. ಅಲ್ಲದೆ, ಬೆಂಗಳೂರು, ಮಂಗಳೂರು ಸೇರಿ ರಾಜ್ಯದ ಹಲವೆಡೆ ರವಾನಿಸುತ್ತಾರೆ.**

# ಹೆಚ್ಚಿದ ಬಾಲ್ಯ ವಿವಾಹ



• ಉದಯವಾಹಿನಿ, ಮಂಡ್ಯ

ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಿರುವ ಮಂಡ್ಯ ಜಿಲ್ಲೆಯಲ್ಲಿ ಬಾಲ್ಯ ವಿವಾಹ ವರದಿ ಆಗುತ್ತಿರುವುದನ್ನು ನೋಡಿದರೆ ಬೇಸರ ಆಗುತ್ತದೆ ಎಂದು ಜಿಲ್ಲಾಧಿಕಾರಿ ಕುಮಾರ ವಿಷಾದಿಸಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿಸುವ ಸಲುವಾಗಿ ಜು. 19 ರಂದು ಜಾಗೃತಿ ಜಾಥಾ ಹಮ್ಮಿಕೊಳ್ಳುವ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು. ಬಾಲ್ಯ ವಿವಾಹ ನಡೆಯುತ್ತಿರುವುದರ ಬಗ್ಗೆ ಚಿಂತಿಸಬೇಕಿದೆ. ಬಾಲ್ಯ ವಿವಾಹದ ದುಷ್ಪರಿಣಾಮ ಕುರಿತು ಹಲವು ಅರಿವು ಕಾರ್ಯಕ್ರಮಗಳನ್ನು ತಳಮಟ್ಟದಿಂದಲೂ ಆಯೋಜಿಸಲಾಗುತ್ತಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ ಸಮನ್ವಯದುಂದ ಕಾರ್ಯನಿರ್ವಹಿಸಿ ಶಾಲೆಯಲ್ಲಿ ಗೈರು ಹಾಜರಾಗುವ ಹೆಣ್ಣು ಮಕ್ಕಳ ಬಗ್ಗೆ ನಿಗಾವಹಿಸಿದರೆ ಬಾಲ್ಯ ವಿವಾಹ ತಡೆಗಟ್ಟಬಹುದು ಎಂದು ತಿಳಿಸಿದರು.

ಬಾಲ್ಯ ವಿವಾಹ ನಡೆದ ನಂತರ ದೂರು ದಾಖಲಿಸುವ ಕ್ರಮ ಕೈಗೊಳ್ಳುವ ಬದಲು ಬಾಲ್ಯ ವಿವಾಹ ನಡೆಯದಂತೆ ನೋಡಿಕೊಳ್ಳಿ. ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಹೆಚ್ಚಿನ ನಿಗಾ ವಹಿಸಿದರೆ ಬಾಲ್ಯ ವಿವಾಹ ಪ್ರಕರಣಗಳನ್ನು ಸಂಪೂರ್ಣವಾಗಿ ತಡೆಗಟ್ಟಬಹುದು. ಜುಲೈ 19ರಂದು ಬೆಳಿಗ್ಗೆ 8 ಗಂಟೆಗೆ ಜಾಥಾ ಕಾರ್ಯಕ್ರಮ ನಡೆಯಲಿದ್ದು, ಕಾಲೇಜು ವಿದ್ಯಾರ್ಥಿಗಳು, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಯೋಜನೆ ರೂಪಿಸಿ ಎಂದು ಸಲಹೆ ನೀಡಿದರು.ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರದ ಸದಸ್ಯ ಕಾರ್ಯದರ್ಶಿ ಆನಂದ್ ಮಾತನಾಡಿ, ಬಾಲ್ಯ ವಿವಾಹವನ್ನು ಪ್ರೋತ್ಸಾಹಿಸುವವರಿಗೆ ಕಾನೂನಿನಲ್ಲಿ ಕಠಿಣ ಶಿಕ್ಷೆ ಇರುತ್ತದೆ. ಕಾನೂನಿನಲ್ಲಿರುವ ಶಿಕ್ಷೆಗಳ ಬಗ್ಗೆ ಶಾಲಾ, ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ಮಾಹಿತಿ ನೀಡುವ ಕಾರ್ಯಾಗಾರ ಆಯೋಜಿಸಿ ಪ್ರಚಾರ ಮಾಡಬೇಕು ಎಂದು ತಿಳಿಸಿದರು.

# ಬಿಜೆಪಿ ತೊರೆಯುವ ಸುಳಿವು ನೀಡಿದ ಮಾಧುಸ್ವಾಮಿ

## ನಾನು ಸಂತೆಯಲ್ಲಿ ತಪ್ಪಿಸಿಕೊಂಡ ಮಗು.. ಯಾರು ಕರೆದರೂ ಹೋಗ್ತೀನಿ

• ಉದಯವಾಹಿನಿ, ತುಮಕೂರು

ಸದನ ಶೂರ ಎಂದೇ ಖ್ಯಾತಿ ಪಡೆದಿರುವ ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಅವರು ಬಿಜೆಪಿ ಪಕ್ಷವನ್ನು ತೊರೆಯುವ ಪರೋಕ್ಷ ಸುಳಿವು ನೀಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾದ ಬೆನ್ನಲ್ಲೇ ನೀಡಿರುವ ಈ ಹೇಳಿಕೆಗಳು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿವೆ. ತುಮಕೂರಿನ ಖಾಸಗಿ ಕಾಲೇಜೊಂದರಲ್ಲಿ ಮಾತನಾಡಿದ ಮಾಧುಸ್ವಾಮಿ, ತಮ್ಮ ರಾಜಕೀಯ ಭವಿಷ್ಯದ ಬಗ್ಗೆ ಅರ್ಥ ಗರ್ಭಿತ ಮಾತುಗಳನ್ನು ಆಡಿದ್ದಾರೆ.

ನಾನು ಸಂತೆಯಲ್ಲಿ ತಪ್ಪಿಸಿಕೊಂಡ ಮಗ. ಯಾರು ಕೈ ಹಿಡಿದು ಮನೆಗೆ ಕರೆದುಕೊಂಡು ಹೋಗ್ತಾರೋ ಅಲ್ಲಿಗೆ ಹೋಗುತ್ತೇನೆ ಎಂದು ಹೇಳುವ ಮೂಲಕ ಅವರು ಪಕ್ಷಾಂತರದ ಪರೋಕ್ಷ ಸುಳಿವು ನೀಡಿದ್ದಾರೆ. ಇದೇ ವೇಳೆ, ತಾನು ರಾಜಕೀಯ ನಿವೃತ್ತಿ ತೆಗೆದುಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದ್ದು, ಮುಂದಿನ ಚುನಾವಣೆಯಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರದಿಂದಲೇ ಸ್ಪರ್ಧಿಸುವುದು ಖಚಿತ ಎಂದು ಘೋಷಿಸಿದರು.

**ಮುಖ್ಯಮಂತ್ರಿ ಭೇಟಿ ಕುರಿತು ಮಾಧುಸ್ವಾಮಿ ಸ್ಪಷ್ಟನೆ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ ವಿಚಾರದ ಬಗ್ಗೆಯೂ ಮಾಧುಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ನಾನು ಯಾವತ್ತಿಗೂ ದ್ವಂದ್ವದಲ್ಲಿ ಮಾತನಾಡುವ ಮನುಷ್ಯನೇ ಅಲ್ಲ. ಮಾಡಿದ್ರೆ ಮಾಡಿದ್ದೇನೆ ಅಂತೀನಿ. ಯಾವನಿಗೋ ಹೆದರಿಕೊಂಡು ಮಾತನಾಡಬೇಕಾ..? ಎಂದು ತಮ್ಮ ನೇರ ಮಾತಿನ ಶೈಲಿಯನ್ನು ಪುನರುಚ್ಚರಿಸಿದರು. ಅವರೂ (ಸಿಎಂ) ಕೇಳಲಿಲ್ಲ, ನಾನೂ (ಮಾಧುಸ್ವಾಮಿ) ಕೇಳಲಿಲ್ಲ. ಆ ಟಾಪಿಕ್ಕೇ ಮಾತನಾಡಿಲ್ಲ ಎಂದು ಮುಖ್ಯಮಂತ್ರಿ ಭೇಟಿಯ ಉದ್ದೇಶ ರಾಜಕೀಯ ಚರ್ಚೆಯಾಗಿರಲಿಲ್ಲ ಎಂದು ಸ್ಪಷ್ಟಪಡಿಸಿದರು. ಅವರು ಮುಖ್ಯಮಂತ್ರಿ. ಮುಖ್ಯಮಂತ್ರಿನಾ ಮುಖ್ಯಮಂತ್ರಿಯನ್ನಾಗಿ ನೋಡಿ. ಒಬ್ಬ ಎಂಎಲ್‌ಎನ ಎಂಎಲ್‌ಎ ಆಗಿ ನೋಡಿ ಎಂದು ಹೇಳುವ ಮೂಲಕ ರಾಜಕೀಯ ವಿಶ್ಲೇಷಣೆಗಳಿಗೆ ತೆರೆ ಎಳೆಯಲು ಯತ್ನಿಸಿದರು. ಆದಾಗ್ಯೂ, ಸಿಎಂ ಭೇಟಿ ಮತ್ತು ನಂತರದ ಅವರ ಹೇಳಿಕೆಗಳು ಬಿಜೆಪಿ ವಲಯದಲ್ಲಿ ಆತಂಕ ಮೂಡಿಸಿದ್ದು, ಮಾಧುಸ್ವಾಮಿ ಅವರ ಮುಂದಿನ ನಡೆ ತೀವ್ರ ಕುತೂಹಲ ಕೆರಳಿಸಿದೆ.



**ಸಚಿವ ಮಾಧುಸ್ವಾಮಿ ಅವರು ಒಳ್ಳೇ ವಕೀಲರು:** ಸಚಿವ ಮಾಧುಸ್ವಾಮಿ ಅವರು ಒಳ್ಳೇ ವಕೀಲರು. ನಾನು ಸಹ ಲಾ ಓದಿದ್ದೀನಿ. ಆದರೆ, ಮಾಧುಸ್ವಾಮಿ ಅವರಂತೆ ಪಾಸಾಗಲಿಲ್ಲ ಎಂದು ಕಾಂಗ್ರೆಸ್ ನಾಯಕ ಬಿಕೆ ಹರಿಪ್ರಸಾದ್ ಹೇಳಿದ್ದರು. 2022ರ ಫೆಬ್ರವರಿ ಯಲ್ಲಿ ಮಾತನಾಡಿದ್ದ ಅವರು, ಸಚಿವ ಕೆಎಸ್ ಈಶ್ವರಪ್ಪ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ನಾಯಕರು ನಡೆಸುತ್ತಿದ್ದ ಧರಣಿಯನ್ನು ಹಿಂದಕ್ಕೆ ತೆಗೆದುಕೊಳ್ಳಿ ಎಂದು ಮಾಧುಸ್ವಾಮಿ ಅವರು ಮನವಿ ಮಾಡಿದಾಗ ಬಿಕೆ ಹರಿಪ್ರಸಾದ್ ಈ ರೀತಿ ಹೇಳಿದರು.

### ಅಂಜಲಿ ನಿಂಬಾಳ್ಕರ್ ವಿರುದ್ಧ ಮಾಧುಸ್ವಾಮಿ ಗರಂ

**2022ರಲ್ಲಿ ಮಾಧುಸ್ವಾಮಿಯವರು ಕಾನೂನು ಸಚಿವರಾಗಿದ್ದಾಗ, ಬೆಳಗಾವಿಯಲ್ಲಿ ನಡೆದ ವಿಧಾನಸಭೆ ಅಧಿವೇಶದಲ್ಲಿ ಕಾಂಗ್ರೆಸ್ ಸದಸ್ಯೆ ಅಂಜಲಿ ನಿಂಬಾಳ್ಕರ್ ವಿರುದ್ಧ ಸನದಲ್ಲೇ ರೇಗಾಡಿದ್ದರು. ಡಿ. 21ರಂದು ವಿಧಾನಸಭೆಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ಜಟಾಪಟಿ ನಡೆದಿತ್ತು. ಸಚಿವ ಗೋವಿಂದ ಕಾರಜೋಳ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದ್ದು, ಕಾಂಗ್ರೆಸ್ ಸದಸ್ಯೆ ಅಂಜಲಿ ನಿಂಬಾಳ್ಕರ್ ವಿರುದ್ಧ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಜೆಸಿ ಮಾಧುಸ್ವಾಮಿ ಗರಂ ಆಗಿದ್ದರು. ಅಂಜಲಿ ನಿಂಬಾಳ್ಕರ್ ಅವರನ್ನು ಅಮಾನತು ಮಾಡಬೇಕು ಎಂದು ಮಾಧುಸ್ವಾಮಿ ಪಟ್ಟು ಹಿಡಿದಿದ್ದರು.**

### ಯಾರೋ ನೋಡಿಕೊಂಡು ಬಂದ ಹೆಣ್ಣನ್ನು ನಾನು ಮದುವೆಯಾಗಲ್ಲ

**ಕಳೆದ ಲೋಕಸಭಾ ಚುನಾವಣೆಯಲ್ಲಿ ಮಾಧುಸ್ವಾಮಿಯವರು ತುಮಕೂರಿನಿಂದ ಬಿಜೆಪಿ ಟಿಕೆಟ್ ಪಡೆದು ಸ್ಪರ್ಧಿಸಲು ನಿರ್ಧರಿಸಿದ್ದರು. ಆದರೆ, ಬಿಜೆಪಿಯ ಅಂಗಳದಲ್ಲಿ ವಿ. ಸೋಮಣ್ಣನವರಿಗೆ ಟಿಕೆಟ್ ನೀಡುವ ಬಗ್ಗೆ ಚರ್ಚೆಯಾಗುತ್ತಿತ್ತು. ಆಗ, ಒಂದು ವದಂತಿ ಹರಿದಾಡುತ್ತಿತ್ತು. ಅದೇನೆಂದರೆ, ಮಾಧುಸ್ವಾಮಿಯವರು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿ, ಆ ಪಕ್ಷದಿಂದ ತುಮಕೂರಿನಲ್ಲಿ ಸ್ಪರ್ಧೆಗಿಳಿಯಲಿದ್ದಾರೆ ಎಂದು. ಆದರೆ, ಆ ವದಂತಿಗಳನ್ನು ಮಾಧುಸ್ವಾಮಿ ತಳ್ಳಿಹಾಕಿದ್ದರಲ್ಲದೆ, ಯಾರೋ ನೋಡಿಕೊಂಡು ಬಂದಿರುವ ಹೆಣ್ಣನ್ನು ನಾನು ಮದುವೆಯಾಗಲ್ಲ ಎಂದು ಮಾರ್ಮಿಕವಾಗಿ ನುಡಿದಿದ್ದರು.**

# ಮೇಲುಕೋಟೆ: ಕೃಷ್ಣರಾಜಮುಡಿ ಬ್ರಹೋತ್ಸವಕ್ಕೆ ಚಾಲನೆ

• ಉದಯವಾಹಿನಿ, ಮೇಲುಕೋಟೆ

ಆಷಾಢ ಮಾಸದ ಕೃಷ್ಣರಾಜಮುಡಿ ಬ್ರಹೋತ್ಸವದ ಹಿನ್ನಲೆ ಚೆಲುವ ನಾರಾಯಣ ಸ್ವಾಮಿಯ ಕಲ್ಯಾಣೋತ್ಸವ ದೇವಾಲಯದ ಸಂಪ್ರದಾಯದಂತೆ ಜರುಗಿತು. ಮುಮ್ಮಡಿ ಕೃಷ್ಣರಾಜ ಒಡೆಯರ್ ವರ್ಧಂತಿಯ ಅಂಗವಾಗಿ ನಡೆಸುವ ಕೃಷ್ಣರಾಜಮುಡಿ ಬ್ರಹೋತ್ಸವಕ್ಕೆ ದೊಡ್ಡ ಉಯ್ಯಾಲೋತ್ಸವಕ್ಕೆ



ಅಂಕುರಾರ್ಪಣೆಯ ಚಾಲನೆ ದೊರೆತ್ತಿದ್ದು. ಶನಿವಾ ಮುಮ್ಮಡಿ ಶ್ರೀ ಕೃಷ್ಣರಾಜ ಒಡೆಯರ್ ಜನ್ಮ ವರ್ಧಂತಿ ಹಿನ್ನಲೆ ತಿರುನಾರಾಯಣ ಸ್ವಾಮಿಗೆ ಮಹಾಭಿಷೇಕ ನಡೆಯಿತು. ನಂತರ ರಾತ್ರಿ ಅಮ್ಮನವರ ಸನ್ನಿಧಿಯಲ್ಲಿ, ಕಲ್ಯಾಣೋತ್ಸವ ವೈಭವದಿಂದ ಜರುಗಿತು.ಜು.16ರಂದು ವಜ್ರಖಚಿತ ಕೃಷ್ಣರಾಜಮುಡಿ ಕಿರೀಟಧಾರಣೆ ಮಹೋತ್ಸವ ನಡೆಯಲಿದೆ. ಜು. 18 ರಂದು ಗಜೇಂದ್ರ ಮೋಕ್ಷ, ಜು. 21 ಕಲ್ಯಾಣಿಯಲ್ಲಿ ತೀರ್ಥಸ್ನಾನ ಅವಭ್ರತ ನಡೆಯಲಿದೆ.

**ಮಹಾರಾಜ ವಿಗ್ರಹಗಳಿಗೆ ಅಭಿಷೇಕ:** ದೇವಾಲಯ ಜೀರ್ಣೋದ್ದಾರ ಮಾಡಿ ದೇವಾಲಯದ ಅಭಿವೃದ್ಧಿಗೆ ಶ್ರಮಿಸಿದ ಮಹಾರಾಜರ ವಿಗ್ರಹಗಳಿಗೆ ಎಂದಿನಂತೆ ದೇವಾಲಯದಲ್ಲಿ ಪೂಜಾ ಕೈಂಕರ್ಯ ನಡೆಯಿತು.


ಕೃಷ್ಣರಾಜಮುಡಿ ಹಿನ್ನಲೆ ದೇವಾಲಯಕ್ಕೆ ಸರಳ ದೀಪಾಲಂಕರ ವ್ಯವಸ್ಥೆ ಕಲ್ಪಿಸಲಾಗಿತು. ದೇವಾಲಯಕ್ಕೆ ಕೃಷಿ ಸಚಿವ ಎನ್ ಚೆಲುವರಾಯ ಸ್ವಾಮಿ ಪತ್ನಿ ಧನಲಕ್ಷ್ಮೀ ಭೇಟಿ ನೀಡಿ ದೇವರ ದರ್ಶನ ಪಡೆದರು.

# ಶಿಲಾಯುಗದ ಸಮಾಧಿ ಕುರುಹು ಪತ್ತೆ

• ಉದಯವಾಹಿನಿ, ಶಿಡ್ಲಘಟ್ಟ

ತಾಲ್ಲೂಕಿನ ಬಶೆಟ್ಟಹಳ್ಳಿ ಹೋಬಳಿಯ ಮದ್ದೇಗಾರಹಳ್ಳಿಯ ಬಳಿಯ ಗುಡ್ಡದ ಮೇಲ್ಭಾಗದಲ್ಲಿ ಹತ್ತಕ್ಕೂ ಹೆಚ್ಚು ಕಬ್ಬಿಣಯುಗದ ಬೃಹತ್ ಶಿಲಾಯುಗದ ಕಲ್ಗೋರಿಗಳು ಪತ್ತೆಯಾಗಿವೆ. ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಮೊಟ್ಟಮೊದಲಬಾರಿಗೆ ಈ ರೀತಿಯ ಶಿಲಾಯುಗದ ನೆಲೆಗಳು ಕಂಡುಬಂದಿದೆ. ಈ ಭಾಗದ ಇತಿಹಾಸವು ಸುಮಾರು 2,300 ವರ್ಷಗಳ ಹಿಂದಕ್ಕೆ ಕೊಂಡೊಯ್ಯುತ್ತವೆ.

ಪುರಾತತ್ವ ಇಲಾಖೆಯಿಂದ ಗ್ರಾಮವಾರು ಸರ್ವೆ ನಡೆಸುತ್ತಿರುವ ಶಾಸನತಜ್ಞ ಕೆ.ಧನಪಾಲ್ ಮತ್ತು ಕರ್ನಾಟಕ ಜಾನಪದ ಪರಿಷತ್ ಅಧ್ಯಕ್ಷ ಎ.ಎಂ.ತ್ಯಾಗರಾಜ್ ಅವರಿಗೆ ತಾಲ್ಲೂಕಿನ ಮದ್ದೇಗಾರಹಳ್ಳಿಯ ಬಳಿಯ ಗುಡ್ಡದ ಮೇಲ್ಭಾಗದಲ್ಲಿ ಶಿಲಾಯುಗದ ಸಮಾಧಿಯ ಕುರುಹು ಪತ್ತೆಯಾಗಿವೆ. ಇವುಗಳನ್ನು ಒರಟು ಬಂಡೆ, ಚಪ್ಪಡಿ ಬಳಸಿ ನಿರ್ಮಿಸಲಾಗಿದೆ. 1.5 ರಿಂದ 2 ಮೀಟರ್ ಅಳತೆ ಹೊಂದಿವೆ. ಇವನ್ನು ಕಬ್ಬಿಣಯುಗದ ಬೃಹತ್ ಶಿಲಾಯುಗದ ಸಂಸ್ಕೃತಿಗಳೆಂದು ಕರೆಯುತ್ತೇವೆ. ಇವು ಸುಮಾರು ಕ್ರಿ.ಪೂ 300 ಅಂದರೆ ಇಂದಿಗೆ ಸುಮಾರು 2,300 ವರ್ಷಗಳಷ್ಟು ಹಿಂದಿನವು. ಈ ಕಲ್ಗೋರಿಗಳು ಅಥವಾ ಕಲ್ಮನೆಗಳು ಶಿಲಾಯುಗದ ಜನರ ಜೀವನಶೈಲಿ, ಸಂಸ್ಕೃತಿ ಬಗ್ಗೆ ಮಾಹಿತಿ ಒದಗಿಸುತ್ತವೆ. ವಲಸಿಗರಾಗಿ



ಜೀವನ ನಡೆಸುತ್ತಿದ್ದ ಆಗಿನ ಜನರು ಯಾವುದಾದರೂ ಸಾಂಕ್ರಾಮಿಕ ರೋಗಗಳಿಗೆ ತುತ್ತಾಗಿ ತಮ್ಮ ಗುಂಪಿನ ಹಲವರು ಸತ್ತಾಗ, ಅವರನ್ನೊಂದು ಕಡೆ ಹೂತು, ಹತ್ತಿರದಲ್ಲಿ ಈ ರೀತಿಯ ಕಲ್ಗೋರಿ ನಿರ್ಮಿಸುತ್ತಿದ್ದರು. ಅವರು ಸಾಮಾನ್ಯವಾಗಿ ನೀರಿನ ಸೆಲೆಗಳ ಬಳಿಯೇ ವಾಸಿಸುತ್ತಿದ್ದರು ಎಂದು ಶಿಲಾಗೋರಿಗಳ ಕುರಿತಾಗಿ ಅಧ್ಯಯನ ಮಾಡಿರುವ ಡಾ.ಶಿವತಾರಕ್ ಮಾಹಿತಿ ನೀಡಿದರು.

ರಾಜ್ಯದಲ್ಲಿ 1,440ಕ್ಕೂ ಹೆಚ್ಚು ಬೃಹತ್ ಶಿಲಾ ತಾಣಗಳಿವೆ. ಅವುಗಳ ಪೈಕಿ ಕೊಪ್ಪಳ ಜಿಲ್ಲೆಯ ಹಿರೇಬೆಣಕಲ್ ಅತಿದೊಡ್ಡ ಶಿಲಾ ಗೋರಿಗಳಿರುವ ತಾಣವಾಗಿದೆ. ಯುನೆಸ್ಕೋ ವಿಶ್ವ ಪರಂಪರೆಯ ತಾಣವನ್ನಾಗಿ ಮಾಡಲು ಪ್ರಸ್ತಾಪಿಸಲಾಗಿದೆ. ಕೋಲಾರದ ಅರಾಬಿ ಕೊತ್ತನೂರು ಮತ್ತು ಕೊಯಿರಾ ಗ್ರಾಮಗಳಲ್ಲಿ ಬೃಹತ್ ಕಲ್ಗೋರಿಗಳನ್ನು ಕಾಣಬಹುದು ಎಂದು ಅವರು ಹೇಳಿದರು.

# ಅಪಘಾತಗಳ ಸಂಖ್ಯೆ ಹೆಚ್ಚಳ; ಬೈಪಾಸ್ ರಸ್ತೆಗೆ ಬ್ಯಾರಿಕೇಡ್ ಅಳವಡಿಕೆ

• ಉದಯವಾಹಿನಿ, ಕೊಳ್ಳೇಗಾಲ



ತಾಲ್ಲೂಕಿನ ಸತ್ತೇಗಾಲ ಗ್ರಾಮದ ಬೈಪಾಸ್ ರಸ್ತೆಗೆ ಪೊಲೀಸ್ ಇಲಾಖೆ ಸಿಬ್ಬಂದಿ ಬ್ಯಾರಿಕೇಡ್ ಅಳವಡಿಸಿದ್ದಾರೆ. ಈ ರಸ್ತೆಯಲ್ಲಿ ಪ್ರತಿನಿತ್ಯ ಅಪಘಾತಗಳು ಸಂಭವಿಸುತ್ತಿತ್ತು, ಅದಲ್ಲದೆ ಈ ಹೆದ್ದಾರಿ ಆರಂಭವಾದ ದಿನದಿಂದಲೂ ಇಲ್ಲಿಯವರೆಗೆ ಸಾವುಗಳ ಸಂಖ್ಯೆ ಮಿತಿಮೀರಿದೆ. ಕಳೆದ ವಾರ ಸಹ ಗ್ರಾಮದ ಮೂವರು ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದರು. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ರಸ್ತೆ ತಡೆ ಮಾಡಬೇಕು ಎಂಬುದಾಗಿ ಚಳವಳಿಯನ್ನು ಹಮ್ಮಿಕೊಂಡಿದ್ದರು. ವಿಷಯ ತಿಳಿದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಮೇಲ್ಸೇತುವೆ ನಿರ್ಮಾಣ ಮಾಡುವುದಾಗಿ ಒಪ್ಪಿಕೊಂಡಿದ್ದರು. ಜಿಲ್ಲಾಧಿಕಾರಿ ಸೂಚನೆಯಂತೆ ಕಾಮಗಾರಿ ಮಾಡುವುದಾಗಿ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ತಿಳಿಸಿದ್ದಾರೆ.

ಇನ್ನು ಒಂದು ತಿಂಗಳಲ್ಲಿ ಕಾಮಗಾರಿ ಆರಂಭಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ ಕೊಡುವುದಾಗಿ ಜಿಲ್ಲಾಧಿಕಾರಿ ಸಹ ಹೇಳಿದ್ದರು. ಅಲ್ಲಿಯವರೆಗೆ ಯಾವುದೇ ಅಪಘಾತಗಳು ಸಂಭವಿಸಬಾರದೆಂದು ಡಿವೈಎಸ್ಪಿ ಧರ್ಮೇಂದ್ರ ಅವರ ಸೂಚನೆಯ ಮೇರೆಗೆ ಪಿಎಸ್‌ಐ ಸುಪ್ರೀತ್ ತಂಡ ತಮ್ಮ ಸಿಬ್ಬಂದಿಯೊಂದಿಗೆ ರಸ್ತೆ ಪರಿಶೀಲಿಸಿ ಬ್ಯಾರಿಕೇಡ್ ಅಳವಡಿಸಿದೆ. ಈಗ ವಾಹನ ಸವಾರರು ವೇಗವಾಗಿ ಹೋಗಲು ಸಾಧ್ಯವಿಲ್ಲ. ಪ್ರಮುಖ ರಸ್ತೆಗಳಲ್ಲಿ ಸಿಬ್ಬಂದಿ ನಿಯೋಜಿಸಿ ಅಪಘಾತ ಹಷಿಸಲು ಕ್ರಮಕೈಗೊಳಲಾಗುವುದು ಎಂದು ಪಿಎಸ್‌ಐ ಸುಪ್ರೀತ್ ತಿಳಿಸಿದರು.

# ಗಬ್ಬೆದ್ದು ನಾರುತ್ತಿದೆ ಅರಮನೆ ನಗರಿ

## ಪೌರಕಾರ್ಮಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿರುವ ಕಾರಣ ನಡೆಯದ ವಿಲೇವಾರಿ

• ಉದಯವಾಹಿನಿ, ಮೈಸೂರು

ಸ್ವಚ್ಛ, ಸುಂದರ, ಉತ್ತಮ ನಿರ್ವಹಣೆಯ ಕಾರಣದಿಂದ ಖ್ಯಾತಿ ಗಳಿಸಿದ್ದ ಅರಮನೆ ನಗರಿಯು ಈಗ ಗಬ್ಬೆದ್ದು ನಾರುತ್ತಿದೆ. ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮಹಾನಗರಪಾಲಿಕೆ ನೌಕರರು ಪ್ರತಿಭಟನೆ ನಡೆಸುತ್ತಿದ್ದಾರೆ. ಅವರೊಂದಿಗೆ ಪೌರಕಾರ್ಮಿಕರು ಕೂಡ ಪಾಲ್ಗೊಳ್ಳುತ್ತಿದ್ದಾರೆ. ಈ ಪೌರ ಬಂಧುಗಳು ಕರ್ತವ್ಯದಿಂದ ದೂರ ಉಳಿದಿರುವುದರಿಂದಾಗಿ ಸ್ವಚ್ಛತೆ, ತ್ಯಾಜ್ಯ ವಿಲೇವಾರಿ ಕಾರ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗಿದೆ. ಪರಿಣಾಮ, ನಗರದಾದ್ಯಂತ ತ್ಯಾಜ್ಯದ ರಾಶಿ ರಾಶಿ ಕಂಡುಬರುತ್ತಿದೆ. ಅದು ಕೊಳೆತು ನಾರುತ್ತಿದ್ದು, ಸಾರ್ವಜನಿಕರಿಗೆ ಕಿರಿಕಿರಿ ಉಂಟಾಗುತ್ತಿದೆ. ಸ್ಥಳೀಯರಿಗೆ ಸಾಂಕ್ರಾಮಿಕ ರೋಗಗಳು ಹರಡುವ ಭೀತಿಯೂ ಎದುರಾಗಿದೆ.

ರಸ್ತೆ ಬದಿಗಳಲ್ಲಿ, ಖಾಲಿ ನಿವೇಶನಗಳಲ್ಲಿ, ರಸ್ತೆಯ ಮೂಲೆಗಳಲ್ಲಿ ತ್ಯಾಜ್ಯದ ರಾಶಿ ಕಂಡುಬರುತ್ತಿದೆ. ಅದರಲ್ಲಿ ಆಹಾರ ಹುಡುಕುವ ಬಿಡಾಡಿ ದನಗಳು, ಕರುಗಳು, ಬೀದಿನಾಯಿಗಳು ತ್ಯಾಜ್ಯವನ್ನೆಲ್ಲಾ ಕೆದಕುತ್ತಿವೆ. ಇದರಿಂದ, ಆ ಸ್ಥಳದಲ್ಲಿ ಮತ್ತಷ್ಟು ಕಸ ವ್ಯಾಪಿಸುತ್ತಿದೆ. ಸೊಳ್ಳೆಗಳು, ನೊಣಗಳು ಮುತ್ತಿಕೊಳ್ಳುತ್ತಿವೆ. ಆ ರಸ್ತೆಯಲ್ಲಿ ಸಂಚರಿಸುವವರು ದುರ್ವಾಸನ ತಾಳಲಾರದೆ ಮೂಗು ಮುಚ್ಚಿಕೊಂಡು ಹೋಗುವುದು ಕಂಡುಬರುತ್ತಿದೆ.

ನಗರದಲ್ಲಿನ ದುಃಸ್ಥಿತಿ ಕಂಡು ಪ್ರವಾಸಿಗರಲ್ಲಿ ಮೈಸೂರಿನ ಬಗೆಗಿನ ದೃಷ್ಟಿಕೋನವೇ ಬದಲಾಗುವ ಸ್ಥಿತಿ ಬಂದಿದೆ. ನಗರದ ಹೃದಯ ಭಾಗವೂ ಮಲಿನಗೊಂಡಿದೆ. ನಗರಪಾಲಿಕೆಯ ಎಲ್ಲಾ 1,952 ಪೌರಕಾರ್ಮಿಕರು ಕೂಡ ಸ್ವಚ್ಛತೆಗೆ ಇಳಿದಿಲ್ಲ. ಇದರ ಬಿಸಿ ನಗರದ ಮೇಲೆ ತಟ್ಟಿದೆ.

**ಐದು ದಿನಗಳು:** ಪಾಲಿಕೆ ನೌಕರರು ಪ್ರತಿಭಟನೆ ಆರಂಭಿಸಿ ಶನಿವಾರಕ್ಕೆ ಐದು ದಿನಗಳಾಗಿವೆ. ಮೊದಲ ದಿನ ತ್ಯಾಜ್ಯ ವಿಲೇವಾರಿ ಕಾರ್ಯ ಬಹುತೇಕ ಕಡೆಗಳಲ್ಲಿ ನಡೆದಿತ್ತು. ಆದರೆ, ಮರು ದಿನದಿಂದ ಎಲ್ಲಾ ಕಡೆಯೂ ತ್ಯಾಜ್ಯ ಸಂಗ್ರಹ, ವಾಹನಗಳಲ್ಲಿ ತೆರಳಿ ಮನೆ ಮನೆಗಳಿಂದ ತ್ಯಾಜ್ಯ ಸಂಗ್ರಹಿಸುವುದು, ವಿಂಗಡಿಸಿ ವಿಲೇವಾರಿ ಮಾಡುವುದು ಮೊದಲಾದ ಕಾರ್ಯ ಸಂಪೂರ್ಣವಾಗಿ ನಡೆದಿಲ್ಲ. ಅದರ ಪರಿಣಾಮ, ತ್ಯಾಜ್ಯದ ರಾಶಿಗಳು ಕೊಳೆತು ನಾರುತ್ತಿವೆ. ದೇಶದಾದ್ಯಂತ ಸ್ವಚ್ಛ ಸರ್ವೇಕ್ಷಣೆ ನಡೆಯುತ್ತಿದ್ದು, ಮೈಸೂರನ್ನು ಸ್ವಚ್ಛತಾ ಕ್ಲೀನಿಂಗ್‌ನಲ್ಲಿ ಅಗ್ರಸ್ಥಾನದಲ್ಲಿ ಕಾಣಬೇಕು ಎಂಬ ಪ್ರಯತ್ನಗಳು ಆಗಬೇಕಾದ ಹೊತ್ತಿನಲ್ಲೇ ಅಸ್ವಚ್ಛತೆ ತಾಂಡವವಾಡುತ್ತಿದೆ ಪರಿಸ್ಥಿತಿ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆ ಇದೆ.

ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರು ಭೇಟಿ ನೀಡಿ, ಬೇಡಿಕೆ ಈಡೇರಿಕೆಗೆ ಸ್ವಲ್ಪ ಕಾಲಾವಕಾಶ ಕೇಳಿದ್ದಾರೆ. ಹೀಗಾಗಿ, ಪೌರಕಾರ್ಮಿಕರು ಭಾನುವಾರದಿಂದ ಕೆಲಸಕ್ಕೆ ಹಾಜರಾಗುವ ನಿರೀಕ್ಷೆ ಇದೆ. ಹೀಗಾಗಿ, ಭಾನುವಾರ ತ್ಯಾಜ್ಯ ಸಂಗ್ರಹ ನಡೆಯಲಿದೆ. ಬೇಡಿಕೆ ಈಡೇರದಿದ್ದರೆ ಮಂಗಳವಾರದಿಂದ ಕೆಲಸದಿಂದ ದೂರ ಉಳಿಯುವುದಾಗಿ ತಿಳಿಸಿದ್ದಾರೆ ಎಂದು ಹೇಳಿದರು.

**ಅನಿವಾರ್ಯತೆಯಿಂದ:** ಪೌರಕಾರ್ಮಿಕರು ನಿರ್ವಹಿಸುವ ಕಸದ ವಾಹನ ಮನೆಗಳ ಬಳಿಗೆ ಬರದೇ ಇರುವುದರಿಂದಾಗಿ ನಿವಾಸಿಗಳು ಎಲ್ಲೆಂದರಲ್ಲಿ ಕಸ ಹಾಕುವ ಅನಿವಾರ್ಯತೆ ಉಂಟಾಗಿದೆ. ಇದರಿಂದಾಗಿ ಬಡಾವಣೆಗಳಲ್ಲೂ ತ್ಯಾಜ್ಯದ ಗುಡ್ಡೆಗಳು ದರ್ಶನ ನೀಡುತ್ತಿವೆ ಅನೈರ್ಮಲ್ಯ ಹರಡುತ್ತಿವೆ. ನಾವೂ ನಾಲ್ಕು ದಿನಗಳಿಂದ ಮನೆಯಲ್ಲಿ ಕಸ ಇಟ್ಟುಕೊಂಡಿದ್ದೆವು. ಪೌರಕಾರ್ಮಿಕರು ವಾಹನದೊಂದಿಗೆ ಬರುತ್ತಾರೆಂದು ಕಾದಿದ್ದೆವು. ಬರಲಿಲ್ಲ.

ಮನೆಯಲ್ಲಿ ತ್ಯಾಜ್ಯದ ಪ್ರಮಾಣ ಜಾಸ್ತಿಯಾದ್ದರಿಂದ ರಸ್ತೆಯ ಮೂಲೆಯಲ್ಲೆಲ್ಲೋ ಬಿಸಾಡಬೇಕಾಯಿತು. ಈವರೆಗೆ ಸ್ವಚ್ಛವಾಗಿದ್ದ ಆ ಸ್ಥಳವೀಗ ಕಸದ ಡಂಪಿಂಗ್ ಯಾರ್ಡ್‌ನಂತಾಗಿದೆ. ಆ ತ್ಯಾಜ್ಯ ವಿಲೇವಾರಿ ನಡೆಯದಿದ್ದರೆ ಅಲ್ಲಿನ ವಾತಾವರಣ ಸಂಪೂರ್ಣ ಹಾಳಾಗಲಿದೆ ಎಂದು ಗೋಕುಲಂನ ಮಹದೇಶ್ವರ ಬಡಾವಣೆಯ ನಿವಾಸಿ ಶಿವಪ್ರಸಾದ್ ತಿಳಿಸಿದರು. ಪಾಲಿಕೆ ಅಧಿಕಾರಿಗಳು ಕ್ರಮ ಕೈಗೊಂಡು ತ್ಯಾಜ್ಯ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಜನರಲ್ಲಿ ಅನಾರೋಗ್ಯ ಉಂಟಾಗಲಿದೆ' ಎಂದು ಅವರ ಆತಂಕ ವ್ಯಕ್ತಪಡಿಸಿದರು. ಇದೇ ರೀತಿಯ ಅಭಿಪ್ರಾಯ ನಗರದ ಜನರದಾಗಿದೆ.

**ಕಡಿವಾಣ ಬಿದ್ದಿತ್ತು...** **ಈ ಹಿಂದೆ ರಸ್ತೆ ಬದಿ ಕಸ ಎಸೆಯುವುದನ್ನು ಪತ್ತೆ ಹಚ್ಚಿ ದಂಡ ವಿಧಿಸುವ ಕೆಲಸ ಪಾಲಿಕೆಯಿಂದ ನಡೆಯುತ್ತಿತ್ತು. ಇದರಿಂದ ರಸ್ತೆ ಬದಿಗಳಲ್ಲಿನ ಕಸದ ರಾಶಿ ಬೀಳುವುದಕ್ಕೆ ಕಡಿವಾಣ ಬಿದ್ದಿತ್ತು. ಆದರೆ ಪ್ರತಿಭಟನೆ ಆರಂಭವಾದ ಬಳಿಕ ಮನೆ-ಮನೆಗಳಿಂದ ಕಸ ಸಂಗ್ರಹ ಮಾಡದಿರುವುದರಿಂದ ಸಾರ್ವಜನಿಕರು ನಿರ್ಜನ ಪ್ರದೇಶದಲ್ಲಿ ರಸ್ತೆ ಬದಿಯಲ್ಲಿ ಕಸ ಬಿಸಾಡುತ್ತಿದ್ದಾರೆ. ಪಾಲಿಕೆ ಕಾರ್ಮಿಕರು ಪ್ರತಿಭಟನೆ ನಡೆಸುತ್ತಿರುವ ಸ್ಥಳಕ್ಕೆ ರಾಜಕೀಯ ಮುಖಂಡರು ಜನಪ್ರತಿನಿಧಿಗಳು ಭೇಟಿ ಕೊಡುತ್ತಿದ್ದಾರೆ. ಆದರೆ ನೌಕರರ ಬೇಡಿಕೆ ಈಡೇರದೇ ದಿನನಿತ್ಯದ ಕೆಲಸಗಳು ಸ್ಥಗಿತಗೊಂಡಿವೆ. ಇದರ ಪರಿಣಾಮ ಜನರ ಮೇಲೆ ಉಂಟಾಗುತ್ತಿದೆ.**



**ದೃಷ್ಟಿಕೋನವೇ ಬದಲಾಗುವ ಸ್ಥಿತಿ**

> **ಪೌರಕಾರ್ಮಿಕರು ಕಸ ಸಂಗ್ರಹಕ್ಕೆ ಬಂದಿಲ್ಲ. ಎಷ್ಟು ದಿನವೆಂದು ಹಸಿಕಸವನ್ನು ಮನೆಯಲ್ಲಿ ಇಟ್ಟುಕೊಳ್ಳುವುದು ವಾಸನೆ ಬರುತ್ತಿತ್ತಾದ್ದರಿಂದ ಹೊರಗೆ ಎಸೆದೆವು**
> **-ರಮೇಶ್ ಕುವೆಂಪುನಗರ**

# ಕೊಳೆಗೇರಿ ನಿವಾಸಿಗಳಿಗೆ ಮೂಲ ಸೌಲಭ್ಯ ನಗರಸಭೆ ಅಧ್ಯಕ್ಷರ ಭರವಸೆ

• ಉದಯವಾಹಿನಿ, ಹುಣಸೂರು

ಆರ್ಥಿಕವಾಗಿ ಹಿಂದುಳಿದವರು ವಾಸಿಸುತ್ತಿರುವ 29ನೇ ವಾರ್ಡ್ ನಿವಾಸಿಗಳಿಗೆ ವೈಜ್ಞಾನಿಕವಾಗಿ ಕಾಲೊನಿ ನಿರ್ಮಿಸಿ ನೆಮ್ಮದಿಯ ಜೀವನ ನಡೆಸಲು ಪ್ರಯತ್ನ ಮಾಡುವುದಾಗಿ ನಗರಸಭೆ ಅಧ್ಯಕ್ಷ ಗಣೇಶ್ ಕುಮಾರಸ್ವಾಮಿ ಹೇಳಿದರು. ನಗರದ ವಾರ್ಡ್ 29ರಕ್ಕೆ ವಾರ್ಡ್ ಪ್ರದಕ್ಷಿಣೆ ಕಾರ್ಯಕ್ರಮದಲ್ಲಿ ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿ ವೀಕ್ಷಿಸಿದ ಬಳಿಕ ಮಾಧ್ಯಮಗಳಿಗೆ ಮಾತನಾಡಿ, ಈ ವಾರ್ಡ್‌ನಲ್ಲಿ ಆರ್ಥಿಕವಾಗಿ ಹಿಂದುಳಿದವರು ಹೆಚ್ಚಾಗಿ ನೆಲೆ ಕಟ್ಟಿಕೊಂಡಿದ್ದು, ವಿವಿಧ ಯೋಜನೆಯಲ್ಲಿ ಮನೆ ನಿರ್ಮಿಸಿ ಕೊಡಲಾಗಿದೆ. ಕೆಲವರಿಗೆ ಮನೆ ಇಲ್ಲದೆ ಗುಡಿಸಿಲಿನಲ್ಲಿ ವಾಸಿಸುತ್ತಿದ್ದು, ಮೂಲಭೂತ ಸವಲತ್ತು ಕಲ್ಪಿಸಬೇಕಾಗಿದೆ ಎಂದರು.

ಕೆಲವು ಮನೆಯಲ್ಲಿ 10-12 ಕ್ಕು ಹೆಚ್ಚು ಜನರು ವಾಸಿಸುತ್ತಿದ್ದು, ಈ ರೀತಿ ಕುಟುಂಬಗಳ ಪಟ್ಟಿ ಮಾಡಿ ಆಶ್ರಯ ಯೋಜನೆಯಲ್ಲಿ ಮನೆ ನೀಡಲು ಆಯುಕ್ತರಿಗೆ ಸೂಚಿಸಲಾಗಿದೆ ಎಂದರು. ಕೊಳೆಗೇರಿ ಸೇರಿದಂತೆ ವಾರ್ಡ್ ನಲ್ಲಿ ನೀರಿನ ಸಮಸ್ಯೆ, ವಿದ್ಯುತ್ ಇಲ್ಲದ ಬಗ್ಗೆ ಅರ್ಜಿಗಳು ಬಂದಿದ್ದು, ಈ ಸಂಬಂಧ ಮುಂದಿನ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ಕ್ರಮವಹಿಸಲಿದ್ದೇನೆ ಎಂದರು.



> **ನರಸಿಂಹಸ್ವಾಮಿ ತಿಟ್ಟು ಬಡಾವಣೆಯಲ್ಲಿ ಬಹುತೇಕ ಆರ್ಥಿಕವಾಗಿ ಸೊರಗಿದವರು ನೆಲೆಕಟ್ಟಿಕೊಂಡಿದ್ದು, ಈ ಸಮುದಾಯದವರಿಗೆ ಶಾಶ್ವತ ಸೂರು ಕಲ್ಪಿಸುವ ದಿಕ್ಕಿನಲ್ಲಿ ನಗರಸಭೆ ಯೋಜನೆ ರೂಪಿಸಿ ಶಾಸಕರ ಗಮನಕ್ಕೆ ತಂದು ಕಾರ್ಯರೂಪಗೊಳಿಸಲು ಪ್ರಸ್ತಾವನೆ ಸಲ್ಲಿಸುವೆ**
> **-ಗಣೇಶ್ ಕುಮಾರಸ್ವಾಮಿ, ಅಧ್ಯಕ್ಷ**

ಬಡಾವಣೆಯಲ್ಲಿ ಕೆಲವು ಭಾಗದಲ್ಲಿ ತ್ಯಾಜ್ಯ ತೆರವುಗೊಳಿಸದೆ ದುರ್ವಾಸನೆ ಎದುರಾಗಿತ್ತು. ಭೇಟಿ ಸಮಯದಲ್ಲಿ ಸಂಬಂಧಿಸಿದವರಿಗೆ ಎಚ್ಚರಿಕೆ ನೀಡಿ ತೆರವುಗೊಳಿಸಿದ್ದೇವೆ. ಕೆಲವು ಸಮಸ್ಯೆಗಳು ಶಾಸಕ ಜಿ.ಡಿ.ಹರೀಶ್ ಗೌಡ ಗಮನಕ್ಕೆ ತಂದು ಬಗೆಹರಿಸುವ ಬಗ್ಗೆ ವಿಶ್ವಾಸವಿದೆ ಎಂದರು.

# ರೈತನ ಮೇಲೆ ಕಾಡು ಹಂದಿ ದಾಳಿ

• ಉದಯವಾಹಿನಿ, ಗುಂಡ್ಲುಪೇಟೆ

ಕಾಡು ಹಂದಿ ದಾಳಿ ನಡೆಸಿದ ಪರಿಣಾಮ ರೈತ ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲ್ಲೂಕಿನ ಭೀಮನಬೀಡು ಗ್ರಾಮದಲ್ಲಿ ನಡೆದಿದೆ. ಭೀಮನಬೀಡು ಗ್ರಾಮದ ಗೋಪಾಲಶೆಟ್ಟಿ ಗಾಯ ಗೊಂಡ ರೈತ. ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಕಾಡುಹಂದಿಯೊಂದು ದಾಳಿ ನಡೆಸಿ ಕೋರೆ ಹಲ್ಲುಗಳಿಂದ ರೈತನ ಎಡಗಾಲಿಗೆ ತಿವಿದು ಗಾಯ ಮಾಡಿದೆ.


ಕೂಡಲೇ ಸ್ಥಳೀಯ ರೈತರು ಗಾಯಾಳುವನ್ನು ಗುಂಡ್ಲುಪೇಟೆ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿದ್ದಾರೆ. ಹೀಗಿದ್ದರೂ ಅರಣ್ಯಾಧಿಕಾರಿಗಳು ಸ್ಥಳಕ್ಕಾಗಮಿಸಿ ಗಾಯಳುವಿನ ಆರೋಗ್ಯ ವಿಚಾರಿಸಿ ಘಟನೆ ಮಾಹಿತಿ ಪಡೆದಿಲ್ಲ. ರೈತರು ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ.

**ಪರಿಹಾರಕ್ಕೆ ಒತ್ತಾಯ:** ರೈತ ಗೋಪಾಲಶೆಟ್ಟಿ ಎಡಗಾಲಿಗೆ ಕಾಡು ಹಂದಿ ದಾಳಿಯಿಂದ ತೀವ್ರಗಾಯವಾಗಿದೆ. ಸಂಬಂಧ ಪಟ್ಟ ಅರಣ್ಯ ಇಲಾಖೆ ಅಧಿಕಾರಿಗಳು ಸೂಕ್ತ ಚಿಕಿತ್ಸೆ ಕೊಡಿಸಿ ವೆಚ್ಚ ಭರಿಸುವ ಜೊತೆಗೆ ಪರಿಹಾರ ನೀಡಬೇಕು ಎಂದು ಸಾಮೂಹಿಕ ರಾಜ್ಯ ರೈತ ಸಂಘಟನೆ ಮುಖಂಡರು ಒತ್ತಾಯಿಸಿದ್ದಾರೆ.

## ಮಿನಿ ನ್ಯೂಸ್

### ಮೈಸೂರು ಮಿತ್ರ ಸಂಪಾದಕರಾದ ಕೆ.ಬಿ. ಗಣಪತಿಯವರು ನಿಧನ

• ಉದಯವಾಹಿನಿ, ಮೈಸೂರು



ಸ್ಟಾರ್ ಆಫ್ ಮೈಸೂರು ಮತ್ತು ಮೈಸೂರು ಮಿತ್ರ ದಿನಪತ್ರಿಕೆಗಳ ಸ್ಥಾಪಕ ಸಂಪಾದಕರು ಹಿರಿಯ ಸಂಪಾದಕರಾದ ಕೆ.ಬಿ. ಗಣಪತಿಯವರು ಭಾನುವಾರ ಬೆಳಗ್ಗೆ ಶಾಂತವೇರಿ ಗೋಪಾಲಗೌಡ ಆಸ್ಪತ್ರೆಯಲ್ಲಿ ನಿಧನ ಹೊಂದಿರುತ್ತಾರೆ.

ಸುದ್ದಿಯನ್ನು ತಿಳಿದ ಮೈಸೂರು ಉಪ ವಿಭಾಗದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯಗಳ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ, ಪ್ರಾಂಶುಪಾಲ ರಂಗನಾಥ್ ಚಾಮರಾಜನಗರದ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ, ಓಂ ಶಾಂತಿ ನ್ಯೂಸ್ ಸರ್ವಿಸ್ ನ ಬಿಕೆ ಆರಾಧ್ಯ ಮೃತರ ಆತ್ಮಕ್ಕೆ ಶಾಂತಿ ಸಾಗರಪರಮ ಪಿತ ಪರಮಾತ್ಮ ಶಾಂತಿಯನ್ನು ಕರುಣಿಸಲಿ ಎಂದು ಸಂತಾಪ ಸೂಚಿಸಿದ್ದಾರೆ.

ಹೃದಯವಂತಿಕೆ ಸಂಪಾದಕರಾದ ಗಣಪತಿಯವರು ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯಾಲಯ ಮೌಂಟ್ ಅಬುವಿನಲಿ ಒಮ್ಮೆ ಪತ್ರಕರ್ತರ ಸಮ್ಮೇಳನದಲ್ಲಿ ಭಾಗವಹಿಸಿದ್ದರು ಅವರ ಬಳಿಯಾವಾಗಲೂ ಭೇಟಿ ಮಾಡಿದರೆ ಈಶ್ವರೀಯ ಸೇವಾ ಕಾರ್ಯಕರ್ಗಳ ಬಗ್ಗೆ ವಿಚಾರಿಸುತ್ತಿದ್ದರು.

### ರಸ್ತೆ ತಡೆಗೋಡೆಗೆ ಕಾರು ಡಿಕ್ಕಿ ಮೂವರು ಸಾವು

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ-275ರ ಜಯಪುರ ಸೇತುವೆ ಬಳಿ ಭಾನುವಾರ ವೇಗವಾಗಿ ಬಂದ ಕಾರು ಹೆದ್ದಾರಿ ತಡೆಗೋಡೆಗೆ ಡಿಕ್ಕಿ ಹೊಡೆದಿದ್ದರಿಂದ ಮೂವರು ಮೃತಪಟ್ಟಿದ್ದು, ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮಂಡ್ಯ ಜಿಲ್ಲೆಯ ಕೆ.ಆರ್. ನಗರ ತಾಲ್ಲೂಕಿನ ಚಿಕ್ಕನಾಯಕನಹಳ್ಳಿಯ ತಮ್ಮಣ್ಣ (54), ಅವರ ಪುತ್ರ ಮುತ್ತುರಾಜು (27), ಬೆಂಗಳೂರಿನ ಕಾರು ಚಾಲಕ ಶಶಾಂಕ್ (26) ಮೃತರು. ಮುತ್ತುರಾಜ ಅವರ ಬಾಮೈದ ಕೆ.ಆರ್. ಪೇಟೆ ತಾಲ್ಲೂಕಿನ ಸಂಜು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದ ಮುತ್ತುರಾಜ್, ಸಂಜು ಅವರು, ಬೆಳಿಗ್ಗೆ ಸ್ವಿಫ್ಟ್ ಡಿಸೈರ್ ಬಾಡಿಗೆ ಕಾರಿನಲ್ಲಿ ತಮ್ಮ ಗ್ರಾಮದಿಂದ ಬೆಂಗಳೂರು ಕಡೆಗೆ ಹೋಗುತ್ತಿದ್ದರು. ಕಾರು ಚಾಲನೆ ಮಾಡುತ್ತಿದ್ದ ಶಶಾಂಕ್ ಜಯಪುರ ಸೇತುವೆ ಬಳಿಯ ತಿರುವಿನಲ್ಲಿ ಕಾರಿನ ನಿಯಂತ್ರಣ ಕಳೆದುಕೊಂಡು ತಡೆಗೋಡೆಗೆ ಡಿಕ್ಕಿ ಹೊಡೆದಿದ್ದಾರೆ ಎಂದು ರಾಮನಗರ ಸಂಚಾರ ಠಾಣೆ ಪೊಲೀಸರು ತಿಳಿಸಿದರು. ಡಿಕ್ಕಿಯ ತೀವ್ರತೆಗೆ ಕಾರು ಹೆದ್ದಾರಿಯಲ್ಲಿ ಎರಡೂರು ಸಲ ಪಲ್ಟಿಯಾಗಿದ್ದರಿಂದ ಮೂವರು ಸ್ಥಳದಲ್ಲೇ ಮೃತಪಟ್ಟರು. ತೀವ್ರವಾಗಿ ಗಾಯಗೊಂಡ ಸಂಜು ಅವರನ್ನು ಸಮೀಪದ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಹೇಳಿದರು. ಮೂವರ ಶವಗಳನ್ನು ರಾಮನಗರ ಜಿಲ್ಲಾಸ್ಪತ್ರೆಗೆ ಸಾಗಿಸಿ, ಮರಣೋತ್ತರ ಪರೀಕ್ಷೆ ನಡೆಸಿ ಕುಟುಂಬದವರಿಗೆ ಹಸ್ತಾಂತರಿಸಲಾಗಿಯಿತು. ಡಿಕ್ಕಿಯ ತೀವ್ರತೆಗೆ ಕಾರು ನಜ್ಜುಗುಜ್ಜಾಗಿದೆ. ಘಟನೆ ಕುರಿತು ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

### ಬಿಟ್ ಕಾಯಿನ್‌ನಲ್ಲಿ ಹೂಡಿಕೆ 80 ಲಕ್ಷ ವಂಚನೆ

• ಉದಯವಾಹಿನಿ, ತುಮಕೂರು

ಫೇಸ್‌ಬುಕ್‌ನಲ್ಲಿ ಪರಿಚಯವಾದ ವ್ಯಕ್ತಿಯೊಬ್ಬರು ಬಿಟ್ ಕಾಯಿನ್‌ನಲ್ಲಿ ಹೂಡಿಕೆ ಮಾಡಿದರೆ ತ್ವರಿತವಾಗಿ ಹೆಚ್ಚಿನ ಲಾಭ ಗಳಿಸಬಹುದು ಎಂದು ಒಡ್ಡಿದ ಆಮಿಷಕ್ಕೆ ಒಳಗಾದ ಇಲ್ಲಿಯ ನಿವಾಸಿಯೊಬ್ಬರು 79.75 ಲಕ್ಷ ಕಳೆದುಕೊಂಡಿದ್ದಾರೆ. ನಗರದ ಕೆ.ಆರ್. ಬಡಾವಣೆಯ ಪಿ.ಕಿಶೋರ್ ಕುಮಾರ್ ಹಣ ಕಳೆದುಕೊಂಡ ವ್ಯಕ್ತಿ. ಫೇಸ್‌ಬುಕ್‌ನಲ್ಲಿ ಪರಿಚಯವಾದ ಜಿಯಾ ಶರ್ಮಾ ಬಿಟ್ ಕಾಯಿನ್ ಹೂಡಿಕೆ ಮಾಡಿದರೆ ವೇಗವಾಗಿ ಹೆಚ್ಚಿನ ಲಾಭ ಗಳಿಸಬಹುದು ಎಂದು ಹೇಳಿದ್ದಾರೆ.

ನಂತರ ವಾಟ್ಸ್ ಆ್ಯಪ್‌ನಲ್ಲಿ Coinex ಎಂಬ ಆ್ಯಪ್ ಲಿಂಕ್ ಕಳುಹಿಸಿದ್ದಾರೆ. ವಂಚಕರು ಸೂಚಿಸಿದಂತೆ ಕಿಶೋರ್ ಹಣ ಹೂಡಿಕೆ ಮಾಡಿದ್ದಾರೆ. ಮೇ 23ರಿಂದ ಜುಲೈ 2ರವರೆಗೆ ಹಂತ ಹಂತವಾಗಿ ಒಟ್ಟು 79.75 ಲಕ್ಷವನ್ನು ಜಿಯಾ ಶರ್ಮಾ ಎಂಬುವರು ತಿಳಿಸಿದ ವಿವಿಧ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿದ್ದಾರೆ. ಜುಲೈ 3ರಂದು ಹೂಡಿಕೆ ಮಾಡಿದ ಹಣ ವಾಪಸ್ ಕೇಳಿದ್ದಾರೆ. 58 ಲಕ್ಷ ತೆರಿಗೆ ಹಣ ವರ್ಗಾವಣೆ ಮಾಡಿದರೆ ಮಾತ್ರ ಎಲ್ಲಾ ಹಣ ವಾಪಸ್ ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ. ಇದರಿಂದ ಅನುಮಾನ ಬಂದು ಸ್ನೇಹಿತರ ಬಳಿ ವಿಚಾರಿಸಿದಾಗ ವಂಚನೆಗೆ ಒಳಗಾಗಿರುವುದು ಗೊತ್ತಾಗಿದೆ. ಸೈಬರ್ ಠಾಣೆಗೆ ಕಿಶೋರ್ ದೂರು ನೀಡಿದ್ದು ಪ್ರಕರಣ ದಾಖಲಾಗಿದೆ.

### ಬಾಲ್ಯ ವಿವಾಹ; ಜನಸಂಖ್ಯೆ ಹೆಚ್ಚಳಕ್ಕೆ ಕಾರಣ

• ಉದಯವಾಹಿನಿ, ಗುಬ್ಬಿ

ಜನಸಂಖ್ಯೆ ನಿಯಂತ್ರಿಸಲು ಎಲ್ಲರಿಗೂ ಅರಿವು ಮೂಡಿಸಬೇಕಾದ ಅಗತ್ಯವಿದೆ ಎಂದು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಪ್ರಭಾ ತಿಳಿಸಿದರು. ಪಟ್ಟಣದಲ್ಲಿ ನಡೆದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಜನಸಂಖ್ಯಾ ನಿಯಂತ್ರಣಕ್ಕೆ ಕಡಿವಾಣ ಹಾಕದಿದ್ದಲ್ಲಿ ವೈಯಕ್ತಿಕ ಸಮಸ್ಯೆ ಜೊತೆಗೆ ದೇಶದ ಅಭಿವೃದ್ಧಿ ಕುಂಠಿತಗೊಳ್ಳುವುದು. ಮಹಿಳೆಯರನ್ನು ಮಕ್ಕಳನ್ನು ಹೆರುವ ಯಂತ್ರ ಎಂದು ಭಾವಿಸಬಾರದು. ಬಾಲ್ಯ ವಿವಾಹ ಜನಸಂಖ್ಯೆ ಉತ್ತೇಜನಕ್ಕೆ ಕಾರಣವಾಗುತ್ತಿದೆ ಎಂದರು. ಪ್ರಾಂಶುಪಾಲ ಆರ್.ವಿ. ಚಂದ್ರಶೇಖರ್ ಮಾತನಾಡಿ, ಜನಸಂಖ್ಯೆ ದೇಶದ ಸಂಪನ್ಮೂಲವಾಗಬೇಕೇ ಹೊರತು ಸಮಸ್ಯೆ ಆಗಬಾರದು. ಇದರಿಂದ ದೇಶದ ಅಭಿವೃದ್ಧಿ ಕುಂಠಿತಗೊಂಡು ಆರ್ಥಿಕ ಸಂಕಷ್ಟಕ್ಕೆ ಸಿಲುಕುವಂತಾಗುತ್ತದೆ ಎಂದು ಹೇಳಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿಂದು ಮಾಧವ್ ಮಾತನಾಡಿ, ಇತ್ತೀಚಿನ ವರ್ಷಗಳಲ್ಲಿ ಫಲವಂತಿಕೆ ಕಡಿಮೆಯಾಗುತ್ತಿದ್ದರೂ ಜನಸಂಖ್ಯೆ ಏರುತ್ತಿರುವುದು ದುರಾದೃಷ್ಟಕರ. ಆರ್ಥಿಕ ಸಾಮರ್ಥ್ಯ ಅರ್ಥೈಸಿಕೊಂಡು ಅಗತ್ಯವಿರುವಷ್ಟು ಮಕ್ಕಳನ್ನು ಪಡೆಯುವತ್ತ ಯೋಚಿಸಬೇಕಿದೆ. ಇಲ್ಲವಾದಲ್ಲಿ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುವ ಜೊತೆಗೆ ದೇಶದ ಆರ್ಥಿಕತೆ ಕುಂಠಿತಗೊಳ್ಳುವುದು ಎಂದು ಹೇಳಿದರು. ಕ್ಷೇತ್ರ ಶಿಕ್ಷಣಾಧಿಕಾರಿ ನಟರಾಜು ಮಾತನಾಡಿ, ಜನಸಂಖ್ಯೆ ಹೆಚ್ಚಳದಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಬೇಕಾದ ಅಗತ್ಯವಿದೆ. ಜನಸಂಖ್ಯೆ ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು.

**ವೃಷಭ** ನಿಮ್ಮ ಅಭಿಪ್ರಾಯ ಕೇಳಿದಾಗ ಅದನ್ನು ವ್ಯಕ್ತಪಡಿಸಲು ನಾಚಬೇಡಿ ಇದಕ್ಕೆ ನಿಮಗೆ ತುಂಬ ಮೆಚ್ಚುಗೆ ಸಿಗುತ್ತದೆ. ನಿಮ್ಮ ಸಂಗಾತಿ ನಿಜವಾಗಿಯೂ ಏನೋ ಸುಂದರವಾದ್ದರಿಂದ ನಿಮ್ಮನ್ನು ಅಚ್ಚರಿಗೊಳಿಸಬಹುದು.

**ಮಿಥುನ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ.

**ಕರ್ಕಾಟಕ** ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ. ಹೊಸ ಹಣ ಬರುತ್ತದೆ. ಥಿಯೇಟರ್, ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

**ಸಿಂಹ** ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು.

**ಕನ್ಯಾ** ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ಹಣದ ಲಾಭವನ್ನು ಪಡೆಯಬಹುದು. ನೀವು ಪ್ರೀತಿಸುವ ಜನರೊಂದಿಗೆ ಸಕಾರಾತ್ಮಕವಾಗಿರಲು ಪ್ರಯತ್ನಿಸಿ.

**ತುಲಾ** ನಿಮ್ಮ ದಿಟ್ಟ ಅಭಿಪ್ರಾಯಗಳು ನಿಮ್ಮ ಸ್ನೇಹಿತನ ಆತ್ಮ ಗೌರವವನ್ನು ಹಾನಿ ಮಾಡಬಹುದು. ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ.

**ವೃಶ್ಚಿಕ** ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಸಿಗೆ ಅಸಮಾಧಾನ ತರಬಹುದು. ಕಾರ್ಯಕ್ಷೇತ್ರದಲ್ಲಿ ಹೃದಯವನ್ನು ಇಡುವುದನ್ನು ತಪ್ಪಿಸಿ. ಇಲ್ಲದಿದ್ದರೆ ನೀವು ಅಪನಿಂದೆ ಪಡೆಯಬಹುದು.

**ಧನಸ್ಸು** ಇತ್ತೀಚೆಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ, ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯ ವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು.

**ಮಕರ** ನಿಮ್ಮ ಮುಂಗೋಪ ನಿಮ್ಮನ್ನು ಇನ್ನೂ ಹೆಚ್ಚು ತೊಂದರೆಯಲ್ಲಿ ಸಿಲುಕಿಸಬಹುದು. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಪೂರ್ಣಗೊಳ್ಳಬಹುದು. ನೀವು ಸುಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ.

**ಕುಂಭ** ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ.

**ಮೀನ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

---

● ಹಣದಾಸೆಗೆ ಮಾರುಹೋದ ಜನ: ಹಲವು ರಾಜ್ಯಗಳ ಪೊಲೀಸರಿಂದ ನೋಟಿಸ್

# ಸೈಬರ್ ವಂಚನೆಗೆ ಬಂಕಾಪುರ ಖಾತೆಗಳ ಬಳಕೆ

• ಉದಯವಾಹಿನಿ ಹಾವೇರಿ

ದೇಶದಾದ್ಯಂತ ನಡೆದ ಸೈಬರ್ ವಂಚನೆಗಳಿಗೆ ಬಂಕಾಪುರ ಪಟ್ಟಣ ಕೆಲ ನಿವಾಸಿಗಳ ಬ್ಯಾಂಕ್ ಖಾತೆಗಳನ್ನು ಬಳಕೆ ಮಾಡಿಕೊಂಡಿರುವ ಆತಂಕಕಾರಿ ಸಂಗತಿ ಹೊರಬಿದ್ದಿದ್ದು, ಅಂಥ ಖಾತೆಗಳನ್ನು ಹಲವು ರಾಜ್ಯಗಳ ಪೊಲೀಸರು ನಿಷ್ಕ್ರಿಯಗೊಳಿಸಿದ್ದಾರೆ. ಸೈಬರ್ ವಂಚನೆಯ ಹಣ ಜಮೆ ಆಗಿದ್ದ ಬಂಕಾಪುರದ ಬ್ಯಾಂಕ್‌ಗಳ ಖಾತೆದಾರರಿಗೆ ನೋಟಿಸ್ ನೀಡಿರುವ ಹಲವು ರಾಜ್ಯಗಳ ಪೊಲೀಸರು, ವಿಚಾರಣೆ ನಡೆಸಲು ಮುಂದಾಗಿದ್ದರು. ಏಕಾಏಕಿ ಮನೆಗೆ ಬಂದ ನೋಟಿಸ್ ನೋಡಿ ಗಾಬರಿಗೊಂಡ ಖಾತೆದಾರರು, ಹಾವೇರಿ ಸೆನ್ (ಸೈಬರ್, ಆರ್ಥಿಕ ಹಾಗೂ ಮಾದಕ ದ್ರವ್ಯ ನಿಯಂತ್ರಣ) ಠಾಣೆ ಮೆಟ್ಟಿಲೇರಿದ್ದಾರೆ.

ಶಿಗ್ಗಾವಿ ತಾಲ್ಲೂಕಿನ ಬಂಕಾಪುರಕ್ಕೆ ಕೆಲ ತಿಂಗಳ ಹಿಂದೆಯಷ್ಟೇ ಬಂದಿದ್ದ ಹಲ್ವಾ ವ್ಯಾಪಾರಿ ಕೇರಳದ ಮೊಹಮ್ಮದ್ ಅಬು ಎಂಬಾತ, ತನ್ನ ಮಗ ಬಿಟ್ ಕಾಯಿನ್ (ಬಿಟಿಸಿ) ವ್ಯವಹಾರ ನಡೆಸುತ್ತಿರುವುದಾಗಿ ಹೇಳಿದ್ದ. ಬ್ಯಾಂಕ್ ಖಾತೆಗಳ ಪುಸ್ತಕ ಹಾಗೂ ಅದಕ್ಕೆ ಲಿಂಕ್ ಮಾಡಿದ ಸಿಮ್ ಕಾರ್ಡ್‌ಗಳನ್ನು ನೀಡಿದರೆ, ಪ್ರತಿ ತಿಂಗಳು ಲಾಭದ ಹಣ ನೀಡುವುದಾಗಿ ಆಮಿಷವೊಡ್ಡಿದ್ದ. ಅದನ್ನು ನಂಬಿ ಆತನಿಗೆ ಬ್ಯಾಂಕ್ ಖಾತೆ ಪುಸ್ತಕ ಹಾಗೂ ಸಿಮ್ ಕಾರ್ಡ್‌ಗಳನ್ನು ನೀಡಿದ್ದೆವು. ನಮ್ಮ ಖಾತೆಗಳನ್ನು ಸೈಬರ್ ವಂಚನೆಗೆ ಬಳಸಿರುವ ಬಗ್ಗೆ ಪೊಲೀಸರು ನೋಟಿಸ್ ನೀಡಿದ್ದಾರೆ. ಹಲ್ವಾ ವ್ಯಾಪಾರಿ ಮೊಹಮ್ಮದ್ ಅಬು ಹಾಗೂ ಆತನ ಮಗ ಮಹ್ಮದ್ ಸಾಹಲ್ ಎಂಬುವವರು ನಮಗೆ ಹಣದ ಆಮಿಷವೊಡ್ಡಿ, ಖಾತೆಗಳನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ' ಎಂದು ದೂರು ನೀಡಿದ್ದಾರೆ.

ದೂರಿನನ್ವಯ ಎಫ್‌ಐಆರ್ ದಾಖಲಿಸಿಕೊಂಡಿರುವ ಸೆನ್ ಠಾಣೆ ಪೊಲೀಸರು, ಹಲ್ವಾ ವ್ಯಾಪಾರಿ ಮೊಹಮ್ಮದ್ ಅಬುನನ್ನು ಈಗಾಗಲೇ ಬಂಧಿಸಿದ್ದಾರೆ. ತಲೆಮರೆಸಿಕೊಂಡಿರುವ ಮಗ ಮಹ್ಮದ್ ಸಾಹಲ್ ಪತ್ತೆಗಾಗಿ ತನಿಖೆ ಮುಂದುವರಿಸಿದ್ದಾರೆ.

ಖಾತೆಗಳ ದುರ್ಬಳಕೆಗೆ ಸಂಬಂಧಪಟ್ಟಂತೆ ಜಿಲ್ಲೆಯಲ್ಲಿ ಇದೇ ಮೊದಲ ಬಾರಿಗೆ ಪ್ರಕರಣ ದಾಖಲಾಗಿದೆ. ಬಿಟ್ ಕಾಯಿನ್ ವ್ಯವಹಾರದ ಹೆಸರಿನಲ್ಲಿ ಜನರಿಂದ ಖಾತೆಗಳ ವಿವರ ಪಡೆದು, ಸೈಬರ್ ವಂಚನೆಗೆ ಬಳಸಿರುವುದು ಮೇಲ್ನೋಟಕ್ಕೆ ಗೊತ್ತಾಗುತ್ತಿದೆ. ಆರೋಪಿಗಳು ಹಾಗೂ ಅವರ ಜೊತೆಗಿರುವ ಎಲ್ಲರ ಬಗ್ಗೆಯೂ ಮಾಹಿತಿ ಕಲೆಹಾಕಲಾಗುತ್ತಿದೆ' ಎಂದು ಪೊಲೀಸ್ ಅಧಿಕಾರಿಯೊಬ್ಬರುಗೆ ತಿಳಿಸಿದರು.




### ಕೇರಳದಲ್ಲಿ ದಾಖಲೆ ಹಸ್ತಾಂತರ

**ಆರೋಪಿಗಳ ಮಾತಿನಂತೆ ಬಂಕಾಪುರದ ಕೆಲವರು, ಕೇರಳಕ್ಕೆ ಹೋಗಿದ್ದರು. ಅಲ್ಲಿಯ ಹೋಟೆಲ್‌ವೊಂದರಲ್ಲಿ ಉಳಿದುಕೊಂಡು ಆರೋಪಿಯನ್ನು ಭೇಟಿಯಾಗಿದ್ದರು. ವಿವಿಧ ಬ್ಯಾಂಕ್‌ಗಳ 12 ಖಾತೆ ಪುಸ್ತಕ, ಜೋಡಣೆಯಾದ ಸಿಮ್ ಕಾರ್ಡ್‌ಗಳು, ಎಟಿಎಂ ಕಾರ್ಡ್, ಪಿನ್ ನಂಬರ್, ಆನ್‌ಲೈನ್ ಬ್ಯಾಂಕಿಂಗ್‌ನ ಯೂಸರ್ ಐಡಿ-ಪಾಸ್‌ವರ್ಡ್ ಎಲ್ಲಾ ದಾಖಲೆಗಳನ್ನು ಆರೋಪಿಗೆ ಹಸ್ತಾಂತರಿಸಿದ್ದರು ಎಂದು ಪೊಲೀಸರು ಹೇಳಿದರು.**

### ಕೇರಳದಿಂದ ಬಂದಿದ್ದ ವ್ಯಾಪಾರಿ

**ಕೇರಳದ ಕ್ಯಾಲಿಕಟ್ ಜಿಲ್ಲೆಯ ಪುಥುಪ್ಪಡಿ ತಾಲ್ಲೂಕಿನ ಎಲಿಕಡ್ ಗ್ರಾಮದ ಮೊಹಮ್ಮದ್ ಅಬು, ಹಲ್ವಾ ಮಾರಲೆಂದು ಬಂಕಾಪುರಕ್ಕೆ ಬಂದಿದ್ದ. ತಮ್ಮದೇ ಮುಸ್ಲಿಂ ಸಮುದಾಯದ ಜನರನ್ನು ಪರಿಚಯಿಸಿಕೊಂಡಿದ್ದ ಎಂದು ಪೊಲೀಸರು ಹೇಳಿದರು. ನನ್ನ ಮಗ, ಬಿಟ್ ಕಾಯಿನ್ ವ್ಯವಹಾರದಲ್ಲಿ ನೂರಾರು ಕೋಟಿಗಳಿಸುತ್ತಿದ್ದಾನೆ. ಆದರೆ, ಒಂದೇ ಖಾತೆಯಿಂದ ಹಣ ಡ್ರಾ ಮಾಡಿಕೊಳ್ಳಲು ಆಗುತ್ತಿಲ್ಲ. ಹೆಚ್ಚು ಜನರ ಖಾತೆಗಳು ಬೇಕಾಗಿವೆ. ಖಾತೆ ಪುಸ್ತಕ, ಜೋಡಣೆಯಾದ ಸಿಮ್‌ಕಾರ್ಡ್, ಎಟಿಎಂ ಕಾರ್ಡ್ ಹಾಗೂ ಇತರೆ ದಾಖಲೆಗಳನ್ನು ನೀಡಿದರೆ, ಪ್ರತಿ ತಿಂಗಳು ಇಂತಿಷ್ಟು ಹಣ ನೀಡುತ್ತಾನೆ' ಎಂದು ಮೊಹಮ್ಮದ್ ಅಬು ಜನರಿಗೆ ಹೇಳಿದ್ದ. ಅದನ್ನು ನಂಬಿದ್ದ ಜನರು, ಖಾತೆ ವಿವರ ನೀಡಲು ಒಪ್ಪಿದ್ದರು' ಎಂದು ತಿಳಿಸಿದರು.**

---

## ಲೋಕ ಅದಾಲತ್: ಬಾಕಿ 16424 ಪ್ರಕರಣಗಳ ಇತ್ಯರ್ಥ

• ಉದಯವಾಹಿನಿ ಬಳ್ಳಾರಿ

ಅಖಂಡ ಬಳ್ಳಾರಿ ಜಿಲ್ಲೆಯ 28 ನ್ಯಾಯ ಪೀಠಗಳಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಉಳಿದಿದ್ದ, 25611ಪ್ರಕರಣಗಳನ್ನು ಕೈಗೆತ್ತಿಕೊಂಡು ಅದರಲ್ಲಿ 16424 ಪ್ರಕರಣಗಳ ಕಕ್ಷಿದಾರರಿಗೆ 34,31,97,228 ರೂ ಇತ್ಯರ್ಥ ಗೊಳಿಸಿದ ಮೊತ್ತವಾಗಿದೆ. ಇನ್ನು ಪೂರ್ವ ದಾವೇ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು 8,67,471 ಪ್ರಕರಣಗಳ ಪೈಕಿ 8,59, 362 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಇತ್ಯರ್ಥ ಪಡಿಸಲಾದ ಒಟ್ಟು ಮೌಲ್ಯ 311ಕೋಟಿ, 33 ಲಕ್ಷದ, 76 ಸಾವಿರದ 853 ರೂ ಇತ್ಯರ್ಥಗೊಳಿಸಲಾದ ಮೊತ್ತವಾಗಿದೆ.

## ಚಿನ್ನದ ಬಳೆ ಹಿಂದಿರುಗಿಸಿ ಪ್ರಾಮಾಣಿಕತೆ ಮೆರೆದ ಆಟೋರಿಕ್ಷಾ ಚಾಲಕ

• ಉದಯವಾಹಿನಿ ಮಂಗಳೂರು

ನಗರದ ಜೆಪ್ಪು ಮಾರುಕಟ್ಟೆಯ ಬಳಿ ರಸ್ತೆಬದಿಯಲ್ಲಿ ಬಿದ್ದಿದ್ದ 1 ಲಕ್ಷ ರೂ.ಗೂ ಹೆಚ್ಚು ಮೌಲ್ಯದ ಚಿನ್ನದ ಬಳೆಯನ್ನು ಮಂಗಳೂರಿನ ಆಟೋರಿಕ್ಷಾ ಚಾಲಕನೊಬ್ಬ ಹಿಂದಿರುಗಿಸಿ ಪ್ರಾಮಾಣಿಕತೆಯನ್ನು ಮೆರೆದಿದ್ದಾರೆ. ಮುಳಿಹಿತ್ಲುವಿನ ಆಟೋರಿಕ್ಷಾ ಚಾಲಕ ವಾಮನ ನಾಯಕ್ ಅವರು ಸುಮಾರು 17.5 ಗ್ರಾಂ ತೂಕದ ಬಳೆ ರಸ್ತೆಯಲ್ಲಿ ಸಿಕ್ಕಿತ್ತು. ಅದರ ನಿಜವಾದ ಮಾಲೀಕರನ್ನು ಪತ್ತೆಹಚ್ಚಲು ಸಾಮಾಜಿಕ ಮಾಧ್ಯಮವನ್ನು ಬಳಸಿದರು. ಅವರು ಅದನ್ನು ಜೆಪ್ಪಿನಮೊಗರುವಿನ ಚಂದ್ರಹಾಸ್ ಕೆ ಅವರಿಗೆ ಯಶಸ್ವಿಯಾಗಿ ಹಸ್ತಾಂತರಿಸಿದರು, ಅವರ ಸಮಗ್ರತೆಗೆ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದಾರೆ. ಅವರ ಸಾಮಾಜಿಕ ಜವಾಬ್ದಾರಿಯುತ ಕಾರ್ಯವನ್ನು ಗುರುತಿಸಿ, ದಕ್ಷಿಣ ಕನ್ನಡ ಜಿಲ್ಲಾ ಆಟೋ ರಿಕ್ಷಾ ಚಾಲಕರ ಸಂಘವು ವಾಮನ ನಾಯಕ್ ಅವರನ್ನು ಪ್ರಶಂಸಿಸಿ ಸನ್ಮಾನಿಸುವುದಾಗಿ ಘೋಷಿಸಿತು. ಇದನ್ನು ಸಂಘದ ಅಧ್ಯಕ್ಷ ಬಿ ವಿಷ್ಣುಮೂರ್ತಿ ದೃಢಪಡಿಸಿದ್ದಾರೆ.

## ಅಂತರರಾಜ್ಯ ಕಳ್ಳರ ಬಂಧನ


• ಉದಯವಾಹಿನಿ ಪಡುಬಿದ್ರಿ

ವಿವಿಧ ಠಾಣಾ ವ್ಯಾಪ್ತಿಯಲ್ಲಿ ಮನೆ ಕಳವು ಪ್ರಕರಣಕ್ಕೆ ಸಂಬಂಧಿಸಿ ಇಬ್ಬರು ಅಂತರರಾಜ್ಯ ಕಳ್ಳರನ್ನು ಪಡುಬಿದ್ರಿ ಪೊಲೀಸರು ಬಂಧಿಸಿದ್ದಾರೆ. ಬಂಧಿತರನ್ನು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೊಯಿಲ ಗ್ರಾಮದ ಕಲಾಯಿ ಹೌಸ್ ನಿವಾಸಿ ಇಬ್ರಾಹಿಂ ಕಲಂದರ್, ಕಾಸರಗೋಡು ಜಿಲ್ಲೆಯ ಕುಂಬಳೆ ಉರ್ಮಿಚಾಲ್ ಬೇಕೂರು ಎಂಬಲ್ಲಿನ ನಿವಾಸಿ ಮಹಮ್ಮದ್ ರಿಯಾಜ್ ಯಾನೆ ಕಡಪ್ಪ ರಿಯಾಜ್ ಎಂದು ಗುರುತಿಸಲಾಗಿದೆ.

ಉಡುಪಿ ಜಿಲ್ಲೆಯ ಪಡುಬಿದ್ರಿ ಪೊಲೀಸ್ ಠಾಣೆ, ಕೋಟ ಪೊಲೀಸ್ ಠಾಣೆ ಮತ್ತು ಕುಂದಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಕಳವು ಪ್ರಕರಣದಲ್ಲಿ ಬಂಧಿತರು ಆರೋಪಿಗಳಾಗಿದ್ದಾರೆ. ಕಳ್ಳತನಕ್ಕೆ ಉಪಯೋಗಿಸಿದ ಕಾರು ಮತ್ತು 24 ಸಾವಿರ ನಗದನ್ನು ವಶಪಡಿಸಿಕೊಳ್ಳಲಾಗಿದ್ದು, ಅವರಿಗೆ ನ್ಯಾಯಾಂಗ ಬಂಧನ ವಿಧಿಸಲಾಗಿ ಪಡುಬಿದ್ರಿ ಪೊಲೀಸ್ ಠಾಣೆ ವ್ಯಾಪ್ತಿಯ ಪಾದೆಬೆಟ್ಟು ಗ್ರಾಮದ ಕಾಮತ್ ಪೆಟ್ರೋಲ್ ಪಂಪ್ ಬಳಿ ಗಣೇಶ್ ಪ್ರಸಾದ್ ಶೆಟ್ಟಿ ಅವರ ಮನೆಗೆ ಜೂನ್ 22ರಂದು ನುಗ್ಗಿದ್ದ ಆರೋಪಿಗಳು 1.20 ಲಕ್ಷ, 25 ಸಾವಿರ ಮೌಲ್ಯದ ಚಿನ್ನದ ಸರವನ್ನು ಕಳವು ಮಾಡಿದ್ದರು. ಈ ಬಗ್ಗೆ ಪಡುಬಿದ್ರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

---

## ಛಾಯಾಚಿತ್ರ ಗ್ರಾಹಕರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಮುದ್ದೇಬಿಹಾಳ

ತಾಲ್ಲೂಕು ಛಾಯಾಚಿತ್ರ ಗ್ರಾಹಕರ ಕ್ಷೇಮಾಭಿವೃದ್ಧಿ ಸಂಘದ ನೂತನ ಪದಾಧಿಕಾರಿಗಳನ್ನು ಭಾನುವಾರ ಇಲ್ಲಿನ ಪ್ರವಾಸಿ ಮಂದಿರದಲ್ಲಿ ಆಯ್ಕೆ ಮಾಡಲಾಯಿತು. ಹಿರಿಯ ಛಾಯಾಗ್ರಾಹಕರಾದ ಬುಡ್ಡಾ ಕುಂಟೋಜಿ, ಬಸವರಾಜ ಅಂಗಡಗೇರಿ, ಗುಲಾಮಮೊಹ್ಮದ ದಫೇದಾರ, ಮಹೇಶ ಕೆಂಧೂಳಿ, ಶೇಖರ ಪತ್ತಾರ, ಮುತ್ತು ಮಾದಿನಾಳ ಅವರ ನೇತೃತ್ವದಲ್ಲಿ ಸಭೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ರವಿ ತಾಳಿಕೋಟಿ, ಉಪಾಧ್ಯಕ್ಷರಾಗಿ ಪರಶುರಾಮ ನಾಗರಬೆಟ್ಟ, ಪ್ರಧಾನ ಕಾರ್ಯದರ್ಶಿಯಾಗಿ ವಿವೇಕ ದೋಟಿಹಾಳ, ಸಹ ಕಾರ್ಯದರ್ಶಿಯಾಗಿ ಶಿವು ತಾಳಿಕೋಟಿ, ಖಜಾಂಚಿಯಾಗಿ ಲಕ್ಕಪ್ಪ ತುರುಡಗಿ, ಸಂಘಟನಾ ಕಾರ್ಯದರ್ಶಿಯಾಗಿ ಅಯ್ಯಪ್ಪ ತಂಗಡಗಿ ಆಯ್ಕೆಯಾಗಿದ್ದಾರೆ. ಕಾರ್ಯಕಾರಿ ಸಮಿತಿಗೆ ಹೊಳೆಪ್ಪ ಕಣಕಾಲ, ಯಲ್ಲಪ್ಪ ಮ್ಯಾಗೇರಿ, ಸೋಮು ಸಜ್ಜನ (ಬಿದರಕುಂದಿ), ಮಲ್ಲು ಕಡಿ, ಮುನ್ನಾ ಸಾತಕೇಡ, ಜಗದೀಶ ಹಡಪದ, ಬಸವರಾಜ ಪಾಟೀಲರನ್ನು ಸಮಿತಿಗೆ ಸೇರಿಸಲಾಯಿತು.

ನೂತನ ಪದಾಧಿಕಾರಿಗಳ ನೇಮಕದ ನಂತರ ಮಾತನಾಡಿದ ಅಧ್ಯಕ್ಷ ರವಿ ತಾಳಿಕೋಟಿ, "ನಿಂತ ನೀರಾಗಿದ್ದ ಸಂಘದ ಚಟುವಟಿಕೆಗಳನ್ನು ಪುನಶ್ಚೇತನಗೊಳಿಸಿ, ಎಲ್ಲಾ ಛಾಯಾಗ್ರಾಹಕರ ಆರ್ಥಿಕ ಬಲವರ್ಧನೆಗೆ ಶ್ರಮಿಸುತ್ತೇವೆ" ಎಂದು ಹೇಳಿದರು. ಉಪಾಧ್ಯಕ್ಷ ಪರಶುರಾಮ ನಾಗರಬೆಟ್ಟ, "ಸಂಘದ ಸ್ಥಾಯಿ ಬೆಳವಣಿಗೆಗೆ ರಾಜ್ಯ ಮಟ್ಟದ ಗಮನ ಸೆಳೆಯುವಂತೆ ಚಟುವಟಿಕೆಗಳನ್ನು ಮುಂದುವರೆಸಲಿದ್ದೇವೆ ಎಂದರು.

## ಸೇಂದಿ ಮಾರಾಟಗಾರರನ್ನು ಬಂಧಿಸಿದ ಪೊಲೀಸರು

• ಉದಯವಾಹಿನಿ ವಾಡಿ

ಕಲಬೆರಕೆ ಸೇಂದಿ ಮಾರಾಟದಲ್ಲಿ ನಿರತರಾಗಿದ್ದ ಆರೋಪಿಗಳನ್ನು ಚಿತ್ತಾಪುರ ಅಬಕಾರಿ ಇಲಾಖೆ ಪೊಲೀಸರು ಬಂಧಿಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪಟ್ಟಣದ ಕೆಲವೆಡೆ ಬೈಕ್ ಮೇಲೆ ತೆರಳಿ ಸೇಂದಿ ಮಾರಾಟದಲ್ಲಿ ತೊಡಗಿದ್ದಾರೆ ಎನ್ನುವ ಮಾಹಿತಿ ಅರಿತ ಅಬಕಾರಿ ಪೊಲೀಸರು, ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿ.

ಪಟ್ಟಣದ ಸ್ಟೇಷನ್ ತಾಂಡಾದ ನಿವಾಸಿ ರಾಜ ತಂದೆ ಭೀಮಣ್ಣ ಯಳವಾರ ಹಾಗೂ ಚಂದ್ರಶೇಖರ್ ತಂದೆ ಯಲ್ಲಪ್ಪ ಬಂಧಿತ ಆರೋಪಿಗಳಾಗಿದ್ದಾರೆ. ಬಂಧಿತರಿಂದ 30.ಲೀಟರ್ ಕಲಬೆರಕೆ ಸೇಂದಿ ಹಾಗೂ ದ್ವಿಚಕ್ರ ವಾಹನ ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದರು. ಕಲಬುರಗಿ ಅಬಕಾರಿ ಉಪ ಆಯುಕ್ತ ಸಂಗನಗೌಡ ಪಿ, ಅವರ ಆದೇಶದಂತೆ ಕಾರ್ಯಾಚರಣೆಗೆ ಮುಂದಾದ ಚಿತ್ತಾಪುರ ಅಬಕಾರಿ ಪೊಲೀಸರು, ಆರೋಪಿಗಳ ಬಂಧನಕ್ಕೆ ಜಾಟಿ ಬೀಸಿದ್ದರು. ಪಟ್ಟಣದ ಆಶ್ರಯ ಕಾಲೋನಿ ನಿವಾಸಿ ಶಂಕರ್ ತಂದೆ ನಾರಾಯಣ ಜಾಧವ್ ಅವರ ಮನೆಯ ಮೇಲೆ ದಾಳಿ ಮಾಡಿದ ಪೊಲೀಸರು, 12ಲೀಟರ್ ಕಲಬೆರಿಕೆ ಸೇಂದಿ ಜಪ್ತಿಮಾಡಿಕೊಂಡು ಆರೋಪಿಯನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡರು.

**ಕೆಟ್ಟ ಕಲಬೆರಕೆಯುಳ್ಳ ಮದ್ಯವನ್ನು ಯಾರು ಸೇವನೆ ಮಾಡಬಾರದು. ಕಲಬೆರಕೆ ಸೇಂದಿ ಸೇವನೆ ಮಾಡುವುದರಿಂದ ಆರೋಗ್ಯದ ಮೇಲೆ ಭಾರಿ ದುಷ್ಪರಿಣಾಮ ಬೀರುತ್ತದೆ. ಈ ಸೇವನಿಯಿಂದ ಸಾವು ನೋವುಗಳು ಸಹ ಉಂಟಾಗಬಹುದಾಗಿದೆ. ನಿಮ್ಮನ್ನು ನಂಬಿ ಬದುಕುತ್ತಿರುವ ಕುಟುಂಬಸ್ಥರಿಗೆ ಅನ್ಯಾಯ ಮಾಡಬೇಡಿ -ಮಹೇಶಕುಮಾರ, ಅಬಕಾರಿ ಉಪ ನಿರೀಕ್ಷಕ**

---

## ರಾಷ್ಟ್ರೀಯ ಲೋಕ್ ಅದಾಲತ್ ರಾಜಿ ಸಂಧಾನ ಪ್ರಕರಣಗಳು ಇತ್ಯರ್ಥ

• ಉದಯವಾಹಿನಿ, ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕು ಕಾನೂನು ಸೇವಾ ಸಮಿತಿ ವತಿಯಿಂದ ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಪ್ರಭಾರಿ ಹಿರಿಯ ಶ್ರೇಣಿ ನ್ಯಾಯಾಧೀಶರಾದ ಸಾಗರ ಗುರುಗೌಡ ಪಾಟೀಲ ನೇತೃತ್ವದಲ್ಲಿ ಸೇಡಂನಲ್ಲಿ ಒಟ್ಟು 03 ಪ್ರಕರಣಗಳು ಕೈಗೆತ್ತಿಕೊಂಡು 3ಪ್ರಕರಣ ಇತ್ಯರ್ಥವಾಗಿದ್ದು ಒಟ್ಟು 52ಲಕ್ಷ ರೂ.ಪರಿಹಾರವಾಗಿರುತ್ತದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರಾದ ದತ್ತುಕುಮಾರ ಜವಳಕರ್ ನೇತೃತ್ವದಲ್ಲಿ 1874ಪ್ರಕರಣಗಳಲ್ಲಿ 517 ಪ್ರಕರಣಗಳು ಜನನ ಪ್ರಮಾಣಪತ್ರಕ್ಕಾಗಿ ದಾಖಲಾಗಿದ್ದು ಅದರಲ್ಲಿ 263 ಪ್ರಕರಣ ಇತ್ಯರ್ಥವಾಗಿವೆ, ಮತ್ತು ಪೋಲಿಸ್ ಇಲಾಖೆ ದಂಡದ ಪ್ರಕರಣಗಳು 314 ಪ್ರಕರಣಗಳು ಇತ್ಯರ್ಥವಾಗಿದ್ದು ಒಟ್ಟು 16.36ಲಕ್ಷ ರೂ.ವಸೂಲು ಆಗಿರುತ್ತದೆ. ಕಂದಾಯ ಇಲಾಖೆ ಪಿಎಲ್ಸಿ ಪ್ರಕರಣಗಳು 2995 ಇತ್ಯರ್ಥವಾಗಿದ್ದು ಹಾಗೂ ಬ್ಯಾಂಕ್ ಪ್ರಕರಣಗಳಲ್ಲಿ ಒಟ್ಟು 359ಪ್ರಕರಣ ಕೈಗೆತ್ತಿಕೊಂಡು ಇದರಲ್ಲಿ 39 ಪ್ರಕರಣಗಳು ಇತ್ಯರ್ಥವಾಗಿದ್ದು ಇದರಿಂದ 40.20ಲಕ್ಷ ರೂ.ವಸೂಲು ಆಗಿರುತ್ತದೆ. ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ದತ್ತುಕುಮಾರ ಜವಳಕರ್ ನೇತೃತ್ವದಲ್ಲಿ ಒಟ್ಟು 685 ಪ್ರಕರಣಗಳು ಕೈಗೆತ್ತಿಕೊಂಡು ಅದರಲ್ಲಿ 518 ಪ್ರಕರಣಗಳು ಇತ್ಯರ್ಥವಾಗಿದ್ದು,ಜನನ ಪ್ರಮಾಣ ಪತ್ರಕ್ಕಾಗಿ 401 ಇದರಲ್ಲಿ 270 ಪ್ರಕರಣಗಳು ಇತ್ಯರ್ಥವಾಗಿರುತ್ತವೆ, ಮತ್ತು ಪೋಲಿಸ್ ಇಲಾಖೆ ದಂಡದ ಪ್ರಕರಣ 271ದಾಖಲಾಗಿದ್ದು 74,250ರೂ. ವಸೂಲು ಆಗಿರುತ್ತದೆ ಎಂದು ತಾಲ್ಲೂಕಾ ಕಾನೂನು ಸೇವಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಗರ ರಸ್ತೆ ಅಗಲೀಕರಣ ಪೂರ್ವಾನುಮತಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಧಾರ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲಾ ಕೇಂದ್ರ ಚಿತ್ರದುರ್ಗ ನಗರದ ಪ್ರಮುಖ ರಸ್ತೆ ಅಗಲೀಕರಣ ಕಡ್ಡಾಯವಾಗಿ ಆಗಲೇಬೇಕು. ಈ ನಿಟ್ಟಿನಲ್ಲಿ ಅಗತ್ಯ ಪೂರ್ವಾನುಮತಿ ಪಡೆಯುವ ಸಲುವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳುವಂತೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಚಿತ್ರದುರ್ಗ ನಗರದದಲ್ಲಿ ಹಾದುಹೋಗಿರುವ ಹಳೆಯ ಪುಣೆ-ಬೆಂಗಳೂರು ರಸ್ತೆಯನ್ನು ಅಗಲೀಕರಣಗೊಳಿಸುವ ಮತ್ತು ಅತಿಕ್ರಮ ತೆರವುಗೊಳಿಸುವ ಸಂಬಂಧ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿತ್ರದುರ್ಗ ನಗರದದಲ್ಲಿ ಹಾದುಹೋಗಿರುವ ಹಳೆ ಪುಣೆ-ಬೆಂಗಳೂರು ರಸ್ತೆಯನ್ನು ಚಳ್ಳಕೆರೆ ಗೇಟ್‌ನಿಂದ ಪ್ರವಾಸಿ ಮಂದಿರ ವೃತ್ತ, ಗಾಂಧಿವೃತ್ತ, ಕನಕ ವೃತ್ತದ ವರೆಗಿನ ಮಾರ್ಗದಲ್ಲಿ ಅಗಲೀಕರಣಗೊಳಿಸುವ ಸಂಬಂಧ ಸರ್ಕಾರದಿಂದ ವಿವಿಧ ಪ್ರಕ್ರಿಯೆಗಳಿಗೆ ಪಡೆಯಬೇಕಿರುವ ಪೂರ್ವಾನುಮತಿಗಾಗಿ ಶೀಘ್ರ ಪ್ರಸ್ತಾವನೆ ಸಲ್ಲಿಸಬೇಕು.

ಬಳಿಕ ಸರ್ಕಾರದ ಮಟ್ಟದಲ್ಲಿ ತ್ವರಿತವಾಗಿ ಪ್ರಕ್ರಿಯೆ ಪೂರ್ಣಗೊಳಿಸಲು ಬೇಕಾದ ವ್ಯವಸ್ಥೆ ಮಾಡಿಕೊಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಸಭೆಯಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತ ಸೋಮಶೇಖರ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್ ನಾಯ್ಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



ಉದಯವಾಹಿನಿ ಚಿತ್ರ

**ಡಿ.ಸುಧಾಕರ್ ಅಧ್ಯಕ್ಷತೆಯಲ್ಲಿ ಸಭೆ**

**ಚಿತ್ರದುರ್ಗ ನಗರವು ದಿನೇ ದಿನೇ ಬೆಳವಣಿಗೆ ಆಗುತ್ತಿದೆ. ಚಿತ್ರದುರ್ಗ ನಗರಸಭೆ ಮೇಲ್ದರ್ಜೆಗೇರಿಸಲು ಈಗಾಗಲೇ ಪ್ರಸ್ತಾವನೆ ಸಿದ್ಧಪಡಿಸಲಾಗುತ್ತಿದೆ. ಚಿತ್ರದುರ್ಗ ನಗರ ಮೂಲಕ ಪ್ರಮುಖ ರಾಷ್ಟ್ರೀಯ ಹೆದ್ದಾರಿಗಳು ಹಾದುಹೋಗಿದ್ದು, ಜಿಲ್ಲೆಯಲ್ಲಿ ಸಂಭವಿಸುವ ಅಪಘಾತಗಳ ಸಂಖ್ಯೆಯೂ ಹೆಚ್ಚಿದೆ. ಇತ್ತೀಚೆಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿಯೂ ಚಿತ್ರದುರ್ಗ ಜಿಲ್ಲೆಯಲ್ಲಿ ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುತ್ತಿರುವ ಬಗ್ಗೆಯೂ ಪ್ರಸ್ತಾಪಿಸಲಾಗಿದೆ. ಇಲ್ಲಿನ ಕಿರಿದಾದ ರಸ್ತೆಗಳು, ಜನಸಂಖ್ಯೆ, ಟ್ರಾಫಿಕ್ ಸಮಸ್ಯೆ ಮುಂತಾದವುಗಳನ್ನು ಗಮನದಲ್ಲಿರಿಸಿಕೊಂಡು, ಸಮಸ್ಯೆಗಳ ನಿವಾರಣೆಗೆ ನಗರದ ಪ್ರಮುಖ ರಸ್ತೆ ಅಗಲೀಕರಣ ಕಾರ್ಯ ಮಾಡಲೇಬೇಕಿದೆ. ರಸ್ತೆ ಅಗಲೀಕರಣ ಸಂಬಂಧ ಈಗಾಗಲೆ ಅಧಿಕಾರಿಗಳೊಂದಿಗೆ ಹಲವು ಸುತ್ತಿನ ಸಭೆಗಳನ್ನು ನಡೆಸಲಾಗಿದೆ. -ಟಿ.ವೆಂಕಟೇಶ್, ಜಿಲ್ಲಾಧಿಕಾರಿ**

---

## ಕಾಂಗ್ರೇಸಿನಲ್ಲಿ ಸಿಎಂ ಕುರ್ಚಿಗೆ ವ್ಯಾಪಾರ ನಡೆದಿದೆ: ಯತ್ನಾಳ್

• ಉದಯವಾಹಿನಿ ವಿಜಯಪುರ

ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿಗಾಗಿ ವ್ಯಾಪಾರ (ಆಕ್ಷನ್) ನಡೆದಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಆರೋಪಿಸಿದರು. ನಗರದಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಸಿಎಂ ಕುರ್ಚಿ ಉಳಿಸಿಕೊಳ್ಳಲು ಸಿದ್ದರಾಮಯ್ಯ ದೆಹಲಿಯಲ್ಲಿ ಕುಳಿತಿದ್ದಾರೆ ಎಂದು ಟೀಕಿಸಿದರು.

ಡಿಕೆಶಿ ಹಾಗೂ ಸಿದ್ದರಾಮಯ್ಯ ಸಿಎಂ ಕುರ್ಚಿಗಾಗಿ ಎಷ್ಟು ಕೋಟಿ ಕೊಡುತ್ತಾರೆ. ಮೂರನೇ ವ್ಯಕ್ತಿ ಎಷ್ಟು ಕೋಟಿ ಕೊಡುಬಹುದು ಎನ್ನುವ ವ್ಯಾಪಾರ (ಆಕ್ಷನ್) ನಡೆದಿದೆ ಎಂದು ಛೇಡಿಸಿದರು. ದೇಶದಲ್ಲಿ ಎಲ್ಲಿಯೂ ಕಾಂಗ್ರೆಸ್ ಅಧಿಕಾರದಲ್ಲಿ ಇಲ್ಲ. ಕಾಂಗ್ರೆಸ್ ಪಕ್ಷಕ್ಕೆ ಹಣವಿಲ್ಲ. ಹಾಗಾಗಿ ಈ ಆಕ್ಷನ್ ಕರೆದಿದ್ದಾರೆ ಎಂದು ಕುಟುಕಿದರು.

ಡಿಕೆಶಿಗೆ ಹೆಚ್ಚಿನ ಬಲವಿಲ್ಲ.ಐದು ವರ್ಷ ನಾನೇ ಸಿಎಂ ಆಗಿರುತ್ತೇನೆಂಬ ಎಂದು ಹೇಳುವ ಸಿಎಂ ಸಿದ್ದರಾಮಯ್ಯ ಅವರು ದೆಹಲಿ ಬಿಟ್ಟು ರಾಜ್ಯಕ್ಕೆ ಬಂದು ಜನಪರ ಕೆಲಸ ಮಾಡಲಿ ಎಂದು ಸಲಹೆ ನೀಡಿದರು.

ರಾಜ್ಯದಲ್ಲಿ ಹಲವಾರು ಸಮಸ್ಯೆಗಳಿದ್ದರೂ ಸಿಎಂ, ಡಿಸಿಎಂ ದೆಹಲಿಯಲ್ಲಿ ಠಿಕಾಣಿ ಹೂಡಿದ್ದಾರೆ ಎಂದರು. ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಹೋರಾಟ ನಡೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಈ ಬಗ್ಗೆ ಕಿಂಚಿತ್ತೂ ಗಮನ ಹರಿಸಿಲ್ಲ. ರಾಜ್ಯದಲ್ಲಿ ಸರ್ಕಾರ ಜೀವಂತವಾಗಿಲ್ಲ ಎಂದು ಯತ್ನಾಳ್ ಟೀಕಿಸಿದರು.



ಸಿಎಂ ಕುರ್ಚಿ ಕಚ್ಚಾಟ ವಿಚಾರದಲ್ಲಿ ಬಿಜೆಪಿಯವರ ಕೆಲಸವಿಲ್ಲ. ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರವಾಗಿದೆ ಎಂದರು. ಸಿಎಂ ಯಾರಾಗಬೇಕೆಂಬುದನ್ನು ಒಂದು ದಿನದಲ್ಲಿ ಮುಗಿಸಿಕೊಳ್ಳಬೇಕು. ಸಿಎಂ ಬದಲಾವಣೆ ಮಾಡುವುದು ಬಿಡುವುದು ಅವರ ಪಕ್ಷಕ್ಕೆ ಬಿಟ್ಟಿದ್ದು ಎಂದು ತಿಳಿಸಿದರು.

ನಿಮಗೆ ಭಯ ಇರುವುದಕ್ಕೆ, ಕುರ್ಚಿ ಅಲುಗಾಡುತ್ತಿರುವ ಕಾರಣ ದೆಹಲಿಯಲ್ಲಿ ಕೂತಿದ್ದೀರಿ ಎಂದು ಯತ್ನಾಳ್ ಸಿಎಂ, ಡಿಸಿಎಂ ವಿರುದ್ಧ ವಾಗ್ದಾಳಿ ನಡೆಸಿದರು.

## ಬಿರುಸುಗೊಂಡ ಮಳೆ: ಹಲವೆಡೆ ಜಲಾವೃತ ಸಮಸ್ಯೆ

• ಉದಯವಾಹಿನಿ ಕಾರವಾರ

ಕಳೆದ ಒಂದು ವಾರದಿಂದ ಈಚೆಗೆ ಬಿರುಸು ಕಳೆದುಕೊಂಡಿದ್ದ ಮಳೆಯು ಪುನಃ ಬಿರುಸು ಪಡೆಯಿತು. ದಿನಗಳ ಕಾಲ ಸುರಿದ ಮಳೆಯಿಂದ ಹಲವೆಡೆ ಜಲಾವೃತ ಸಮಸ್ಯೆ ಉಂಟಾಯಿತು.

ತಾಲ್ಲೂಕಿನ ಮುದಗಾ ಸಮೀಪ ಸಂಪರ್ಕ ರಸ್ತೆಯ ಮೇಲೆ ನೀರು ನಿಂತು ಸಂಚಾರಕ್ಕೆ ಸಮಸ್ಯೆ ಉಂಟಾಯಿತು. ಸಮೀಪದ ಕಾರ್ಮಿಕರ ಕಾಲೊನಿಗಳಿಗೂ ನೀರು ನುಗ್ಗಿತ್ತು. ಸತತ ಮಳೆಯಿಂದ ನಗರದ ಸಾಯಿಕಟ್ಟಾ, ಪದ್ಮನಾಭ ನಗರ ಸೇರಿದಂತೆ ಕೆಲವೆಡೆ ರಸ್ತೆಯ ಮೇಲೆ ಕೆಲ ಹೊತ್ತು ನೀರು ನಿಂತಿತ್ತು.



ಉದಯವಾಹಿನಿ ಚಿತ್ರ

ತಡರಾತ್ರಿ ಬೀಸಿದ ವೇಗದ ಗಾಳಿಯಿಂದ ಮರಗಳ ಟೊಂಗೆಗಳು ಮುರಿದು ಬಿದ್ದಿದ್ದರಿಂದ ಬಾಂಡಿಶಿಟ್ಟಾ, ನಂದನಗದ್ದಾ ಭಾಗದಲ್ಲಿ ಹಲವು ತಾಸುಗಳವರೆಗೆ ವಿದ್ಯುತ್ ವ್ಯತ್ಯಯ ಉಂಟಾಯಿತು. ರಭಸದಿಂದ ಸುರಿದ ಮಳೆಯಿಂದ ಶಾಲೆ ಕಾಲೇಜುಗಳಿಗೆ ತೆರಳುತ್ತಿದ್ದ ವಿದ್ಯಾರ್ಥಿಗಳು ಪರದಾಡಿದರು.

ನಸುಕಿನ ಜಾವದವರೆಗೆ ಜಿಲ್ಲೆಯ ಹೊನ್ನಾವರದಲ್ಲಿ 13 ಸೆಂ.ಮೀ, ಭಟ್ಕಳದಲ್ಲಿ 12.9 ಸೆಂ.ಮೀ, ಕುಮಟಾದಲ್ಲಿ 11 ಸೆಂ.ಮೀ, ಸಿದ್ದಾಪುರದಲ್ಲಿ 7.5 ಸೆಂ.ಮೀ, ಕಾರವಾರದಲ್ಲಿ 6.3 ಸೆಂ.ಮೀ ಮಳೆ ಸುರಿದಿದೆ.

---

# ಕೆಂಪು ಕಲ್ಲು ಮತ್ತು ಮರಳು ಅಭಾವ: ತುರ್ತುಕ್ರಮ ಕೈಗೊಳ್ಳಲು ಆಗ್ರಹ

● ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರಿಗೆ ಕೆಲಸವಿಲ್ಲದ ಪರಿಸ್ಥಿತಿ ● ಜೀವನ ನಿರ್ವಹಣೆ ಮಾಡುವುದು ತ್ರಾಸದಾಯಕವಾಗಿದೆ

• ಉದಯವಾಹಿನಿ ಮಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾರಾ ಸಾಗಾಟವಾಗಿ ಯಾವುದೇ ಅಡೆ ತಡೆ ಇಲ್ಲದೆ ಪೊಲೀಸ್ ಮತ್ತು ಜಿಲ್ಲಾಡಳಿತದ ಬಾಹ್ಯ ಬೆಂಬಲದ ಪರಿಣಾಮವಾಗಿ ನಡೆಯುತ್ತಿದ್ದ ಅಕ್ರಮ ದಂಧೆಗಳಿಗೆ ಈಗ ಅಧಿಕಾರ ವಹಿಸಿಕೊಂಡಿರುವ ದಕ್ಷ ಮತ್ತು ನಿಷ್ಠುರ ಪೊಲೀಸ್ ಅಧಿಕಾರಿ ಮತ್ತು ಜಿಲ್ಲಾಧಿಕಾರಿಗಳು ಕಟ್ಟು ನಿಟ್ಟಾಗಿ ಕ್ರಮವಹಿಸಿರುವ ಕಾರಣ ಕೆಂಪು ಕಲ್ಲು ಮತ್ತು ಮರಳು ಅಭಾವ ಉಂಟಾಗಿದೆ. ಮರಳು ಮತ್ತು ಕಲ್ಲು ಗಣಿಗಾರಿಕೆ ಮತ್ತು ಸಾಗಾಣಿಕೆಯು ಅಕ್ರಮವಾಗಿ ನಡೆಯುತ್ತಿದ್ದು ಇದೊಂದು ಪ್ರಬಲ ಮಾಫಿಯಾವಾಗಿದೆ.

ಅಧಿಕಾರಿಗಳ ಪ್ರಕಾರ 2025 ಅಕ್ಟೋಬರ್ 15ರ ವರೆಗೆ ಮರಳುಗಾರಿಕೆಗೆ ನಿಷೇಧವಿರುವ ಕಾರಣ ಸದ್ಯ ಎಲ್ಲೂ ಮರಳು ತೆಗೆಯುವಂತಿಲ್ಲ. ಕಾನೂನು ಪ್ರಕಾರ ಗಣಿಗಾರಿಕೆ ಮತ್ತು ಮರಳು ಸಾಗಾಟ ಮಾಡಲು ಅವಕಾಶ ನೀಡುವುದಾಗಿ ಆಡಳಿತಾಧಿಕಾರಿಗಳು ಬಲವಾಗಿ ಪ್ರತಿಪಾದಿಸುತ್ತಿದ್ದಾರೆ. ಅಕ್ರಮ ಮತ್ತು ಕಾನೂನು ಬಾಹಿರ ಕೃತ್ಯಗಳನ್ನು ತಡೆಗಟ್ಟಲು ನಮ್ಮ ಸಂಘಟನೆ ಅಧಿಕಾರಿಗಳೊಂದಿಗೆ ಸಹಮತವಿದೆ ಮತ್ತು ಸ್ವಾಗತಾರ್ಹವಾಗಿದೆ.

ಆದರೆ ಇಂತಹ ದಿಡೀರ್ ಕ್ರಮ ಕೈಗೊಳ್ಳುವುದರ ಬದಲು ದೂರ ದೃಷ್ಟಿಯಿಂದ ಯೋಜನೆಯನ್ನು ಹಮ್ಮಿಕೊಂಡಿದ್ದರೆ ಒಳ್ಳೆಯದಿತ್ತು. ಪ್ರಸ್ತುತ ಸಮಸ್ಯೆಯಿಂದ ಜಿಲ್ಲೆಯಲ್ಲಿ ಕೆಂಪು ಕಲ್ಲು ಮತ್ತು ಮರಳು ಅಭಾವದಿಂದಾಗಿ ಕಟ್ಟಡ ಮತ್ತು ನಿರ್ಮಾಣ ರಂಗದ ಕೆಲಸಗಳು ಕೆಲವು ಕಡೆ ಶಾಶ್ವತವಾಗಿ, ಇನ್ನೂ ಕೆಲವು ಕಡೆ ಭಾಗಶಃವಾಗಿ ಸ್ಥಗಿತಗೊಂಡಿದೆ. ಕಟ್ಟಡ ಮತ್ತು ನಿರ್ಮಾಣ ರಂಗದಲ್ಲಿ ಕೆಲಸ ಮಾಡುವ ವಿವಿಧ ನಮೂನೆಯ ಕಾರ್ಮಿಕರಿಗೆ ಕೆಲಸವಿಲ್ಲದೆ ಒಂದು ತಿಂಗಳು ಕಳೆದವು. ಅವರು ಮತ್ತು ಅವರ ಮನೆ ಮಂದಿ ಜೀವನ ನಿರ್ವಹಣೆ ಮಾಡುವುದು ತ್ರಾಸದಾಯಕವಾಗಿದೆ. ಜನಸಾಮಾನ್ಯರು ತಮ್ಮ ವಸತಿಗಾಗಿ ಮನೆ ಕಟ್ಟುವ ಯೋಜನೆ ಸಂಪೂರ್ಣ ಸ್ಥಗಿತಗೊಂಡು ಕಂಗಾಲಾಗಿದ್ದಾರೆ. ಕಟ್ಟಡ ಮತ್ತು ನಿರ್ಮಾಣ ರಂಗದ ಕಚ್ಚಾ ವಸ್ತುಗಳ ಅಭಾವದಿಂದಾಗಿ ಪರೋಕ್ಷವಾಗಿ ಲಾರಿಗಳಲ್ಲಿ ದುಡಿಯುವ ಕಾರ್ಮಿಕರು, ಅಂಗಡಿ-ಮುಗ್ಗಟ್ಟುಗಳ ಮಾಲೀಕರು, ಕೆಲಸಗಾರರು, ಇತರೆ ವ್ಯಾಪಾರಿವರ್ಗ ಮತ್ತು ಆರ್ಥಿಕ ಸಂಸ್ಥೆಗಳು ದೊಡ್ಡ ಪ್ರಮಾಣದಲ್ಲಿ ತೊಂದರೆಗೊಳಗಾಗಿವೆ.

**ದೊಡ್ಡ ಪ್ರಮಾಣದಲ್ಲಿ ತೊಂದರೆ**



ಉದಯವಾಹಿನಿ ಚಿತ್ರ

ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಜಿಲ್ಲೆಯಲ್ಲಿ ಸಾಕಷ್ಟು ಮರಳಿನ ಸಂಗ್ರಹವಿದ್ದು ಸ್ಯಾಂಡ್ ಬಜಾರ್ ಮೂಲಕ ಮರಳು ಪಡೆಯಬಹುದು ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ. ಆದರೆ ಸ್ಯಾಂಡ್ ಬಜಾರ್ ಸರಿಯಾಗಿ ತೆರೆಯುತ್ತಿಲ್ಲ.

ಬೇರೆ ಬೇರೆ ಕಡೆಗಳಿಂದ ಬರುವ ಮರಳು ಒಂದು ಲೋಡಿಗೆ ರೂ.22ಸಾವಿರದಷ್ಟು ದುಬಾರಿಯಾಗಿದೆ. ಕೆಂಪು ಕಲ್ಲು ಒಂದಕ್ಕೆ ರೂ.50ಕ್ಕೂ ಮಿಕ್ಕಿ ಏರಿಕೆ ಆಗಿರುತ್ತದೆ. ಇದೆಲ್ಲ ನಿಷೇಧದ ನಂತರ ಆದ ಬೆಳವಣಿಗೆಗಳಾಗಿವೆ.

ಅಕ್ರಮ ಮರಳುಗಾರಿಕೆ, ಅಕ್ರಮ ಕೆಂಪು-ಕಪ್ಪು ಕಲ್ಲಿನ ಗಣಿಗಾರಿಕೆ ಮತ್ತು ಸಾಗಾಟ ನಿಷೇಧಿಸಿರುವುದು ಒಳ್ಳೆಯ ಬೆಳವಣಿಗೆ. ಅದರ ಒಟ್ಟಿಗೆ ಕಾನೂನುಬದ್ಧ ಮರಳುಗಾರಿಕೆ, ಕೆಂಪು ಮತ್ತು ಕಪ್ಪು ಕಲ್ಲು, ಜಲ್ಲಿ ಪೂರೈಕೆ ಮಾಡಲು ವ್ಯವಸ್ಥೆಯೂ ಆಗಬೇಕಾಗಿದೆ. ಬೀದಿ ಪಾಲಾಗುತ್ತಿರುವ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಬದುಕಿನ ಪ್ರಶ್ನೆಯೂ ಪ್ರಮುಖ ಆದ್ಯತೆ ಆಗಬೇಕಾಗಿದೆ. ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಫೆಡರೇಶನ್ ಜಿಲ್ಲಾ ಸಮಿತಿಯು ಸಭೆ ಸೇರಿ ಗಂಭೀರವಾಗಿ ಪರಿಗಣಿಸಿದೆ.

ನಮ್ಮ ಸಂಘಟನೆಯ ವತಿಯಿಂದ ಜಿಲ್ಲೆಯಾದ್ಯಂತ ಪ್ರಸ್ತುತ ಸಮಸ್ಯೆ ಬಗೆಹರಿಯುವ ತನಕ ವಿವಿಧ ಹಂತದ ತೀವ್ರ ತರದ ಹೋರಾಟ, ಮಧ್ಯ ಪ್ರವೇಶ ಮಾಡಲು ನಿರ್ಣಯಿಸಿರುತ್ತದೆ. ದಿನಾಂಕ 14-07-2025 ರಂದು ಸಂಜೆ ಗಂಟೆ 5ಕ್ಕೆ ಮಂಗಳೂರು ನಗರದ ಜ್ಯೋತಿ ವೃತ್ತದಿಂದ ಮೆರವಣಿಗೆ ಹೊರಟು ಮಿನಿ ವಿಧಾನಸೌಧಧ ಮುಂದುಗಡೆ ಪ್ರತಿಭಟನಾ ಪ್ರದರ್ಶನ ನಡೆಸಲು ನಿರ್ಣಯಿಸಿದೆ. ಅದೇ ರೀತಿ ಅಂದು ಉಳ್ಳಾಲ ತಾಲ್ಲೂಕಿನ ನಾಟೆಕಲ್‌ನಲ್ಲಿರುವ ತಹಶೀಲ್ದಾರರ ಕಚೇರಿ, ಗುರುಪುರ ಕೈಕಂಭ, ಮೂಡಬಿದ್ರಿ, ಬೆಳ್ತಂಗಡಿ, ಪುತ್ತೂರು, ಸುಳ್ಯ ಮತ್ತು ಬಂಟ್ವಾಳದಲ್ಲಿ ತೀವ್ರ ತರದ ಹೋರಾಟ ನಡೆಸಲು ನಿರ್ಣಯಿಸಿದೆ. ಸರಕಾರ ಈ ಕೂಡಲೇ ಮಧ್ಯಪ್ರವೇಶಿಸಿ ತುರ್ತುಕ್ರಮ ಜರುಗಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ತೀವ್ರ ತರದ ಹೋರಾಟವನ್ನು ಇತರೆ ಸಮಾನ ಮನಸ್ಕ ಸಂಘಟನೆಗಳೊಂದಿಗೆ ಸೇರಿ ನಡೆಸಲಾಗುವುದು.

### ಈ ಕೆಳಗಿನ ಬೇಡಿಕೆಗಳನ್ನು ಜಿಲ್ಲಾಡಳಿತದ ಮುಂದಿರಿಸಿದೆ

- ಕರಾವಳಿ ಜಿಲ್ಲೆಗಳಲ್ಲಿ ಸರಾಗವಾಗಿ ಮತ್ತು ಸರಳವಾಗಿ ಮರಳು ಪೂರೈಕೆಯಾಗುವಂತೆ ಕರಾವಳಿ ಮರಳು ನೀತಿ ರೂಪಿಸಬೇಕು.
- ಪರಿಸರ ಸ್ನೇಹಿ ಮರಳುಗಾರಿಕೆ ಹಾಗೂ ನಿಯಮಬದ್ಧ ಕೆಂಪು ಕಲ್ಲು ಮತ್ತು ಕಪ್ಪು ಕಲ್ಲು ಗಣಿಗಾರಿಕೆಗೆ ಅವಕಾಶ ನೀಡಬೇಕು.
- ಜನಸಾಮಾನ್ಯರಿಗೆ ಕೈಗೆಟಕುವ ದರದಲ್ಲಿ ಮರಳು, ಕೆಂಪು ಕಲ್ಲು, ಕಪ್ಪು ಕಲ್ಲು ಮತ್ತು ಜಲ್ಲಿ ಸಿಗುವಂತಾಗಬೇಕು.
- ಜನಸಾಮಾನ್ಯರಿಗೆ ಮನೆ ಕಟ್ಟಲು ಬೇಕಾಗುವ ಕಚ್ಚಾ ವಸ್ತುಗಳ ಪೂರೈಕೆಯಲ್ಲಿ ಯಾವುದೇ ಅಡೆತಡೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು.
- ಕಳೆದ ಒಂದು ತಿಂಗಳಿನಿಂದ ಕಟ್ಟಡ ಮತ್ತು ನಿರ್ಮಾಣ ರಂಗದ ಕಾರ್ಮಿಕರು ಕೆಲಸವಿಲ್ಲದೆ ಬಳಲುತ್ತಿದ್ದಾರೆ. ಅವರಿಗೆ ಕಾರ್ಮಿಕ ಇಲಾಖೆಗಳ ಮುಖಾಂತರ ಜಿಲ್ಲಾಡಳಿತ/ಸರಕಾರ ಆರ್ಥಿಕ ಪರಿಹಾರ ನೀಡಬೇಕು.
- ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಪ್ರಾಮಾಣಿಕವಾಗಿ, ದಕ್ಷತೆಯಿಂದ ಕಾರ್ಯನಿರ್ವಹಣೆ ಮಾಡಬೇಕು.

## ಪುರಿ ಜಗನ್ನಾಥ ದೇವಾಲಯದ ಆಚರಣೆಗಳ ಹಕ್ಕುಸ್ವಾಮ್ಯ ಪಡೆಯಲು ಮುಂದಾದ ಒಡಿಶಾ ಸರ್ಕಾರ

**ದಿಸ್‌ಪುರ:** ಒಡಿಶಾ ಸರ್ಕಾರವು ಪುರಿಯ ಜಗನ್ನಾಥ ದೇವಾಲಯದ ಹಳೆಯ ಆಚರಣೆಗಳನ್ನು ಕಾಪಾಡಲು ಒಂದು ಮಹತ್ವದ ಹೆಜ್ಜೆ ಇಟ್ಟಿದೆ. ಶತಮಾನಗಳಷ್ಟು ಹಳೆಯದಾದ ಈ ಆಚರಣೆಗಳ ಹಕ್ಕುಸ್ವಾಮ್ಯವನ್ನು ಪಡೆಯಲು ಮುಂದಾಗಿದೆ.

ಬೇರೆ ರಾಜ್ಯಗಳು ಮತ್ತು ಧಾರ್ಮಿಕ ಸಂಸ್ಥೆಗಳು ಈ ಆಚರಣೆಗಳನ್ನು ತಪ್ಪಾಗಿ ಬಳಸುತ್ತಿವೆ ಎಂಬ ಕಾರಣಕ್ಕೆ ಈ ಕ್ರಮ ಕೈಗೊಳ್ಳಲಾಗಿದೆ. ಇಸ್ಕಾನ್ ಮತ್ತು ಪಶ್ಚಿಮ ಬಂಗಾಳ ಸರ್ಕಾರವು ನಿಯಮಗಳನ್ನು ಉಲ್ಲಂಘಿಸುತ್ತಿವೆ ಎಂದು ದೂರುಗಳು ಬಂದಿವೆ. ಪುರಿಯ ರಾಜ ಮತ್ತು ಜಗನ್ನಾಥನ ಮೊದಲ ಸೇವಕ ಗಜಪತಿ ಮಹಾರಾಜ ದಿವ್ಯಸಿಂಗ ದೇವ್ ಅವರು ಈ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಒಡಿಶಾ ಸರ್ಕಾರವು ಈ ಕ್ರಮಕ್ಕೆ ಮುಂದಾಗಿದೆ.

**ಪುರಿ ಸಂಪ್ರದಾಯಗಳ ಉಲ್ಲಂಘನೆ:** ಪುರಿಯ ರಾಜ ಗಜಪತಿ ಮಹಾರಾಜ ದಿವ್ಯಸಿಂಗ ದೇವ್ ಅವರು, ಇಸ್ಕಾನ್ ಸಂಸ್ಥೆಯು



ವಿದೇಶಗಳಲ್ಲಿ ಸರಿಯಾದ ದಿನಾಂಕಗಳಿಲ್ಲದೆ ರಥಯಾತ್ರೆ ಮತ್ತು ಸ್ನಾನಯಾತ್ರೆಗಳನ್ನು ನಡೆಸುತ್ತಿದೆ ಎಂದು ಹೇಳಿದ್ದಾರೆ. ಪಶ್ಚಿಮ ಬಂಗಾಳ ಸರ್ಕಾರವು ದೀಘಾದಲ್ಲಿರುವ ಒಂದು ದೇವಾಲಯವನ್ನು ಜಗನ್ನಾಥ ಧಾಮ ಎಂದು ಕರೆದಿರುವುದು ತಪ್ಪು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಇದು ಧರ್ಮಗ್ರಂಥಗಳು, ಸಂಪ್ರದಾಯಗಳ ಉಲ್ಲಂಘನೆ ಎಂದು ಅವರು ಹೇಳಿದ್ದಾರೆ.

ಇಸ್ಕಾನ್ ಭಾರತವು ದೇಶದೊಳಗೆ ಸಾಂಪ್ರದಾಯಿಕ ಕ್ಯಾಲೆಂಡರ್ ಅನ್ನು ಅನುಸರಿಸಲು ಒಪ್ಪಿಕೊಂಡಿದೆ. ಆದರೆ ವಿದೇಶಗಳಲ್ಲಿ ಆಚರಣೆಗಳು ತಪ್ಪಾಗಿ ನಡೆಯುತ್ತಿವೆ. ನಾವು ಈ ವಿಷಯವನ್ನು ಮಾಯಾಪುರದಲ್ಲಿರುವ ಕೇಂದ್ರ ಕಚೇರಿ ಜೊತೆ ಚರ್ಚಿಸಿದ್ದೇವೆ. ಅವರು ಸರಿಯಾದ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ನಾವು ಭಾವಿಸುತ್ತೇವೆ ಎಂದು ಅವರು ಹೇಳಿದ್ದಾರೆ.

**ಪಶ್ಚಿಮ ಬಂಗಾಳದಲ್ಲಿ ಜಗನ್ನಾಥ ಧಾಮ:** ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಏಪ್ರಿಲ್‌ನಲ್ಲಿ ದೀಘಾದಲ್ಲಿ ಒಂದು ದೇವಾಲಯವನ್ನು ಉದ್ಘಾಟಿಸಿ, ಅದನ್ನು ಜಗನ್ನಾಥ ಧಾಮ ಎಂದು ಕರೆದರು. ಇದರಿಂದ ಒಡಿಶಾದಲ್ಲಿ ಅನೇಕ ಜನರು ಕೋಪಗೊಂಡಿದ್ದಾರೆ.

ಪುರಿಯ ಶಂಕರಾಚಾರ್ಯ ಗೋವರ್ಧನ ಪೀಠ ಮತ್ತು ಮುಕ್ತಿ ಮಂಟಪ ಪಂಡಿತ ಸಭಾದಂತಹ ಧಾರ್ಮಿಕ ಮುಖಂಡರು ಸಹ ಈ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಅವರು ಬ್ಯಾನರ್ಜಿ ಅವರಿಗೆ ಪತ್ರ ಬರೆದು ದೇವಾಲಯದ ಹೆಸರನ್ನು ಬದಲಾಯಿಸುವಂತೆ ಕೇಳಿಕೊಂಡಿದ್ದಾರೆ.

## ಶ್ರೀಂಗ್ಲಾ, ಉಜ್ವಲ್, ಸದಾನಂದನ್, ಮೀನಾಕ್ಷಿ ರಾಜ್ಯಸಭೆಗೆ

**ನವದೆಹಲಿ:** ಮಾಜಿ ವಿದೇಶಾಂಗ ಕಾರ್ಯದರ್ಶಿ ಹರ್ಷವರ್ಧನ್ ಶ್ರೀಂಗ್ಲಾ, 26/11 ಮುಂಬೈ ಭಯೋತ್ಪಾದಕ ದಾಳಿ ಪ್ರಕರಣದ ವಿಶೇಷ ಸಾರ್ವಜನಿಕ ಅಭಿಯೋಜಕ ಉಜ್ವಲ್ ನಿಕಮ್, ಕೇರಳ ಬಿಜೆಪಿ ನಾಯಕಿ ಸಿ. ಸದಾನಂದನ್ ಮಾಸ್ಟರ್ ಮತ್ತು ಇತಿಹಾಸಕಾರಿಣಿ ಮೀನಾಕ್ಷಿ ಜೈನ್ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಲಾಗಿದೆ.

ತಡರಾತ್ರಿ ಹೊರಡಿಸಿದ ಅಧಿಸೂಚನೆಯಲ್ಲಿ, ರಾಷ್ಟ್ರಪತಿಗಳು ನಾಲ್ವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿದ್ದಾರೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಭಾರತದ ಸಂವಿಧಾನದ ವಿಧಿ 80 ರ ಷರತ್ತು (1) ರ ಉಪ-ಷರತ್ತು (ಎ) ನಿಂದ ನೀಡಲಾದ ಅಧಿಕಾರವನ್ನು ಚಲಾಯಿಸಿ, ಆ ವಿಧಿಯ ಷರತ್ತು (3) ರೊಂದಿಗೆ ಓದಿ, ನಾಮನಿರ್ದೇಶಿತ ಸದಸ್ಯರ ನಿವೃತ್ತಿಯಿಂದ ಉಂಟಾದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ರಾಷ್ಟ್ರಪತಿಗಳು ಈ ಕೆಳಗಿನ ವ್ಯಕ್ತಿಗಳನ್ನು ರಾಜ್ಯಗಳ ಮಂಡಳಿಗೆ ನಾಮನಿರ್ದೇಶನ ಮಾಡಿದ್ದಾರೆ. ಉಜ್ವಲ್ ದೇವರಾವ್ ನಿಕಮ್, ಸಿ. ಸದಾನಂದನ್ ಮಾಸ್ಟರ್, ಹರ್ಷವರ್ಧನ್ ಶ್ರೀಂಗ್ಲಾ ಮತ್ತು ಡಾ. ಮೀನಾಕ್ಷಿ ಜೈನ್, ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ರಾಷ್ಟ್ರಪತಿಗಳು ವಿವಿಧ ಕ್ಷೇತ್ರಗಳಲ್ಲಿ ಶ್ರೇಷ್ಠ ವ್ಯಕ್ತಿಗಳಾದ 12 ಜನರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡುತ್ತಾರೆ.

## ತಮಿಳುನಾಡಿನಲ್ಲಿ ತೈಲ ಸಾಗಿಸುತ್ತಿದ್ದ ಸರಕು ಸಾಗಣೆ ರೈಲಿನಲ್ಲಿ ಬೆಂಕಿ

**ಚೆನ್ನೈ:** ತಿರುವಲ್ಲೂರು ಬಳಿ ಹೈಸ್ಪೀಡ್ ಡೀಸೆಲ್ ಸಾಗಿಸುತ್ತಿದ್ದ ಸರಕು ರೈಲಿನಲ್ಲಿ ಬೆಂಕಿ ಹೊತ್ತಿಕೊಂಡಿದೆ ಎಂದು ರೈಲ್ವೆ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ವ್ಯಾಗನ್‌ನಲ್ಲಿ ಬೆಂಕಿ ಕಾಣಿಸಿಕೊಂಡು ಬೇಗನೆ ಇತರ ರೈಲುಗಳಿಗೆ ಹರಡಿತು. ಯಾವುದೇ ಸಾವುನೋವು ಸಂಭವಿಸಿಲ್ಲ ಎಂದು ಅಧಿಕಾರಿ ತಿಳಿಸಿದ್ದಾರೆ. ಅಗ್ನಿಶಾಮಕ ದಳದವರನ್ನು ಸ್ಥಳಕ್ಕೆ ಧಾವಿಸಲಾಗಿದ್ದು, ರೈಲು ಸೇವೆಗಳಿಗೆ ಓವರ್‌ಹೆಡ್ ವಿದ್ಯುತ್ ಪೂರೈಕೆಯನ್ನು ಸ್ಥಗಿತಗೊಳಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ, ಸ್ಥಳೀಯ ರೈಲು ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ಅಲ್ಲದೆ, 8 ಎಕ್ಸ್‌ಪ್ರೆಸ್ ರೈಲುಗಳನ್ನು ರದ್ದುಗೊಳಿಸಲಾಗಿದೆ ಮತ್ತು 5 ಇತರ ರೈಲುಗಳನ್ನು ಬೇರೆಡೆಗೆ ತಿರುಗಿಸಲಾಗಿದೆ ಮತ್ತು 8 ರೈಲುಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ದಕ್ಷಿಣ ರೈಲ್ವೆ ಹೇಳಿಕೆಯಲ್ಲಿ ತಿಳಿಸಿದೆ.

ರೈಲ್ವೆ ಅಧಿಕಾರಿಗಳು ಸ್ಥಳದಲ್ಲಿ ಪರಿಸ್ಥಿತಿಯನ್ನು ಸಕ್ರಿಯವಾಗಿ ನಿರ್ವಹಿಸುತ್ತಿದ್ದಾರೆ. ಪುನಃಸ್ಥಾಪನೆ ಕಾರ್ಯ ಪ್ರಗತಿಯಲ್ಲಿದೆ ಮತ್ತು ಸಾಮಾನ್ಯ ರೈಲು ಕಾರ್ಯಾಚರಣೆಗಳು ಆದಷ್ಟು ಬೇಗ ಪುನರಾರಂಭಗೊಳ್ಳುತ್ತವೆ ಎಂದು ತಿಳಿಸಿದೆ. ಬೆಂಕಿಗೆ ಕಾರಣ ತಕ್ಷಣವೇ ತಿಳಿದಿಲ್ಲ ಎಂದು ಅಧಿಕಾರಿ ಹೇಳಿದರು.

## ಪಾಟ್ನಾದಲ್ಲಿ ಗ್ರಾಮೀಣ ಆರೋಗ್ಯಾಧಿಕಾರಿಯನ್ನು ಗುಂಡಿಕ್ಕಿ ಹತ್ಯೆ ಮಾಡಿದ ದುಷ್ಕರ್ಮಿಗಳು

**ಪಾಟ್ನಾ:** ಬಿಹಾರದ ಪಾಟ್ನಾದ ಪಿಪ್ರಾ ಪ್ರದೇಶದಲ್ಲಿ ಕಳೆದ ರಾತ್ರಿ ಗ್ರಾಮೀಣ ಆರೋಗ್ಯ ಅಧಿಕಾರಿಯೊಬ್ಬರನ್ನು ದುಷ್ಕರ್ಮಿಗಳು ಗುಂಡಿಕ್ಕಿ ಕೊಂದಿದ್ದಾರೆ ಮೃತರನ್ನು ಸುರೇಂದ್ರ ಕುಮಾರ್ (50) ಎಂದು ಗುರುತಿಸಲಾಗಿದೆ.

ಶೇಖ್‌ಪುರ ಗ್ರಾಮದಲ್ಲಿ ಕಳೆದ ರಾತ್ರಿ ಕುಮಾರ್ ಹೊಲದಲ್ಲಿ ಕೆಲಸ ಮಾಡುತ್ತಿದ್ದಾಗ ಈ ಘಟನೆ ನಡೆದಿದೆ,ಗುಂಡೇಟಿನ ಶಬ್ದಗಳು ಕೇಳಿಬಂದ ಹಿನ್ನಲೆಯಲ್ಲಿ ಗ್ರಾಮದ ಜನರು ಅಲ್ಲಿಗೆ ಹೋದಾಗ, ಅಧಿಕಾರಿ ಗುಂಡೇಟಿನಿಂದ ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದು ಕಂಡುಬಂದಿದೆ ಎಂದು ಡಿಸಿಪಿ ಮಸೌರ್ಹಿ, ಕನ್ಹಯ್ಯಾ ಸಿಂಗ್ ವರದಿಗಾರರಿಗೆ ತಿಳಿಸಿದರು.

ಕುಮಾರ್ ಅವರನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಅವರು ಚಿಕಿತ್ಸೆಯ ಸಮಯದಲ್ಲಿ ಸಾವನ್ನಪ್ಪಿದರು ಎಂದು ಸಿಂಗ್ ಹೇಳಿದರು.ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು.ಕಳೆದ ಒಂದು ವಾರದಲ್ಲಿ ರಾಜ್ಯ ರಾಜಧಾನಿಯನ್ನು ಬೆಚ್ಚಿಬೀಳಿಸಿರುವ ಸರಣಿ ಕೊಲೆಗಳ ಬೆನ್ನಲ್ಲೇ ಈ ಘಟನೆ ನಡೆದಿದೆ.

## ಪಾಸ್‌ಪೋರ್ಟ್‌ಗೆ ನಕಲಿ ದಾಖಲೆ ಸಲ್ಲಿಸಿ ಪರಾರಿಯಾಗಿದ್ದ ಆರೋಪಿ ಬಂಧನ

**ಪಣಜಿ:** ಪಾಸ್‌ಪೋರ್ಟ್ ಪಡೆಯಲು ನಕಲಿ ದಾಖಲೆಗಳನ್ನು ಒದಗಿಸಿದ ಆರೋಪದ ಮೇಲೆ ಪರಾರಿಯಾಗಿದ್ದ ಆರೋಪಿಯನ್ನು ಚೆನ್ನೈನಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಉತ್ತರ ಗೋವಾದ ಮಾಪುಸಾ ಪಟ್ಟಣದ ಬಳಿಯ ಖೋರ್ಲಿಮ್ ಗ್ರಾಮದ ನಿವಾಸಿ ಪಂಕಜ್ ಚೌರೆ ಪಾಸ್‌ಪೋರ್ಟ್ ಅರ್ಜಿಗಳಿಗಾಗಿ ಆನ್‌ಲೈನ್ ಪೋರ್ಟಲ್ ಮೂಲಕ ನಕಲಿ ದಾಖಲೆಗಳನ್ನು ಸಲ್ಲಿಸಿದ್ದ ಎಂದು ಪೊಲೀಸ್ ವಕ್ತಾರರು ತಿಳಿಸಿದ್ದಾರೆ. ಕಳೆದ ಜೂನ್ 30 ರಂದು ಪಣಜಿಯ ಪಟ್ಟೊದಲ್ಲಿರುವ ಪಾಸ್‌ಪೋರ್ಟ್ ಕಚೇರಿಯಲ್ಲಿ ಅವರಿಗೆ ಅಪಾಯಿಂಟ್‌ಮೆಂಟ್ ಇತ್ತು. ಆರೋಪಿಯೊಂದಿಗಿನ ಸಂವಾದದ ಸಮಯದಲ್ಲಿ, ಪಾಸ್‌ಪೋರ್ಟ್ ಅಧಿಕಾರಿ ದಾಖಲೆ ಬಗ್ಗೆ ಸಂಶಯ ವ್ಯಕ್ತಪಡಿಸಿದರು. ಈ ವೇಳೆ ಆರೋಪಿ ಪಾಸ್‌ಪೋರ್ಟ್ ಕಚೇರಿಯಿಂದ ಪರಾರಿಯಾಗಿ ನಂತರ ನಾಪತ್ತೆಯಾಗಿದ್ದಾನೆ. ನಂತರ ದಾಖಲೆ ಪರಿಶೀಲನೆಯಲ್ಲಿ ಅವರು ಒದಗಿಸಿದ ಆಧಾರ್ ಕಾರ್ಡ್‌ನಲ್ಲಿರುವ ವಿಳಾಸ ನಕಲಿ ಎಂದು ತಿಳಿದುಬಂದಿದೆ ಎಂದು ವಕ್ತಾರರು ತಿಳಿಸಿದ್ದಾರೆ.

## ಭಾರತದ ವಿರುದ್ಧ ಅಣ್ವಸ್ತ್ರ ಪ್ರಯೋಗಕ್ಕೆ ಮುಂದಾಗಲಿಲ್ಲ: ಶೆಹಬಾಜ್

**ಇಸ್ಲಾಮಾಬಾದ್:** ಭಾರತ ಆಪರೇಷನ್ ಸಿಂದೂರ ಕೈಗೊಂಡ ವೇಳೆ ಪಾಕಿಸ್ತಾನ ಅಣ್ವಸ್ತ್ರ ಪ್ರಯೋಗಕ್ಕೆ ಮುಂದಾಗಲಿಲ್ಲ ಎಂದು ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಹೇಳಿದ್ದಾರೆ. ವಿದ್ಯಾರ್ಥಿಗಳ ಸಮೂಹವನ್ನು ಉದ್ದೇಶಿಸಿ ಮಾತನಾಡಿದ ಷರೀಫ್, ದೇಶದ ಪರಮಾಣು ಕಾರ್ಯಕ್ರಮವು ಕೇವಲ ಶಾಂತಿಯುತ ಚಟುವಟಿಕೆಗಳು ಮತ್ತು ಆತ್ಮರಕ್ಷಣೆಗಾಗಿ ಮಾತ್ರ, ಎಂದು ಹೇಳಿದ್ದಾರೆ.

ಏಪ್ರಿಲ್ 22ರ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ 26 ಜನರು ಮೃತಪಟ್ಟ ಬಳಿಕ ಭಾರತವು ಪಾಕಿಸ್ತಾನದ ಭಯೋತ್ಪಾದಕರ ನೆಲೆಗಳನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ ಆರಂಭಿಸಿತ್ತು. ಇದಕ್ಕೆ ಪ್ರತಿಯಾಗಿ ಪಾಕಿಸ್ತಾನ ದಾಳಿಗೆ ಮುಂದಾದಾಗ ಭಾರತ ವೈಮಾನಿಕ ದಾಳಿ ಮೂಲಕ ಪಾಕ್‌ನ ಹಲವು ವಾಯುನೆಲೆಗಳನ್ನು ಧ್ವಂಸಗೊಳಿಸಿತ್ತು.

### ● ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜಗಳ ಕಾಯದ ಕ್ಷೇತ್ರವೇ ಇಲ್ಲ

## 200 ಮಿಲಿಯನ್ ಪಾವತಿಗೆ ಒಪ್ಪಿಕೊಂಡ ಕೊಲಂಬಿಯಾ ವಿಶ್ವವಿದ್ಯಾಲಯ

**ವಾಷಿಂಗ್ಟನ್ ಡಿಸಿ:** ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜಗಳ ಕಾಯದ ಕ್ಷೇತ್ರವೇ ಇಲ್ಲ. ವ್ಯಾಪಾರ, ಯುದ್ಧ, ಆಡಳಿತ, ವಿಪಕ್ಷ ಹೀಗೆ ಎಲ್ಲದರಲ್ಲೂ ಎಲ್ಲರೊಂದಿಗೂ ಜಗಳವಾಡುವ ಡೊನಾಲ್ಡ್ ಟ್ರಂಪ್, ಶಿಕ್ಷಣ ಕ್ಷೇತ್ರವನ್ನೂ ಬಿಡದಿರುವ ತೀರ್ಮಾನ ಮಾಡಿದ್ದಾರೆ.

**ಶಿಕ್ಷಣ ಕ್ಷೇತ್ರವನ್ನೂ ಬಿಡದ ಟ್ರಂಪ್**

ಈಗಾಗಲೇ ಪ್ರತಿಷ್ಠಿತ ಹಾರ್ವರ್ಡ್ ವಿಶ್ವವಿದ್ಯಾಲಯ ಜೊತೆಗೆ ಜಗಳವಾಡಿಕೊಂಡಿರುವ ಡೊನಾಲ್ಡ್ ಟ್ರಂಪ್, ಇದೀಗ ಕೊಲಂಬಿಯಾ ವಿಶ್ವವಿದ್ಯಾಲಯದ ಮೇಲೂ ಮುನಿಸಿಕೊಂಡಿದ್ದಾರೆ. ಆದರೆ ಕೊಲಂಬಿಯಾ ವಿವಿ ಮಾತ್ರ ಹಾರ್ವರ್ಡ್ ವಿವಿ ರೀತಿಯಲ್ಲಿ ಅಧ್ಯಕ್ಷರೊಂದಿಗೆ ಕಾದಾಟಕ್ಕಿಳಿಯದೇ ಮೈತ್ರಿಯ ಮೊರೆ ಹೋಗುವ ನಿರ್ಧಾರ ಮಾಡಿದೆ.

ಯಹೂದಿ ವಿದ್ಯಾರ್ಥಿಗಳನ್ನು ಕಿರುಕುಳದಿಂದ ರಕ್ಷಿಸುವಲ್ಲಿ ಕೊಲಂಬಿಯಾ ವಿಶ್ವವಿದ್ಯಾಲಯ ವಿಫಲವಾಗಿದೆ ಎಂಬ ಆರೋಪ ಕೇಳಿಬಂದಿದ್ದು, ಡೊನಾಲ್ಡ್ ಟ್ರಂಪ್ ಆಡಳಿತದೊಂದಿಗೆ ಈ ವಿಷಯವನ್ನು ಇತ್ಯರ್ಥಪಡಿಸಿಕೊಳ್ಳಲು ಕೊಲಂಬಿಯಾ ವಿಶ್ವವಿದ್ಯಾಲಯವು ನೂರಾರು ಮಿಲಿಯನ್ ಡಾಲರ್‌ಗಳನ್ನು ಪಾವತಿಸಲು ಸಂಭಾವ್ಯವಾಗಿ ಒಪ್ಪಿಕೊಂಡಿದೆ.

ಐವಿ ಲೀಗ್ ವಿಶ್ವವಿದ್ಯಾಲಯದ ಅಧಿಕಾರಿಗಳು ಮುಂದಿನ ವಾರಾಂತ್ಯದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಿ ಒಪ್ಪಂದವನ್ನು ಅಂತಿಮಗೊಳಿಸುವ ನಿರೀಕ್ಷೆಯಿದೆ. ಟ್ರಂಪ್ ರದ್ದುಗೊಳಿಸಿದ್ದ ಫೆಡರಲ್ ಸಂಶೋಧನಾ ನಿಧಿಯಲ್ಲಿನ 400 ಮಿಲಿಯನ್ ಅಮೆರಿಕನ್ ಡಾಲರ್‌ನಲ್ಲಿ ಕೆಲವನ್ನು ಪುನಃ ಸ್ಥಾಪಿಸಲು ಒಪ್ಪಂದವು ಪ್ರಯತ್ನಿಸುತ್ತದೆ. ಇದಕ್ಕೆ ಪ್ರತಿಯಾಗಿ ನಾಗರಿಕ ಹಕ್ಕುಗಳ ಉಲ್ಲಂಘನೆಯ ಆರೋಪಗಳಿಗೆ ಸಂಬಂಧಿಸಿದಂತೆ, ಕೊಲಂಬಿಯಾ ಪರಿಹಾರಗಳನ್ನು ಪಾವತಿಸುತ್ತದೆ ಮತ್ತು ಪ್ರವೇಶಗಳು ಮತ್ತು ವಿದೇಶಿ ಉಡುಗೊರೆಗಳ ಬಗ್ಗೆ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ.

ಆದಾಗ್ಯೂ, ಮುಂಬರುವ ವರ್ಷಗಳಲ್ಲಿ ವಿಶ್ವವಿದ್ಯಾಲಯದ ಮೇಲೆ, ಫೆಡರಲ್ ಸರ್ಕಾರಕ್ಕೆ ನಿಯಂತ್ರಣವನ್ನು ನೀಡುವ ಒಪ್ಪಿಗೆಯ ತೀರ್ಪು ಈ ಚರ್ಚೆಯ ಭಾಗವಾಗಿಲ್ಲ.



### ವಿವಿ ನಿರ್ಧಾರ ಟೀಕೆಗೆ ಗುರಿ

**ಟ್ರಂಪ್ ಆಡಳಿತದೊಂದಿಗೆ ಮಾತುಕತೆ ನಡೆಸುವ ಕೊಲಂಬಿಯಾ ವಿವಿ ನಿರ್ಧಾರ ಟೀಕೆಗೆ ಗುರಿಯಾಗಿದೆ. ಕೊಲಂಬಿಯಾ ವಿವಿ ಅಮೆರಿಕ ಅಧ್ಯಕ್ಷರಿಗೆ ಶರಣಾಗಿದೆ ಎಂಬ ಆರೋಪ ಹೊರಿಸಲಾಗಿದ್ದು, ಕೊಲಂಬಿಯಾದ ಹಂಗಾಮಿ ಅಧ್ಯಕ್ಷೆ ಕ್ಲೇರ್ ಶಿಪ್‌ಮನ್ ಕಾರ್ಯತಂತ್ರವನ್ನು ಸಮರ್ಥಿಸಿಕೊಂಡಿದ್ದಾರೆ. ಕಾನೂನನ್ನು ಅನುಸರಿಸುವುದು ಮತ್ತು ದೂರನ್ನು ಪರಿಹರಿಸಲು ಪ್ರಯತ್ನಿಸುವುದು ಶರಣಾಗತಿಯಲ್ಲ ಎಂದು ಕ್ಲೇರ್ ಶಿಪ್‌ಮನ್ ಹೇಳಿದ್ದಾರೆ.**

ವಿಶ್ವವಿದ್ಯಾನಿಲಯವು ಫೆಡರಲ್ ಸರ್ಕಾರದೊಂದಿಗೆ ಚರ್ಚೆಗಳನ್ನು ಮುಂದುವರಿಸುವತ್ತ ಗಮನಹರಿಸಿದೆ.

ಈ ಸಮಯದಲ್ಲಿ ಯಾವುದೇ ಅಂತಿಮ ನಿರ್ಣಯ ಕೈಗೊಂಡಿಲ್ಲ ಎಂದು ವಿಶ್ವವಿದ್ಯಾಲಯದ ವಕ್ತಾರ ವರ್ಜೀನಿಯಾ ಲ್ಯಾಮ್ ಅಬ್ರಾಮ್ಸ್ ಸ್ಪಷ್ಟಪಡಿಸಿದ್ದಾರೆ. ಇತ್ತೀಚೆಗೆ ಹಾರ್ವರ್ಡ್ ವಿವಿಯ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿದ್ದ ವಿದೇಶಿ ವಿದ್ಯಾರ್ಥಿಗಳ ಬಿ1/ಬಿ2

### 200 ಮಿಲಿಯನ್ ಪಾವತಿಗೆ ಒಪ್ಪಿಗೆ

**ನಾಗರಿಕ ಹಕ್ಕುಗಳ ಉಲ್ಲಂಘನೆ ಆರೋಪಕ್ಕೆ ಕೊಲಂಬಿಯಾ ವಿಶ್ವವಿದ್ಯಾಲಯವು 200 ಮಿಲಿಯನ್ ಅಮೆರಿಕನ್ ಡಾಲರ್ ಅಥವಾ ಅದಕ್ಕಿಂತ ಹೆಚ್ಚಿನ ಪರಿಹಾರವನ್ನು ಪಾವತಿಸಬಹುದು. ಒಪ್ಪಂದದ ನಿಯಮಗಳನ್ನು ಚರ್ಚಿಸಲು ವಿಶ್ವವಿದ್ಯಾಲಯದ ಅಧಿಕಾರಿಗಳು ಕಳೆದ ಭಾನುವಾರ ಸಭೆ ನಡೆಸಿದ್ದು. ಟ್ರಂಪ್ ಆಡಳಿತ ಮತ್ತು ಕೊಲಂಬಿಯಾ ವಿಶ್ವವಿದ್ಯಾಲಯದ ನಡುವಿನ ಮಾತುಕತೆಗಳನ್ನು ಟ್ರಂಪ್ ಸಲಹೆಗಾರ ಸ್ಟೀಫನ್ ಮಿಲ್ಲರ್ ನೇತೃತ್ವದ ತಂಡವು ನಿರ್ದೇಶಿಸಲಿದೆ.**

ವೀಸಾ ರದ್ದು ಮಾಡಿ ಟ್ರಂಪ್ ಆಡಳಿತ ಆದೇಶ ಹೊರಡಿಸಿದ್ದನ್ನು ಇಲ್ಲಿ ಸ್ಮರಿಸಬಹುದು. ಫೆಡರಲ್ ಸರ್ಕಾರ ಹೊಂದಿರುವ ಸಮಸ್ಯೆಗಳನ್ನು ಪರಿಹರಿಸಲು ಕೊಲಂಬಿಯಾ ಪ್ರಯತ್ನಿಸುತ್ತಿದೆ.

## ಪೊಲೀಸ್ ಕಸ್ಟಡಿ ಸಾವು ವಿರೋಧಿಸಿ ಬೀದಿಗಿಳಿದ ವಿಜಯ್



**ಚೆನ್ನೈ:** ಶಿವಗಂಗೈ ಜಿಲ್ಲೆಯಲ್ಲಿ ಪೊಲೀಸ್ ಕಸ್ಟಡಿಯಲ್ಲಿ ಸಾವನ್ನಪ್ಪಿದ್ದಾರೆ ಎನ್ನಲಾದ ಖಾಸಗಿ ಭದ್ರತಾ ಸಿಬ್ಬಂದಿ ಅಜಿತ್ ಕುಮಾರ್ ಸಾವಿಗೆ ನ್ಯಾಯ ದೊರಕಿಸಿಕೊಡುವಂತೆ ಒತ್ತಾಯಿಸಿ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ಮತ್ತು ಖ್ಯಾತ ಚಿತ್ರನಟ ವಿಜಯ್ ಚೆನ್ನೈನಲ್ಲಿ ಬೃಹತ್ ಪ್ರತಿಭಟನೆ ನಡೆಸಿದ್ದಾರೆ. ರಾಜಕೀಯ ಪಕ್ಷವನ್ನು ಪ್ರಾರಂಭಿಸಿದ ನಂತರ ವಿಜಯ್ ಅವರು ನಡೆಸುತ್ತಿರುವ ಮೊದಲ ಸಾರ್ವಜನಿಕ ಪ್ರತಿಭಟನೆ ಇದಾಗಿದೆ.ಮದಾಪುರಂ ದೇವಸ್ಥಾನದಲ್ಲಿ ದೇವಸ್ಥಾನದ ಕಾವಲುಗಾರರಾಗಿ ಕೆಲಸ ಮಾಡುತ್ತಿದ್ದ ಅಜಿತ್ ಕುಮಾರ್ ಕಳೆದ ತಿಂಗಳು ಪೊಲೀಸ್ ಕಸ್ಟಡಿಯಲ್ಲಿ ನಿಧನರಾಗಿದ್ದರು.

ಸೆಷನ್ ನ್ಯಾಯಾಲಯದ ನ್ಯಾಯಾಧೀಶರ ವರದಿಯು ಅಕ್ರಮ ಕಸ್ಟಡಿ ಮತ್ತು ಚಿತ್ರಹಿಂಸೆಯನ್ನು ದೃಢಪಡಿಸಿದೆ ಮತ್ತು ಮದ್ರಾಸ್ ಹೈಕೋರ್ಟ್‌ನ ಮಧುರೈ ಪೀಠವು ಆಗಸ್ಟ್ 20 ರೊಳಗೆ ಅಂತಿಮ ವರದಿಯನ್ನು ಸಲ್ಲಿಸುವಂತೆ ಸಿಬಿಐಗೆ ಸೂಚಿಸಿದೆ.

### ಈಗಾಗಲೇ ಸ್ಥಳೀಯ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ

**ಐದು ಪೊಲೀಸ್ ಸಿಬ್ಬಂದಿಯನ್ನು ಬಂಧಿಸಲಾಗಿದೆ, ಡಿಎಸ್ಪಿಯನ್ನು ಅಮಾನತುಗೊಳಿಸಲಾಗಿದೆ ಮತ್ತು ಶಿವಗಂಗೈ ಎಸ್ಪಿಯನ್ನು ಕಡ್ಡಾಯವಾಗಿ ಕಾಯ್ದಿರಿಸಲಾಗಿದೆ. ಪ್ರಕರಣವನ್ನು ಮತ್ತಷ್ಟು ತನಿಖೆ ಮಾಡಲು ಹೈಕೋರ್ಟ್ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡವನ್ನು ರಚಿಸಬೇಕೆಂದು ಟಿವಿಕೆ ಒತ್ತಾಯಿಸುತ್ತಿದೆ.**

ಹೆಚ್ಚುತ್ತಿರುವ ಆಕ್ರೋಶದ ನಂತರ, ತಮಿಳುನಾಡು ಸರ್ಕಾರ ಪ್ರಕರಣವನ್ನು ಸಿಬಿಐಗೆ ವರ್ಗಾಯಿಸಿತು, ಅದು ನಿನ್ನೆ ಅಧಿಕೃತವಾಗಿ ತನಿಖೆಯನ್ನು ವಹಿಸಿಕೊಂಡಿತು. ಕುಟುಂಬಕ್ಕೆ ಕ್ಷಮೆಯಾಚಿಸಿದ ಮುಖ್ಯಮಂತ್ರಿ ಎಂಕೆ ಸ್ಟಾಲಿನ್, ತನಿಖೆಯ ಬಗ್ಗೆ ಯಾವುದೇ ಸಂದೇಹಗಳು ಇರಬಾರದು ಎಂದು ಹೇಳಿ ಸಿಬಿಐ ತನಿಖೆಗೆ ಆದೇಶಿಸಿದರು.

ನಿಕಿತಾ ಎಂಬ ಮಹಿಳೆ ಸಲ್ಲಿಸಿದ ಮೂಲ ಆಭರಣ ಕಳ್ಳತನದ ದೂರನ್ನು ಕೇಂದ್ರ ಸಂಸ್ಥೆಗೆ ಹಸ್ತಾಂತರಿಸಲಾಗಿದೆ. ಕಸ್ಟಡಿಯಲ್ಲಿ ಸಾವನ್ನಪ್ಪಿದ ಇತರರ ಕುಟುಂಬಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದವು. ಈ ಪ್ರತಿಭಟನೆಯನ್ನು ಟಿವಿಕೆಯ ಮುಖ್ಯಮಂತ್ರಿ ಮುಖವಾಗಿ ತಮ್ಮನ್ನು ತಾವು ಗುರುತಿಸಿಕೊಂಡಿರುವ ವಿಜಯ್ ಅವರ ಶಕ್ತಿ ಪ್ರದರ್ಶನವಾಗಿ ಮಾರ್ಪಟ್ಟಿದೆ.

## ಬಿಹಾರ ಚುನಾವಣೆ: ತೇಜಸ್ವಿ ಮನೆಯಲ್ಲಿ ಇಂಡಿ ನಾಯಕರ ಸಭೆ

**ಪಾಟ್ನಾ:** ಬಿಹಾರ ವಿಧಾನಸಭಾ ಚುನಾವಣೆಯ ಸಿದ್ಧತೆಗಳ ಕುರಿತು ಇಂಡಿಯಾ ಮೈತ್ರಿಕೂಟವು ಪಾಟ್ನಾದಲ್ಲಿ ಒಂದು ಪ್ರಮುಖ ಕಾರ್ಯತಂತ್ರದ ಸಭೆ ನಡೆಸಿತು. ವಿರೋಧ ಪಕ್ಷದ ನಾಯಕ ತೇಜಸ್ವಿ ಯಾದವ್ ಅವರ ನಿವಾಸದಲ್ಲಿ ಸುಮಾರು 6 ಗಂಟೆಗಳ ಕಾಲ ಸಭೆ ನಡೆಸಿದ್ದು, ಸೀಟು ಹಂಚಿಕೆ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಲಾಯಿತು.

ಕಾಂಗ್ರೆಸ್, ಎಡ ಪಕ್ಷಗಳು ಮತ್ತು ವಿಕಾಶ್‌ಶೀಲ್ ಇನ್ಸಾನ್ ಪಕ್ಷದ ಉನ್ನತ ನಾಯಕರು ಕೂಡ ಸಭೆಯಲ್ಲಿ ಹಾಜರಿದ್ದರು. ಸಭೆಯ ನಂತರ, ತೇಜಸ್ವಿ ಯಾದವ್ ಮಾಧ್ಯಮಗಳೊಂದಿಗೆ ಬಳಿ ಮಾತನಾಡಿ, ಹೌದು, ಸೀಟು ಹಂಚಿಕೆ ಬಗ್ಗೆ ಮಾತುಕತೆ ನಡೆದಿದೆ. ಆದರೆ ಹೆಚ್ಚಿನ ವಿಚಾರವನ್ನು ಸಾರ್ವಜನಿಕಗೊಳಿಸಲಾಗುವುದಿಲ್ಲ, ಎಲ್ಲವೂ ನಿರ್ಧಾರವಾದ ಬಳಿಕ ತಿಳಿಸಲಾಗುವುದು ಎಂದಿದ್ದಾರೆ.

**ಸೀಟು ಹಂಚಿಕೆ ಕುರಿತು ಚರ್ಚೆ**

ತೇಜಸ್ವಿ ಯಾದವ್ ಅವರು ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಎನ್‌ಡಿಎ ಸರ್ಕಾರದ ಮೇಲೂ ದಾಳಿ ನಡೆಸಿದರು. ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಅವರ ಮೇಲೂ ಅವರು ವಾಗ್ದಾಳಿ ನಡೆಸಿದರು. ಪ್ರಸ್ತುತ ಸರ್ಕಾರ ಅವರ ಯೋಜನೆಗಳನ್ನು ನಕಲು ಮಾಡುತ್ತಿದೆ ಎಂದು ಅವರು ಹೇಳಿದರು. ಸನಾವು ಯುವಕರಿಗಾಗಿ ಯುವ ಆಯೋಗ ಮತ್ತು ವೃದ್ಧರ ಪಿಂಚಣಿ ಹೆಚ್ಚಿಸುವ ಬಗ್ಗೆ ಮಾತನಾಡಿದ್ದೆವು, ಈಗ ಅವರು ಅದನ್ನೇ ಮಾಡುತ್ತಿದ್ದಾರೆ. ಈ ಜನರು ಶೀಘ್ರದಲ್ಲೇ ನಮ್ಮ ಮೈ ಬೆಹನ್ ಸಮ್ಮಾನ್ ಯೋಜನೆಯನ್ನು ನಕಲು ಮಾಡುತ್ತಾರೆ ಎಂದು ನನಗೆ



ಖಚಿತವಾಗಿದೆ ಎಂದು ಅವರು ಹೇಳಿದರು.

ಈ ಯೋಜನೆಯಡಿಯಲ್ಲಿ, ಆರ್‌ಜೆಡಿ ಸರ್ಕಾರ ರಚಿಸಿದರೆ ರಾಜ್ಯದ ಮಹಿಳೆಯರಿಗೆ ಪ್ರತಿ ತಿಂಗಳು 2,500 ರೂ. ಆರ್ಥಿಕ ನೆರವು ನೀಡುವುದಾಗಿ ಭರವಸೆ ನೀಡಲಾಗಿದೆ. ಸಾರ್ವಜನಿಕರು ಎನ್‌ಡಿಎ ಸರ್ಕಾರದಿಂದ ಬೇಸತ್ತಿದ್ದಾರೆ ಏಕೆಂದರೆ ಅದಕ್ಕೆ ಸ್ಪಷ್ಟ ದೃಷ್ಟಿಕೋನವಿಲ್ಲ ಮತ್ತು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ನಿರಂತರವಾಗಿ ಹದಗೆಡುತ್ತಿದೆ ಎಂದರು.

ಬಿಹಾರದಲ್ಲಿ ಚುನಾವಣೆಗಳನ್ನು ಒಗ್ಗಟ್ಟಿನಿಂದ ಎದುರಿಸಲು ಇಂಡಿಯಾ ಮೈತ್ರಿಕೂಟವು ಗಂಭೀರವಾಗಿ ಕಾರ್ಯತಂತ್ರ ರೂಪಿಸುತ್ತಿದೆ ಎಂಬುದು ಸ್ಪಷ್ಟವಾಗಿದೆ ಮತ್ತು ತೇಜಸ್ವಿ ಯಾದವ್ ಅವರನ್ನು ಮುಖ್ಯಮಂತ್ರಿ ಹುದ್ದೆಗೆ ಅಭ್ಯರ್ಥಿಯನ್ನಾಗಿ ಮಾಡುವ ಸಾಧ್ಯತೆ ಬಲವಾಗಿದೆ.

## ಹಿಂದೂ ಎಂದು ಹೇಳಿಕೊಂಡು ಯುವತಿಯನ್ನು ವಿವಾಹವಾಗುತ್ತಿದ್ದ ಮುಸ್ಲಿಂ ವ್ಯಕ್ತಿಯ ಬಂಧನ

**ಪ್ರತಾಪ್‌ಗಢ:** ಉತ್ತರ ಪ್ರದೇಶದ ಪ್ರತಾಪ್‌ಗಢ ಜಿಲ್ಲೆಯ ದೇವಸ್ಥಾನವೊಂದರಲ್ಲಿ ಹಿಂದೂ ಎಂದು ಹೇಳಿಕೊಂಡು ಯುವತಿಯನ್ನು ಮದುವೆಯಾದ ಮುಸ್ಲಿಂ ವ್ಯಕ್ತಿಯನ್ನು ಬಂಧಿಸಲಾಗಿದೆ.

ಬೆಲ್ಹಾ ಮಾಯ್ ದೇವಾಲಯದ ಪ್ರಧಾನ ಅರ್ಚಕ ಮಂಗಳ ಪ್ರಸಾದ್ ಅವರ ಮಧ್ಯಸ್ಥಿಕೆಯ ಮೇರೆಗೆ ಈ ಪ್ರಕರಣದಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ಪೂರ್ವ ವಿಭಾಗದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್‌ಪಿ) ಶೈಲೇಂದ್ರ ಲಾಲ್ ತಿಳಿಸಿದ್ದಾರೆ. ಪುರುಷ ಮತ್ತು ಮಹಿಳೆ ಮದುವೆಯಾಗುತ್ತಿರುವುದನ್ನು ನೋಡಿ ಮುಖ್ಯ ಅರ್ಚಕರು ಅನುಮಾನಗೊಂಡು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ಎಂದು ಅವರು ಹೇಳಿದರು. ಮುಖ್ಯ ಅರ್ಚಕರು ತಮ್ಮ ದೂರಿನಲ್ಲಿ ಪೊಲೀಸರಿಗೆ ತಿಳಿಸಿದ್ದು, ಕೆಲವು ಅನುಮಾನಗಳು ಬಂದಾಗ ದಂಪತಿಗಳ ಹೆಸರನ್ನು ಕೇಳಿರುವುದಾಗಿ ತಿಳಿಸಿದ್ದಾರೆ. ಪ್ರಯಾಗರಾಜ್‌ನ ಮಲಕಾ ನಿವಾಸಿ ಶಾಲಿನಿ ಪ್ರಜಾಪತಿ ಎಂಬ ಮಹಿಳೆ ತನ್ನ ಹೆಸರನ್ನು ಬಹಿರಂಗಪಡಿಸಿದ್ದಾರೆ ಮತ್ತು ಪ್ರಯಾಗರಾಜ್‌ನ ಮಲಕಾ ನಿವಾಸಿ ರಾಜೀವ್ ಎಂಬ ವ್ಯಕ್ತಿ ತನ್ನ ಹೆಸರನ್ನು ಹೇಳಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

> **ವಿಷಯ ಬೆಳಕಿಗೆ ಬಂದ ತಕ್ಷಣ, ಹಿಂದೂ ಸಂಘಟನೆಗಳ ಸದಸ್ಯರು ಸ್ಥಳಕ್ಕೆ ಆಗಮಿಸಿ ಗಲಾಟೆ ಆರಂಭಿಸಿದರು.ಪೊಲೀಸರು ಆರೋಪಿಯನ್ನು ಬಂಧಿಸಿ ಉತ್ತರ ಪ್ರದೇಶ ನಿಷೇಧ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ -ಎಎಸ್ಪಿ**



ಪೊಲೀಸರು ಆ ವ್ಯಕ್ತಿಯನ್ನು ಆಧಾರ್ ಕಾರ್ಡ್ ಕೇಳಿದಾಗ, ಅವನು ತನ್ನ ಹೆಸರು ಮತ್ಲೂಬ್ ಆಲಂ ಎಂದು ಬಹಿರಂಗಪಡಿಸಿದ್ದಾನೆ ಎಂದು ಎಎಸ್‌ಪಿ ಹೇಳಿದರು. ಮಹಿಳೆಯನ್ನು ಕೇಳಿದಾಗ, ಬಲವಂತವಾಗಿ ಧರ್ಮ ಮತಾಂತರಿಸುವ ಉದ್ದೇಶದಿಂದ ದೇವಸ್ಥಾನದಲ್ಲಿ ಮದುವೆಯಾಗುತ್ತಿರುವುದಾಗಿ ಆಕೆ ಹೇಳಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಆ ವ್ಯಕ್ತಿ ತನ್ನ ಪ್ರೀತಿಯ ಜಾಲದಲ್ಲಿ ಸಿಲುಕಿಸಿ ಮಹಿಳೆಯನ್ನು ಧರ್ಮ ಮತಾಂತರಿಸುವಂತೆ ಒತ್ತಡ ಹೇರುತ್ತಿದ್ದ ಎಂದು ಆರೋಪಿಸಲಾಗಿದೆ ಎಂದು ಅವರು ಹೇಳಿದರು.

## ಶಿಕ್ಷಕನಿಂದ ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ: ದೂರು ಕೊಟ್ರು ಕ್ಯಾರೆ ಎನ್ನದ ಆಡಳಿತದ ವಿರುದ್ಧ ಬೆಂಕಿ ಹಂಚಿಕೊಂಡು ಸಂತ್ರಸ್ತೆ ಆಕ್ರೋಶ

**ಬಾಲಸೋರ್:** ಲೈಂಗಿಕ ಕ್ರಿಯೆಗೆ ಸಹಕರಿಸುವಂತೆ ಒತ್ತಾಯಿಸಿ ಶಿಕ್ಷಕನೊಬ್ಬ ಯುವತಿಗೆ ನಿರಂತರ ಕಿರುಕುಳ ನೀಡುತ್ತಿದ್ದ ಆರೋಪದ ಮೇಲೆ ನ್ಯಾಯ ದೊರಕಿಸಿಕೊಡುವಂತೆ ಆಗ್ರಹಿಸಿ ಶನಿವಾರ(ಜು.12) ಕಾಲೇಜು ಆವರಣದಲ್ಲಿ ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಒಡಿಶಾದಲ್ಲಿ ನಡೆದಿದೆ.

ಒಡಿಶಾದ ಬಾಲಸೋರ್ ಜಿಲ್ಲೆಯ ಫಕೀರ್ ಮೋಹನ್ ಕಾಲೇಜಿನಲ್ಲಿ ಸಮೀರಾ ಕುಮಾರ್ ಸಾಹು ಎಚ್‌ಒಡಿಯಾಗಿ ಕೆಲಸ ಮಾಡುತ್ತಿದ್ದರು. ಅವರು ಶೈಕ್ಷಣಿಕ ಅಧ್ಯಯನ ವಿಭಾಗದ ಮುಖ್ಯಸ್ಥರಾಗಿದ್ದರು. ಆತ ಆಕೆಗೆ ಪ್ರತಿನಿತ್ಯ ಲೈಂಗಿಕತೆಗೆ ಸಹಕರಿಸುವಂತೆ ಒತ್ತಾಯ ಮಾಡುತ್ತಿದ್ದ. ಇದಕ್ಕೆ ಒಪ್ಪದಿದ್ದರೆ ಮುಂದಿನ ಶಿಕ್ಷಣ ಜೀವನಕ್ಕೆ ತೊಂದರೆಯನ್ನುಂಟು ಮಾಡುವುದಾಗಿ ಬೆದರಿಕೆ ಹಾಕಿದ್ದ. ಪ್ರತಿದಿನವೂ ಇದರಿಂದ ಬೇಸತ್ತಿದ್ದ ವಿದ್ಯಾರ್ಥಿನಿ ಕಾಲೇಜಿನ ಆಡಳಿತ ಮಂಡಳಿಗೆ ದೂರು ನೀಡಿದ್ದಳು.

**ದೂರು ಕೊಟ್ರು ಕ್ರಮವಿಲ್ಲ:** ಆರೋಪಿತ ವಿರುದ್ಧ



- **ಲೈಂಗಿಕ ಕಿರುಕುಳ ಕೊಟ್ಟ ಶಿಕ್ಷಕನ ವಿರುದ್ಧ ದೂರು ಕೊಟ್ರು ಕ್ರಮವಿಲ್ಲ**
- **ಕಾಲೇಜಿನ ಆಡಳಿತದ ಮಂಡಳಿ ವಿರುದ್ಧ ಕಿಡಿ ಬೆಂಕಿ ಹಂಚಿಕೊಂಡು ಆತ್ಮಹತ್ಯೆಗೆ ಯತ್ನ**
- **ಬಾಲಸೋರ್‌ನ ಸಮೀರಾ ಕುಮಾರ್ ಸಾಹು ಎಂಬ ಶಿಕ್ಷಕನ ವಿರುದ್ಧ ಆರೋಪ**

ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರೂ ಶಿಕ್ಷಕರು ಕ್ಯಾರೆ ಎನ್ನದ ಕಾರಣ ಬೇಸತ್ತ ವಿದ್ಯಾರ್ಥಿನಿ ಕಾಲೇಜಿನ ಪ್ರಾಂಶುಪಾಲರ ಕೊಠಡಿ ಮುಂದೆಯೇ ಪೆಟ್ರೋಲ್ ಸುರಿದು, ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಇದರಿಂದ ಆಕೆಯ ದೇಹದ ಶೇ 90 ಭಾಗ ಸುಟ್ಟುಹೋಗಿದೆ. ಆಕೆಯನ್ನು ರಕ್ಷಿಸಲು ಹೋದ ಮತ್ತೊಬ್ಬ ವಿದ್ಯಾರ್ಥಿಗೂ ಶೇ.70ರಷ್ಟು ಗಾಯಗಳಾಗಿವೆ. ಇಬ್ಬರು ಗಾಯಾಳುಗಳನ್ನು ಬಾಲಸೋರ್ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಯಿತು.

ಘಟನೆ ನಡೆದ ದಿನ ವಿದ್ಯಾರ್ಥಿನಿ ಪ್ರಾಂಶುಪಾಲರನ್ನು ಭೇಟಿಯಾಗಿ ಮತ್ತೊಮ್ಮೆ ತನ್ನ ದೂರು ನೀಡಿ ವಾಪಸ್ಸಾದ ಕೆಲವೇ ಹೊತ್ತಿಗೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡಿದ್ದಳು. ವಿದ್ಯಾರ್ಥಿನಿ ಬೆಂಕಿ ಹಚ್ಚಿಕೊಂಡು ಪ್ರಾಂಶುಪಾಲರ ಕಚೇರಿಯ ಕಡೆಗೆ ಓಡುತ್ತಿರುವುದು ಪ್ರಕರಣ ಸಿಸಿಟಿವಿ ದೃಶ್ಯಾವಳಿಗಳಲ್ಲಿ, ಕಂಡುಬಂದಿದೆ.

ಸರ್ಕಾರವು ಕಾಲೇಜಿನ ಪ್ರಾಂಶುಪಾಲರನ್ನು ಮತ್ತು ವಿಭಾಗದ ಮುಖ್ಯಸ್ಥರನ್ನು ಅಮಾನತು ಮಾಡಿದೆ. ಪೊಲೀಸರು ಆರೋಪಿ ಪ್ರಾಧ್ಯಾಪಕನನ್ನು ಬಂಧಿಸಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ತನಿಖೆ ನಡೆಯುತ್ತಿದೆ.

## 2030ರ ವೇಳೆಗೆ ಒಂದು ಕೋಟಿ ಯುವಕರಿಗೆ ಸರ್ಕಾರಿ ಉದ್ಯೋಗ ಗುರಿ

**ಪಾಟ್ನಾ:** ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಭರ್ಜರಿ ಚುನಾವಣಾ ಘೋಷಣೆ ಮಾಡಿದ್ದಾರೆ. 2030ರ ವೇಳೆಗೆ ಒಂದು ಕೋಟಿ ಯುವಕರಿಗೆ ಸರ್ಕಾರಿ ಉದ್ಯೋಗ ಮತ್ತು ಉದ್ಯೋಗಾವಕಾಶಗಳನ್ನು ನೀಡುವ ಗುರಿಯನ್ನು ಹೊಂದಿದ್ದಾರೆ.

ಈ ಗುರಿ ಈ ಹಿಂದಿನ 2020-2025ರ ಅವಧಿಗೆ ನಿಗದಿಪಡಿಸಿದ್ದ ಗುರಿಯ ದ್ವಿಗುಣವಾಗಿದೆ. ಅಲ್ಲದೆ, ಹಬ್ಬದ ಸಮಯದಲ್ಲಿ ಬಿಹಾರದ ವಲಸಿಗರಿಗೆ ಅನುಕೂಲವಾಗುವಂತೆ ಸುಮಾರು 300 ಅಂತರರಾಜ್ಯ ಬಸ್‌ಗಳನ್ನು ಓಡಿಸಲು ತೀರ್ಮಾನಿಸಿದ್ದಾರೆ.

**ನಿತೀಶ್ ಕುಮಾರ್ ಘೋಷಣೆ**

**ಕೌಶಲ್ಯ ಅಭಿವೃದ್ಧಿ ಹೆಚ್ಚಳ:** ಮುಖ್ಯಮಂತ್ರಿಗಳು ಜ್ಞಾನನಾಯಕ ಕರ್ಪೂರಿ ಠಾಕೂರ್ ಕೌಶಲ್ಯ ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದಾಗಿ ಘೋಷಿಸಿದ್ದಾರೆ.

- **2030 ರ ವೇಳೆಗೆ ಒಂದು ಕೋಟಿ ಯುವಕರಿಗೆ ಸರ್ಕಾರಿ ಉದ್ಯೋಗ ಮತ್ತು ಉದ್ಯೋಗಾವಕಾಶ ನೀಡುವ ಗುರಿ**
- **ಹಬ್ಬದ ಸಮಯದಲ್ಲಿ ಬಿಹಾರದ ವಲಸಿಗರಿಗೆ ಅನುಕೂಲವಾಗುವಂತೆ ಸುಮಾರು 300 ಅಂತರರಾಜ್ಯ ಬಸ್**
- **ಜ್ಞಾನನಾಯಕ ಕರ್ಪೂರಿ ಠಾಕೂರ್ ಕೌಶಲ್ಯ ವಿಶ್ವವಿದ್ಯಾಲಯ ಸ್ಥಾಪನೆ**

ಇದು ಸಾತ್ ನಿಶ್ಚಯ್ ಉಪಕ್ರಮದ ಅಡಿಯಲ್ಲಿ ಬರುತ್ತದೆ. ಕೌಶಲ್ಯ ಅಭಿವೃದ್ಧಿಯನ್ನು ಹೆಚ್ಚಿಸುವುದು ಇದರ ಉದ್ದೇಶ. ಈ ವಿಶ್ವವಿದ್ಯಾಲಯವು ಯುವಕರನ್ನು ಸ್ವಯಂ ಉದ್ಯೋಗಾವಕಾಶಗಳು ಉದ್ಯಮಕ್ಕೆ ಸಂಬಂಧಿಸಿದ ತರಬೇತಿಯೊಂದಿಗೆ ಸಂಪರ್ಕಿಸುತ್ತದೆ.

ಬಿಹಾರ ವಿಧಾನಸಭೆ ಚುನಾವಣೆ ಈ ವರ್ಷದ ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ನಡೆಯುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಈ ಘೋಷಣೆಯನ್ನು ಯುವ ಮತದಾರರ ಬೆಂಬಲ ಗಳಿಸುವ ಪ್ರಯತ್ನವೆಂದು ಪರಿಗಣಿಸಲಾಗಿದೆ. ಚುನಾವಣಾ ಆಯೋಗವು ಇನ್ನೂ ಅಧಿಕೃತ ದಿನಾಂಕಗಳನ್ನು ಘೋಷಿಸಿಲ್ಲ.

**ವಲಸಿಗರ ಅನುಕೂಲಕ್ಕೆ ಬಸ್:** ಹಬ್ಬದ ಸಮಯದಲ್ಲಿ ವಲಸಿಗರ ಅನುಕೂಲಕ್ಕಾಗಿ ಸುಮಾರು 300 ಅಂತರರಾಜ್ಯ ಬಸ್‌ಗಳನ್ನು ಓಡಿಸಲಾಗುವುದು ಎಂದು ನಿತೀಶ್ ಕುಮಾರ್ ಹೇಳಿದ್ದಾರೆ. ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಪಂಜಾಬ್, ಹರಿಯಾಣ ಮತ್ತು ದೆಹಲಿಯಂತಹ ರಾಜ್ಯಗಳಲ್ಲಿ ವಾಸಿಸುವ ಬಿಹಾರದ ವಲಸಿಗರಿಗೆ ಇದು ಅನುಕೂಲವಾಗಲಿದೆ.

ಹೊಸ ಬಸ್‌ಗಳಲ್ಲಿ 75 ಹವಾನಿಯಂತ್ರಿತ ಮತ್ತು 74 ಡಿಲಕ್ಸ್ ಬಸ್‌ಗಳಿವೆ. ಇದಕ್ಕಾಗಿ ಜೂನ್ 24 ರಂದು ರಾಜ್ಯ ಸಚಿವ ಸಂಪುಟವು 105.82 ಕೋಟಿ ಬಜೆಟ್ ಅನ್ನು ಅನುಮೋದಿಸಿದೆ. ಹೆಚ್ಚುವರಿಯಾಗಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಮಾದರಿಯ ಅಡಿಯಲ್ಲಿ 150 ಇವಿ ಬಸ್‌ಗಳನ್ನು ಪರಿಚಯಿಸಲಾಗುವುದು.

ಮುಖ್ಯಮಂತ್ರಿಗಳು ಸಾಮಾಜಿಕ ಮಾಧ್ಯಮದಲ್ಲಿ ಬಿಹಾರ ನಿವಾಸಿಗಳು ಛತ್ ಪೂಜೆ, ಹೋಳಿ, ದೀಪಾವಳಿ ಮತ್ತು ದುರ್ಗಾ ಪೂಜೆಯಂತಹ ಹಬ್ಬಗಳಿಗೆ ಮನೆಗೆ ಪ್ರಯಾಣಿಸುವಾಗ ಎದುರಿಸುವ ತೊಂದರೆಗಳನ್ನು ವಿವರಿಸಿದ್ದಾರೆ. ಈ ಬಸ್ ಸೇವೆಯು ಹಬ್ಬದ ಸಮಯದಲ್ಲಿ ಬಹಳಷ್ಟು ಸಹಾಯ ಮಾಡುತ್ತದೆ ಎಂದು ಅವರು ಹೇಳಿದ್ದಾರೆ.



### ಖಾಸಗಿ ವಲಯದಲ್ಲಿ ಹೆಚ್ಚಿನ ಉದ್ಯೋಗಾವಕಾಶ

**2030 ರ ಗುರಿಯನ್ನು ತಲುಪಲು ಖಾಸಗಿ ವಲಯದಲ್ಲಿ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಮುಖ್ಯ ಎಂದು ಕುಮಾರ್ ಹೇಳಿದ್ದಾರೆ. ಕೈಗಾರಿಕಾ ಪ್ರದೇಶಗಳ ಮೇಲೆ ಗಮನ ಹರಿಸಲಾಗುವುದು. ಉದ್ಯೋಗ ವಿಸ್ತರಣೆಯ ಯೋಜನೆ ಮತ್ತು ಅನುಷ್ಠಾನವನ್ನು ನೋಡಿಕೊಳ್ಳಲು ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗುವುದು ಎಂದು ಅವರು ಘೋಷಿಸಿದ್ದಾರೆ. 2005 ರಿಂದ ರಾಜ್ಯದ ಉದ್ಯೋಗದ ಬಗ್ಗೆ ನಿತೀಶ್ ಕುಮಾರ್ ಮಾತನಾಡಿದ್ದಾರೆ. 2005 ಮತ್ತು 2020 ರ ನಡುವೆ 8 ಲಕ್ಷಕ್ಕೂ ಹೆಚ್ಚು ಸರ್ಕಾರಿ ಉದ್ಯೋಗಗಳನ್ನು ನೀಡಲಾಗಿದೆ ಎಂದು ಅವರು ನೆನಪಿಸಿದ್ದಾರೆ. ಯುವಕರ ಉದ್ಯೋಗ ಮತ್ತು ಸಬಲೀಕರಣಕ್ಕೆ ತಮ್ಮ ಬದ್ಧತೆಯನ್ನು ಅವರು ಪುನರುಚ್ಚರಿಸಿದ್ದಾರೆ.**



# ಸೆನ್ಸಾರ್ ಮಂಡಳಿ ವಿರುದ್ಧ ಗರಂ ಆದ ನಟಿ

**ಕಿಸ್ಸಿಂಗ್ ದೃಶ್ಯಕ್ಕೆ ಕತ್ತರಿ**

ಭಾರತದಲ್ಲಿ ಯಾವುದೇ ಭಾಷೆಯ ಸಿನಿಮಾ ಸಾರ್ವಜನಿಕ ಪ್ರದರ್ಶನಗೊಳ್ಳಬೇಕು ಎಂದರೆ ಸಿಬಿಎಫ್‌ಸಿ ಪ್ರಮಾಣ ಪತ್ರ ಹೊಂದುವುದು ಕಡ್ಡಾಯ. ಸೆನ್ಸಾರ್ ಮಂಡಳಿಯು ಸಿನಿಮಾ ವೀಕ್ಷಿಸಿ ವಿವಾದಾತ್ಮಕ ಅಥವಾ ನಿಯಮಬಾಹಿರ, ಅನೈತಿಕವಾದುದನ್ನು ತೆಗೆದುಹಾಕುತ್ತದೆ. ಇದೀಗ ಸಿನಿಮಾ ಒಂದರಲ್ಲಿದ್ದ ಕಿಸ್ಸಿಂಗ್ ದೃಶ್ಯವನ್ನು ತೆಗೆದಿದ್ದು, ಇದಕ್ಕೆ ನಟಿಯೊಬ್ಬರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಭಾರತದಲ್ಲಿ ಯಾವುದೇ ಸಿನಿಮಾ ಅಥವಾ ಡಾಕ್ಯುಮೆಂಟರಿಯನ್ನು ಸಾರ್ವಜನಿಕವಾಗಿ ಪ್ರದರ್ಶಿಸಬೇಕೆಂದರೆ ಅದಕ್ಕೆ ಸಿಬಿಎಫ್‌ಸಿ ಪ್ರಮಾಣ ಪತ್ರ ಕಡ್ಡಾಯ.

ಸೆನ್ಸಾರ್ ಮಂಡಳಿಯವರು ಸಿನಿಮಾಗಳನ್ನು ನೋಡಿ ಅದು ಸಾರ್ವಜನಿಕ ವೀಕ್ಷಣೆಗೆ ಅರ್ಹವಾಗಿದೆ ಎಂದರೆ ಮಾತ್ರವೇ ಸಿನಿಮಾ ಅನ್ನು ಬಿಡುಗಡೆ ಮಾಡುತ್ತಾರೆ. ಸೆನ್ಸಾರ್ ಹಲವು ಬಾರಿ ವಿವೇಚನಾರಹಿತವಾಗಿ ಸಿನಿಮಾಗಳಿಗೆ ಕತ್ತರಿ ಹಾಕಿರುವ ಹಲವಾರು ಉದಾಹರಣೆಗಳು ಇವೆ. ಇದೀಗ ಸಿನಿಮಾ ಒಂದರಲ್ಲಿ ಬರುವ ಮುತ್ತಿನ ದೃಶ್ಯವೊಂದಕ್ಕೆ ಕತ್ತರಿ ಹಾಕಿದ್ದು ನೆಟ್ಟಿಗರ ಆಕ್ರೋಶಕ್ಕೆ ಕಾರಣವಾಗಿದ್ದು, ಜನಪ್ರಿಯ ನಟಿಯೊಬ್ಬರು ಸಹ ಇದನ್ನು ಖಂಡಿಸಿದ್ದಾರೆ. ನಿನ್ನೆಯಷ್ಟೆ ಭಾರತದಲ್ಲಿ ಹಾಲಿವುಡ್ ಸಿನಿಮಾ 'ಸೂಪರ್‌ಮ್ಯಾನ್' ಬಿಡುಗಡೆ ಆಗಿದೆ. ಸೂಪರ್ ಹೀರೋ ಸಿನಿಮಾ ಇದಾಗಿದ್ದು, ಸಿನಿಮಾದ ಬಗ್ಗೆ ಭಾರಿ ಒಳ್ಳೆಯ ಪ್ರತಿಕ್ರಿಯೆಗಳು ವಿಶ್ವಮಟ್ಟದಲ್ಲಿ ವ್ಯಕ್ತವಾಗಿದೆ. ಭಾರತದಲ್ಲಿ ಸಹ ಈ ಸಿನಿಮಾ ನಿನ್ನೆ ಬಿಡುಗಡೆ ಆಗಿದೆ. ಆದರೆ ಬಿಡುಗಡೆಗೆ ಮುಂಚೆ ಸಿಬಿಎಫ್‌ಸಿ ಪ್ರಮಾಣ ಪತ್ರ ಪಡೆಯುವ ವೇಳೆಯಲ್ಲಿ ಈ ಸಿನಿಮಾದ ಪ್ರಮುಖ ರೊಮ್ಯಾಂಟಿಕ್ ದೃಶ್ಯವನ್ನೇ ಸೆನ್ಸಾರ್ ಮಂಡಳಿ ಕತ್ತರಿಸಿ ಹಾಕಿದೆ.

ಸಿನಿಮಾದಲ್ಲಿ ನಾಯಕ (ಸೂಪರ್‌ಮ್ಯಾನ್) ನಾಯಕಿಗೆ ಮುತ್ತು ನೀಡುವ ದೃಶ್ಯ ಇದೆ. ಸೂಪರ್ ಮ್ಯಾನ್ ಆಕಾಶದಲ್ಲಿ ಹಾರುತ್ತಲೇ ನಾಯಕಿಗೆ ರೊಮ್ಯಾಂಟಿಕ್ ಆಗಿ ಮುತ್ತು ಕೊಡುತ್ತಾನೆ. ಈ ಸಮಯದಲ್ಲಿ ನಾಯಕ-ನಾಯಕಿ ಇಬ್ಬರೂ ಸಂಪೂರ್ಣ ಬಟ್ಟೆ ಧರಿಸಿರುತ್ತಾರೆ.

# ಸಿನಿಮಾ ಹಾಡು ಹೇಳಲು ಹಣ ಕೇಳಲ್ಲ

**ವಿಷಯ ವಿವರಿಸಿದ ಗಾಯಕ**

ಪ್ರಸಿದ್ಧ ಗಾಯಕ ಅರಿಜಿತ್ ಸಿಂಗ್ ಅವರು ಹಾಡುಗಳಿಗೆ ಹಣ ಪಡೆಯುವುದಿಲ್ಲ ಎಂದು ಹೇಳಿದ್ದಾರೆ. ಸಂದರ್ಶನವೊಂದರಲ್ಲಿ ಈ ವಿಷಯವನ್ನು ಬಹಿರಂಗಪಡಿಸಿದ್ದಾರೆ. ಶೋಗಳಿಗೆ ಅವರು ಎಷ್ಟು ಚಾರ್ಜ್ ಮಾಡುತ್ತಾರೆ ಎಂಬ ಮಾಹಿತಿಯನ್ನು ಅವರ ಮ್ಯಾನೇಜರ್‌ನಿಂದ ಪಡೆಯಬಹುದು ಎಂದು ಹೇಳಿದ್ದಾರೆ. ಅವರ ಸರಳತೆ ಮತ್ತು ದಾನ ಕಾರ್ಯಗಳಿಗೆ ಅವರು ಹೆಸರುವಾಸಿಯಾಗಿದ್ದಾರೆ. ಗಾಯಕ ಅರಿಜಿತ್ ಸಿಂಗ್ ಬಗ್ಗೆ ಹೊಸದಾಗಿ ಹೇಳಬೇಕಿಲ್ಲ. ಅವರು ಹಲವು ಸೂಪರ್ ಹಿಟ್ ಹಾಡುಗಳನ್ನು ನೀಡಿದ್ದಾರೆ. ಹಲವು ಶೋಗಳನ್ನು ಅವರು ಆಯೋಜನೆ ಮಾಡುತ್ತಾರೆ. ಇದರೆಡರಿಂದಲೂ ಅರಿಜಿತ್ ಅವರು ಸಾಕಷ್ಟು ಹಣ ಮಾಡುತ್ತಾರೆ. ಆದರೂ ಸಿಂಪಲ್ ಆಗಿರೋದು ಅವರ ಹೆಚ್ಚುಗಾರಿಕೆ ಎನ್ನಬಹುದು. ಅವರು ಹಾಡಿದ್ದಕ್ಕೆ ಯಾವುದೇ ಹಣ ಚಾರ್ಜ್ ಮಾಡುವುದಿಲ್ಲವಂತೆ. ಈ ಬಗ್ಗೆ ಅವರು ಹೇಳಿಕೊಂಡಿದ್ದರು.



ಅರಿಜಿತ್ ಸಿಂಗ್ ಅವರು ಎಷ್ಟು ಹಣವನ್ನು ಪ್ರತಿ ಸಾಂಗ್ ಗೆ ಚಾರ್ಜ್ ಮಾಡುತ್ತಾರೆ ಎಂಬ ಬಗ್ಗೆ ಚರ್ಚೆಗಳು ಮೊದಲಿನಿಂದಲೂ ಇವೆ. ಇದಕ್ಕೆ ಅವರ ಕಡೆಯಿಂದ ಸ್ಪಷ್ಟ ಉತ್ತರ ಸಿಕ್ಕಿರಲಿಲ್ಲ. ಈಗ ಸಂದರ್ಶನ ಒಂದರಲ್ಲಿ ಅವರಿಗೆ ಈ ಬಗ್ಗೆ ಕೇಳಲಾಯಿತು. ಇದಕ್ಕೆ ಅವರು ಅಡ್ಡ ಗೋಡೆಯ ಮೇಲೆ ದೀಪ ಇಟ್ಟಂತೆ ಉತ್ತರಿಸಿದರು. ಆದರೆ, ಅವರು ಒಂದು ಅಚ್ಚರಿಯ ವಿಚಾರ ರಿವೀಲ್ ಮಾಡಿದರು. 'ಅರಿಜಿತ್ ಸಿಂಗ್ ಅವರು ಹಾಡು ಹಾಡಿದ್ದಕ್ಕೆ ಎಷ್ಟು ಹಣ ಪಡೆಯುತ್ತಾರೆ' ಎಂದು ಕೇಳಲಾಯಿತು. ಇದಕ್ಕೆ ಉತ್ತರಿಸಿದ ಅವರು, 'ನಾನು ಹಾಡು ಹೇಳಲು ಯಾವುದೇ ಹಣ ಚಾರ್ಜ್ ಮಾಡೋದಿಲ್ಲ. ಆದಾಗ್ಯೂ, ನಾನು ಹಾಡಿದ್ದಕ್ಕೆ ಅವರೇ ಹಣ ನೀಡುತ್ತಾರೆ' ಎಂದು ಅರಿಜಿತ್ ಸಿಂಗ್ ಅವರು ಹೇಳಿದರು. ಅಂದರೆ ಅರಿಜಿತ್ ಸಿಂಗ್ ಅವರು ಹಾಡು ಹೇಳುವುದಕ್ಕೂ ಮೊದಲು ಸಂಭಾವನೆ ಬಗ್ಗೆ ಮಾತನಾಡೋದಿಲ್ಲ.

'ನೀವೆ ಎಷ್ಟು ಹಣ ಎಂದು ನೀಡಿ' ಎಂದು ಕೇಳಬಹುದು. ಇನ್ನು ಶೋಗಳಿಗೆ ಎಷ್ಟು ಚಾರ್ಜ್ ಮಾಡುತ್ತಾರೆ ಎಂಬುದನ್ನು ಅರಿಜಿತ್ ಸಿಂಗ್ ಅವರು ರಿವೀಲ್ ಮಾಡಿಲ್ಲ.

ಇದಕ್ಕಾಗಿ ಮ್ಯಾನೇಜರ್‌ನ ಕಾಂಟ್ಯಾಕ್ಟ್ ಮಾಡಿ ಎಂದು ಹೇಳಿದ್ದಾರೆ. ಅರಿಜಿತ್ ಸಿಂಗ್ ಅವರು ಒಂದು ಶೋ ನಡೆಸಲು ಕೋಟ್ಯಂತರ ರೂಪಾಯಿ ಪಡೆದುಕೊಳ್ಳುತ್ತಾರೆ. ಅರಿಜಿತ್ ಸಿಂಗ್ ಅವರು ಪಶ್ಚಿಮ ಬಂಗಾಳದವರು. ಅವರು ಆಗಾಗ ತಮ್ಮ ಹುಟ್ಟೂರಲ್ಲಿ ಕಾಣಿಸಿಕೊಳ್ಳುತ್ತಾರೆ. ಅಲ್ಲಿ ಅವರು ಸ್ಕೂಟರ್‌ನಲ್ಲಿ ಓಡಾಡುತ್ತಾರೆ. ಬಡವರಿಗೋಸ್ಕರ ಅವರು ಅಲ್ಲಿ ಹೋಟಲ್ ಆರಂಭಿಸಿದ್ದು, ಕಡಿಮೆ ಬೆಲೆಯಲ್ಲಿ ಊಟವನ್ನು ನೀಡುತ್ತಿದ್ದಾರೆ.

# ಕನ್ನಡದಲ್ಲೇ ಡೈಲಾಗ್ ಹೊಡೆದ ಕೆಡಿ

ಬಹಳ ಅದ್ದೂರಿಯಾಗಿ 'ಕೆಡಿ: ದಿ ಡೆವಿಲ್' ಸಿನಿಮಾದ ಟೀಸರ್ ಬಿಡುಗಡೆ ಮಾಡಲಾಗಿದೆ. ಈ ವೇಳೆ ಚಿತ್ರತಂಡದ ಕಲಾವಿದರೆಲ್ಲರೂ ಭಾಗಿಯಾಗಿದ್ದರು. ಮುಂಬೈನಿಂದ ಬಂದ ನಟ ಸಂಜಯ್ ದತ್ ಅವರು ಕನ್ನಡದಲ್ಲಿ ಡೈಲಾಗ್ ಹೇಳಿ ಗಮನ ಸೆಳೆದರು. 'ಕೆಡಿ' ತಂಡದ ಬಗ್ಗೆ ಅವರು ಮೆಚ್ಚುಗೆಯ ಮಾತುಗಳನ್ನು ಆಡಿದರು. ಬಹುತಾರಾಗಣದ ಕಾರಣದಿಂದ 'ಕೆಡಿ: ದಿ ಡೆವಿಲ್' ಸಿನಿಮಾ ಗಮನ ಸೆಳೆಯುತ್ತಿದೆ. ಧ್ರುವ ಸರ್ಜಾ ಮುಖ್ಯ ಭೂಮಿಕೆ ನಿಭಾಯಿಸಿರುವ ಈ ಚಿತ್ರದಲ್ಲಿ ಹಲವು ಕಲಾವಿದರು ನಟಿಸಿದ್ದಾರೆ. ಬಾಲಿವುಡ್ ನಟ ಸಂಜಯ್ ದತ್, ನಟಿ ಶಿಲ್ಪಾ ಶೆಟ್ಟಿ ಅವರು ಪ್ರಮುಖ ಆಕರ್ಷಣೆ ಆಗಿದ್ದಾರೆ. ರವಿಚಂದ್ರನ್, ರಮೇಶ್ ಅರವಿಂದ್ ಕೂಡ ಪಾತ್ರವರ್ಗದಲ್ಲಿ ಇದ್ದಾರೆ. ಬೆಂಗಳೂರಿನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಎಲ್ಲರೂ ಭಾಗಿಯಾಗಿದ್ದರು.



**ಸಿನಿಮಾ ಬಗ್ಗೆ ಮಾತಾಡಿದ ಸಂಜಯ್ ದತ್**

ನಟ ಸಂಜಯ್ ದತ್ ಈ ಸಿನಿಮಾ ತಂಡದ ಬಗ್ಗೆ ಮನಸಾರೆ ಮಾತನಾಡಿದರು. ಅದಾದ ನಂತರ ಕೊನೆಯಲ್ಲಿ ಕನ್ನಡದಲ್ಲೇ ಡೈಲಾಗ್ ಹೇಳುವ ಮೂಲಕ ಚಪ್ಪಾಳೆ ಗಿಟ್ಟಿಸಿದರು. 'ಕೆಡಿ: ದಿ ಡೆವಿಲ್' ಸಿನಿಮಾಗೆ ಜೋಗಿ ಪ್ರೇಮ್ ಅವರು ನಿರ್ದೇಶನ ಮಾಡಿದ್ದಾರೆ. ಕೆವಿಎನ್ ಪ್ರೊಡಕ್ಷನ್ಸ್ ಮೂಲಕ ವೆಂಕಟ್ ಕೆ. ನಾರಾಯಣ್ ಅವರು ಬಂಡವಾಳ ಹೂಡಿದ್ದಾರೆ. ಕನ್ನಡ, ತೆಲುಗು, ಮಲಯಾಳಂ, ಹಿಂದಿ ಹಾಗೂ ತೆಲುಗು ಭಾಷೆಯಲ್ಲಿ ಟೀಸರ್ ಬಿಡುಗಡೆ ಆಗಿದೆ. ಈ ಟೀಸರ್‌ನಲ್ಲಿ ಸಂಜಯ್ ದತ್ ಅವರ ಡೈಲಾಗ್ ಹೈಲೈಟ್ ಆಗಿದೆ. 'ಈ ಸಿನಿಮಾದ ಪ್ರತಿ ಕ್ಷಣ ನನಗೆ ಇಷ್ಟ. ನನ್ನದು ಒಂದು ಡೇಂಜಸರ್ ಪಾತ್ರ. ಈ ಸಿನಿಮಾದಲ್ಲಿ ನಾನು ರಮೇಶ್, ರವಿಚಂದ್ರನ್, ರೀಷ್ಮಾ ನಾಣಯ್ಯ, ಧ್ರುವ ಸರ್ಜಾ ಮುಂತಾದವರ ಜೊತೆ ಕೆಲಸ ಮಾಡಲು ಅದೃಷ್ಟ ಮಾಡಿದ್ದೆ. ಧ್ರುವ ಸರ್ಜಾ ನನ್ನ ತಮ್ಮ ಇದ್ದಂತೆ. ಅವರ ಡೆಡಿಕೇಷನ್ ನಾನು ನೋಡುತ್ತಿದ್ದೇನೆ. ಮುಂದೆ ಅವರು ಇಡೀ ದೇಶದಲ್ಲಿ ದೊಡ್ಡ ಸ್ಟಾರ್ ಆಗುತ್ತಾರೆ' ಎಂದು ಸಂಜಯ್ ದತ್ ಹೇಳಿದರು.

# ಪತ್ನಿ ಮೇಲೆ ಪತಿ ಆರೋಪ

ಕೊಲೆ ಮಾಡಲು ಬಂದ ಗಂಡನಿಂದ ಶ್ರುತಿ ಬಚಾವಾಗಿದ್ದು ಹೇಗೆ ಎಂಬುದು ಈಗ ಗೊತ್ತಾಗಿದೆ. ಹನುಮಂತನಗರ ಠಾಣೆ ಪೊಲೀಸರು ವಿಚಾರಣೆ ಮಾಡಿದಾಗ ಪತ್ನಿ ಮೇಲೆಯೇ ಅಮರೇಶ್ ಹಲವು ಆರೋಪ ಮಾಡಿದ್ದಾರೆ. ಆ ಬಗ್ಗೆ ಇಲ್ಲಿದೆ ಮಾಹಿತಿ..

'ನಾವು 20 ವರ್ಷಗಳ ಹಿಂದೆ ಪ್ರೀತಿಸಿ ಮದುವೆ ಆಗಿದ್ದು. ಇಬ್ಬರು ಹೆಣ್ಣು ಮಕ್ಕಳಿದ್ದಾರೆ. ಶ್ರೀನಗರದಲ್ಲಿ ಫ್ಲಾಟ್ ಒಂದನ್ನ 27 ಲಕ್ಷ ರೂಪಾಯಿ ಕೊಟ್ಟು ಲೀಸ್‌ಗೆ ಹಾಕಿಕೊಂಡು ವಾಸ ಮಾಡ್ತಿದ್ವಿ. ಇಬ್ಬರು ಹೆಣ್ಣು ಮಕ್ಕಳಿಗೆ ತಾಯಿ ಪ್ರೀತಿಯನ್ನು ಶ್ರುತಿ ಕೊಟ್ಟಿಲ್ಲ. ಮನೆ ಜವಾಬ್ದಾರಿಯನ್ನೆಲ್ಲ ನಾನೇ ನೋಡಿಕೊಳ್ತಿದ್ದೆ. ಶೂಟಿಂಗ್ ನೆಪದಲ್ಲಿ ಸರಿಯಾಗಿ ಮನೆಗೆ ಬಾರದೇ ಪಾರ್ಟಿ ಪಬ್ ಅಂತ ಸುತ್ತಾಡ್ತಿದ್ಲು' ಎಂದು ಅಮರೇಶ್ ಹೇಳಿಕೆ ನೀಡಿದ್ದಾರೆ.

'ಯಾರಿಗೂ ಹೇಳದೇ 15 ದಿನ ಪ್ರಯಾಗ್ ರಾಜ್‌ಗೆ ಟ್ರಿಪ್ ಹೋಗಿದ್ದಳು. ಇದೇ ವಿಚಾರಕ್ಕೆ ಈ ಹಿಂದೆಯೂ ಗಲಾಟೆ ಆಗಿತ್ತು. ಗಂಡ-ಮಕ್ಕಳಿದ್ದರೂ ಕೂಡ ಅಣ್ಣನ ಜೊತೆ ಇರ್ತೀನಿ ಅಂತ ಮನೆ ಬಿಟ್ಟು ಹೋಗಿದ್ದಳು. ಎಷ್ಟೋ ರಾತ್ರಿಗಳು ಶ್ರುತಿ ಮನೆಗೆ ಬರುತ್ತಿರಲಿಲ್ಲ. ಫೋನ್ ಮಾಡಿದ್ರೆ ಏನ್ ಮಾಡ್ಕೋತಿಯೋ ಮಾಡ್ಕೋ ಎನ್ನುತ್ತಿದ್ದಳು. ಭೋಗ್ಯಕ್ಕಿದ್ದ ಮನೆಯನ್ನ ಖಾಲಿ ಮಾಡಿ ಹಣ ತೆಗೆದುಕೊಂಡು ಮನೆ ಬಿಡೋಣ ಅನ್ನೋದು ಅವಳ ಪ್ಲಾನ್ ಆಗಿತ್ತು' ಎಂದು ಅಮರೇಶ್ ಆರೋಪಿಸಿದ್ದಾರೆ.



**ಕಿರುತೆರೆ ನಟಿ ಶ್ರುತಿಗೆ ಚಾಕು ಇರಿತ ಪ್ರಕರಣ**

# ಜಾತಿ ಮತ್ತು ಪ್ರೀತಿ ನಿರ್ಮಿಸಲು ಮುಂದಾದ ಕರಣ್ ಜೋಹರ್


ನಿರ್ಮಾಪಕ ಕರಣ್ ಜೋಹರ್ 'ಜಾತಿ ಮತ್ತು ಪ್ರೀತಿ' ಕತೆಯುಳ್ಳ ಸಿನಿಮಾಗಳದ್ದೇ ಒಂದು ಸರಣಿ ನಿರ್ಮಾಣ ಮಾಡಲು ಮುಂದಾಗಿದ್ದಾರೆ.

ಜೋಹರ್ ಸಹ ನಿರ್ಮಾಣ ಮಾಡಿರುವ 'ದಡಕ್ 2' ಸಿನಿಮಾದ ಟ್ರೈಲರ್ ಬಿಡುಗಡೆ ಆಗಿದ್ದು, ಟ್ರೈಲರ್ ನೋಡಿದವರು ಕರಣ್ ಜೋಹರ್ ಯೋಜನೆಯನ್ನು ಕೊಂಡಾಡುತ್ತಿದ್ದಾರೆ. ಜಾತಿ ಮತ್ತು ಪ್ರೀತಿಯ ಸುತ್ತ ದಶಕಗಳಿಂದಲೂ ಸಿನಿಮಾಗಳು ಬರುತ್ತಲೇ ಇವೆ. ಆದರೆ ಈಗಲೂ ಸಹ ಜಾತಿ ಕಾರಣಕ್ಕೆ ಪ್ರೇಮಿಗಳ ಕೊಲೆಗಳು ನಿಂತಿಲ್ಲ. ಬಾಲಿವುಡ್‌ನ ಖ್ಯಾತ ನಿರ್ಮಾಪಕ ಕರಣ್ ಜೋಹರ್, 'ಜಾತಿ ಮತ್ತು ಪ್ರೀತಿ'ಯ ವಿಷಯವನ್ನೇ ಇಟ್ಟುಕೊಂಡು ಒಂದು ಸಿನಿಮಾ ಸರಣಿ ನಿರ್ಮಿಸಲು ಮುಂದಾಗಿದ್ದಾರೆ. ಉಚ್ಚ ಜಾತಿಯ ಯುವತಿ ಹಾಗೂ ದಲಿತ ಯುವಕನ ನಡುವಿನ ಪ್ರೇಮಕತೆಯನ್ನು 'ದಡಕ್' ಹೆಸರಿನ ಸಿನಿಮಾ ನಿರ್ಮಾಣ ಮಾಡಿದ್ದರು ಕರಣ್ ಜೋಹರ್.

ಇದೀಗ ಮತ್ತೊಮ್ಮೆ ಅದೇ ಮಾದರಿಯ ಮತ್ತೊಂದು ಪ್ರೇಮಕತೆಯನ್ನು ಕರಣ್ ನಿರ್ಮಿಸಿದ್ದು ಸಿನಿಮಾಕ್ಕೆ 'ದಡಕ್ 2' ಎಂದು ಹೆಸರಿಡಲಾಗಿದೆ. ಮರಾಠಿಯ 'ಸೈರಾಟ್' ಸಿನಿಮಾ ಅನ್ನು 'ದಡಕ್' ಹೆಸರಿನಲ್ಲಿ ರೀಮೇಕ್ ಮಾಡಲಾಗಿತ್ತು. ಆ ಸಿನಿಮಾನಲ್ಲಿ ಇಶಾನ್ ಕಟ್ಟರ್ ಮತ್ತು ಜಾನ್ವಿ ಕಪೂರ್ ನಟಿಸಿದ್ದರು. ಇದೀಗ ತಮಿಳಿನ 'ಪರಿಯೇರುಮ್ ಪೆರುಮಾಳ್' ಸಿನಿಮಾ ಅನ್ನು 'ದಡಕ್ 2' ಹೆಸರಿನಲ್ಲಿ ರೀಮೇಕ್ ಮಾಡಲಾಗಿದೆ. ಮೇಲ್ವರ್ಗದ ಜಾತಿಯ ಯುವತಿಯನ್ನು ಪ್ರೀತಿಸಿದ ಕಾರಣಕ್ಕೆ ಮೇಲ್ವರ್ಗದ ಯುವತಿಯ ಕಡೆಯವರು ದಲಿತ ಯುವಕನ ಮೇಲೆ ಮಾಡುವ ಸತತ ದಾಳಿ, ಆ ಯುವಕ ಅನುಭವಿಸುವ ನೋವು, 'ಪರಿಯೇರುಮ್ ಪೆರುಮಾಳ್'.



# ಫೀಲ್ಡಿಂಗ್ ಸೆಟ್ಟಿಂಗ್‌ನಲ್ಲಿ ಟೀಮ್ ಇಂಡಿಯಾಗೆ ಇಂಗ್ಲೆಂಡ್ ಮೋಸ




ಲಾರ್ಡ್ಸ್‌ನಲ್ಲಿ ನಡೆಯುತ್ತಿರುವ ಭಾರತದ ವಿರುದ್ಧದ 3ನೇ ಟೆಸ್ಟ್ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ ತಂಡವು ಪ್ರಥಮ ಇನಿಂಗ್ಸ್‌ನಲ್ಲಿ 387 ರನ್ ಕಲೆಹಾಕಿತು. ಇದಕ್ಕುತ್ತರವಾಗಿ ಪ್ರಥಮ ಇನಿಂಗ್ಸ್ ಆಡಿದ ಟೀಮ್ ಇಂಡಿಯಾ 387 ರನ್‌ಗಳಿಸಿದೆ. ಇದೀಗ ದ್ವಿತೀಯ ಇನಿಂಗ್ಸ್ ಆರಂಭಿಸಿರುವ ಇಂಗ್ಲೆಂಡ್ ಮೂರನೇ ದಿನದಾಟದ ಅಂತ್ಯಕ್ಕೆ ವಿಕೆಟ್ ನಷ್ಟವಿಲ್ಲದೆ 2 ರನ್ ಕಲೆಹಾಕಿದೆ. ಲಾರ್ಡ್ಸ್ ಮೈದಾನದಲ್ಲಿ ನಡೆಯುತ್ತಿರುವ ಭಾರತ ಮತ್ತು ಇಂಗ್ಲೆಂಡ್ ನಡುವಣ ಮೂರನೇ ಟೆಸ್ಟ್ ಪಂದ್ಯದ ವೇಳೆ ಬೆನ್ ಸ್ಟೋಕ್ಸ್ ಪಡೆ ಮೋಸದಿಂದ ಟೀಮ್ ಇಂಡಿಯಾವನ್ನು ಕಟ್ಟಿ ಹಾಕಿದ್ರಾ, ಭಾರತದ ಲೆಜೆಂಡ್ ಸುನಿಲ್ ಗವಾಸ್ಕರ್ ಎತ್ತಿರುವ ಪ್ರಶ್ನೆಗಳಿಂದ ಇಂತಹದೊಂದು ಅನುಮಾನ ಹುಟ್ಟಿಕೊಂಡಿದೆ. ಏಕೆಂದರೆ ಇಂಗ್ಲೆಂಡ್ ತಂಡವು ರಿಷಭ್ ಪಂತ್ ವಿಕೆಟ್ ಪಡೆಯಲು ಲೆಗ್ ಸೈಡ್‌ನಲ್ಲಿ ಹೆಚ್ಚುವರಿ ಫೀಲ್ಡರ್‌ಗಳನ್ನು ಬಳಸಿಕೊಂಡಿದ್ದಾರೆ ಎಂದು ಗವಾಸ್ಕರ್ ಹೇಳಿದ್ದಾರೆ. ಟೆಸ್ಟ್ ಕ್ರಿಕೆಟ್‌ನಲ್ಲಿ ಲೆಗ್ ಸೈಡ್‌ನಲ್ಲಿ ಗರಿಷ್ಠ ಐವರು ಫೀಲ್ಡರ್‌ಗಳನ್ನು ಮಾತ್ರ ನಿಲ್ಲಿಸಲು ಅನುಮತಿಸಲಾಗಿದೆ. ಆದರೆ ಇಂಗ್ಲೆಂಡ್ ತಂಡದ ನಾಯಕ ಬೆನ್ ಸ್ಟೋಕ್ಸ್ ರಿಷಭ್ ಪಂತ್ ವಿಕೆಟ್‌ಗಾಗಿ ಡೀಪ್ ಫೈನ್ ಲೆಗ್‌ನಿಂದ ಲಾಂಗ್ ಆನ್‌ವರೆಗೆ ವಿವಿಧ ಸ್ಥಾನಗಳಲ್ಲಿ ಸುಮಾರು 7-8 ಫೀಲ್ಡರ್‌ಗಳನ್ನು ನಿಯೋಜಿಸಿದ್ದರು. ಇದು ಕ್ರಿಕೆಟ್ ನಿಯಮದ ಉಲ್ಲಂಘನೆ ಎಂದು ಸುನಿಲ್ ಗವಾಸ್ಕರ್ ಆರೋಪಿಸಿದ್ದಾರೆ.

ರಿಷಭ್ ಪಂತ್ ಅವರ ವಿಕೆಟ್ ಪಡೆಯಲು ಬೆನ್ ಸ್ಟೋಕ್ಸ್ ಡೀಪ್ ಫೈನ್ ಲೆಗ್‌ನಿಂದ ಲಾಂಗ್ ಆನ್‌ವರೆಗೆ ವಿವಿಧ ಭಾಗಗಳಲ್ಲಿ ಸುಮಾರು 7-8 ಫೀಲ್ಡರ್‌ಗಳನ್ನು ನಿಯೋಜಿಸಿದ್ದರು. ಅಲ್ಲದೆ ವೇಗದ ಬೌಲರ್‌ಗಳಿಗೆ ಬೌನ್ಸರ್ ಹಾಗೂ ಶಾರ್ಟ್ ಪಿಚ್ ಎಸೆತಗಳನ್ನು ಎಸೆಯುವಂತೆ ಸೂಚಿಸಿದ್ದರು. ಈ ಮೂಲಕ ಪಂತ್ ವಿಕೆಟ್ ಪಡೆಯಲು ಇಂಗ್ಲೆಂಡ್ ಪ್ಲ್ಯಾನ್ ರೂಪಿಸಿದ್ದರು. ಆದರೆ ಹೀಗೆ ಒಂದೇ ಬದಿಯಲ್ಲಿ 7 ರಿಂದ 8 ಫೀಲ್ಡರ್‌ಗಳನ್ನು ಬಳಸಿಕೊಂಡಿರುವುದು ಅಚ್ಚರಿ. ಅದರಲ್ಲೂ ಲೆಗ್ ಸೈಡ್‌ನಲ್ಲಿ ಕೇವಲ ಐವರು ಫೀಲ್ಡರ್‌ಗಳನ್ನು ಮಾತ್ರ ನಿಲ್ಲಿಸಲು ಅವಕಾಶವಿದ್ದರೂ, ಇಂಗ್ಲೆಂಡ್‌ಗೆ ಅದೇಗೆ ಹೆಚ್ಚುವರಿ ಫೀಲ್ಡರ್‌ಗಳನ್ನು ನಿಲ್ಲಿಸಲು ಅವಕಾಶ ನೀಡಲಾಗಿದೆ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ.

### ಸುನಿಲ್ ಗವಾಸ್ಕರ್ ಹೇಳಿದ್ದೇನು

ಈ ಬಗ್ಗೆ ಕಾಮೆಂಟ್ರಿ ಬಾಕ್ಸ್‌ನಲ್ಲಿ ಮಾತನಾಡಿದ ಸುನಿಲ್ ಗವಾಸ್ಕರ್, ಇದನ್ನು ಕ್ರಿಕೆಟ್ ಎಂದು ಕರೆಯಲಾಗುವುದಿಲ್ಲ. ಏಕೆಂದರೆ ಇದು ಕ್ರಿಕೆಟ್‌ಗೆ ವಿರುದ್ಧವಾಗಿದೆ. ಒಂದು ಸಮಯದಲ್ಲೇ ಲೆಗ್ ಸೈಡ್‌ನಲ್ಲಿ 6 ಕ್ಕಿಂತ ಹೆಚ್ಚು ಫೀಲ್ಡರ್‌ಗಳು ಇರಬಾರದು. ನಮ್ಮ ಕಾಲದಲ್ಲಿ ಒಂದೇ ಓವರ್‌ನಲ್ಲಿ ಎಷ್ಟು ಬೌನ್ಸರ್‌ಗಳನ್ನು ಎಸೆಯಲು ಅವಕಾಶವಿತ್ತು. ವೆಸ್ಟ್ ಇಂಡೀಸ್ ಬೌಲರ್‌ಗಳು ಈ ಅವಕಾಶವನ್ನು ಬಳಸಿಕೊಳ್ಳುತ್ತಿದ್ದರು. ಈ ಮೂಲಕ ಅನೇಕ ಬ್ಯಾಟ್ಸ್‌ಮನ್‌ಗಳ ಗಾಯಗೊಳಿಸಿದ್ದರು. ಆ ಬಳಿಕ ಈ ಬಗ್ಗೆ ಇಂಗ್ಲೆಂಡ್ ಚಕಾರವೆತ್ತಿ ಈ ಬೌನ್ಸರ್‌ಗಳ ಸಂಖ್ಯೆಯನ್ನು ಓವರ್‌ಗೆ 2 ಕ್ಕೆ ಇಳಿಸಿದ್ದರು. ಇದೀಗ ಅದೇ ಇಂಗ್ಲೆಂಡ್ ಗಾಯಗೊಂಡಿದ್ದ ರಿಷಭ್ ಪಂತ್ ಅವರನ್ನು ಶಾರ್ಟ್ ಎಸೆತಗಳ ಮೂಲಕ ಗುರಿಯಾಗಿಸಿದ್ದಾರೆ.

ಲೆಗ್ ಸೈಡ್‌ನಲ್ಲಿ ಹೆಚ್ಚು ಫೀಲ್ಡರ್‌ಗಳನ್ನು ನಿಲ್ಲಿಸಿ ಶಾರ್ಟ್ ಬಾಲ್‌ನಿಂದ ದಾಳಿ ಸಂಘಟಿಸಿರುವುದು ನನ್ನ ಪ್ರಕಾರ ತಪ್ಪು ಎಂದಿದ್ದಾರೆ. ಅಷ್ಟೇ ಅಲ್ಲದೆ ಈ ಬಗ್ಗೆ ಟೀಮ್ ಇಂಡಿಯಾದ ಮಾಜಿ ನಾಯಕ ಸೌರವ್ ಗಂಗೂಲಿ ಗಮನ ಹರಿಸುವಂತೆ ಮನವಿ ಮಾಡಿದ್ದಾರೆ.

ಗಂಗೂಲಿ ಐಸಿಸಿ ಕ್ರಿಕೆಟ್ ಸಮಿತಿಯ ಅಧ್ಯಕ್ಷರಾಗಿದ್ದಾರೆ. ಈ ಸಮಿತಿಯು ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ನಿಯಮಗಳು ಮತ್ತು ಆಟದ ಪರಿಸ್ಥಿತಿಗಳಲ್ಲಿ ಬದಲಾವಣೆಗಳು ಅಥವಾ ತಿದ್ದುಪಡಿಗಳಿಗೆ ಸಲಹೆಗಳನ್ನು ನೀಡುತ್ತದೆ.

ಹೀಗಾಗಿ ಫೀಲ್ಡರ್‌ಗಳ ನಿಯಮಗಳ ಪಾಲನೆಯನ್ನು ಕಡ್ಡಾಯಗೊಳಿಸಲು ಸೌರವ್ ಗಂಗೂಲಿ ನೇತೃತ್ವ ಸಮಿತಿ ಮುಂದಾಗಬೇಕೆಂದು ಸುನಿಲ್ ಗವಾಸ್ಕರ್ ಹೇಳಿದ್ದಾರೆ.

# 12 ಸಿಕ್ಸ್, 10 ಫೋರ್: ವಿಶ್ವ ದಾಖಲೆಯ ಸೆಂಚುರಿ ಸಿಡಿಸಿದ ಫಹಾದ್

ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಮೂವತ್ತಕ್ಕಿಂತ ಕಡಿಮೆ ಎಸೆತಗಳಲ್ಲಿ ಶತಕ ಸಿಡಿಸಿರುವುದು ಕೇವಲ ಇಬ್ಬರು ಬ್ಯಾಟರ್‌ಗಳು ಮಾತ್ರ. ಈ ಸಾಧನೆ ಮಾಡಿದ ಮೊದಲ ಬ್ಯಾಟರ್ ಸಾಹಿಲ್ ಚೌಹಾಣ್. ಇದೀಗ ಈ ಪಟ್ಟಿಗೆ ಟರ್ಕಿ ತಂಡದ ಆರಂಭಿಕ ದಾಂಡಿಗ ಮುಹಮ್ಮದ್ ಫಹಾದ್ ಕೂಡ ಸೇರ್ಪಡೆಯಾಗಿದ್ದಾರೆ. ಅದು ಕೂಡ ದಾಖಲೆಯ ಶತಕ ಸಿಡಿಸುವ ಮೂಲಕ ಎಂಬುದು ವಿಶೇಷ. ಬಲ್ಗೇರಿಯಾದಲ್ಲಿ ನಡೆಯುತ್ತಿರುವ ಟಿ20 ತ್ರಿಕೋನ ಸರಣಿಯಲ್ಲಿ ಟರ್ಕಿ ತಂಡದ ವಿಕೆಟ್ ಕೀಪರ್ ಬ್ಯಾಟರ್ ಮುಹಮ್ಮದ್ ಫಹಾದ್ ಸಿಡಿಲಬ್ಬರದ ಸೆಂಚುರಿ ಸಿಡಿಸಿದ್ದಾರೆ. ಅದು ಕೂಡ ಕೇವಲ 29 ಎಸೆತಗಳಲ್ಲಿ ಎಂಬುದೇ ಅಚ್ಚರಿ. ಸೋಫಿಯಾದ ಕ್ವೀನ್ಸ್ ಪಾರ್ಕ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಆತಿಥೇಯ ಬಲ್ಗೇರಿಯಾ ಹಾಗೂ ಟರ್ಕಿ ತಂಡಗಳು ಮುಖಾಮುಖಿಯಾಗಿದ್ದವು.

ಟಾಸ್ ಸೋತರೂ ಮೊದಲು ಬ್ಯಾಟ್ ಮಾಡಲು ಅವಕಾಶ ಪಡೆದ ಟರ್ಕಿ ತಂಡವು ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದರು. ಪರಿಣಾಮ ಮೊದಲ ವಿಕೆಟ್‌ಗೆ ಆರಂಭಿಕರಾದ ಮುಹಮ್ಮದ್ ಫಹಾದ್ ಹಾಗೂ ಇಲ್ಯಾಸ್ ಅತಾವುಲ್ಲ 154 ರನ್‌ಗಳ ಜೊತೆಯಾಟವಾಡಿದರು. ಅದು ಕೂಡ ಕೇವಲ 9.2 ಓವರ್‌ಗಳಲ್ಲಿ. ಇದರ ನಡುವೆ ಮುಹಮ್ಮದ್ ಫಹಾದ್ ಕೇವಲ 29 ಎಸೆತಗಳಲ್ಲಿ ಶತಕ ಪೂರೈಸಿದರು. ಈ ಮೂಲಕ ಟಿ20 ಕ್ರಿಕೆಟ್ ಇತಿಹಾಸದಲ್ಲೇ ಅತೀ ವೇಗದ ಸೆಂಚುರಿ ಸಿಡಿಸಿದ ವಿಶ್ವದ 2ನೇ ಬ್ಯಾಟರ್ ಎನಿಸಿಕೊಂಡರು. ಇದಾದ ಬಳಿಕ ಕೂಡ ಆರ್ಭಟ ಮುಂದುವರೆಸಿದ ಫಹಾದ್ 34 ಎಸೆತಗಳಲ್ಲಿ 12 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 120 ರನ್ ಬಾರಿಸಿ ಇನಿಂಗ್ಸ್ ಅಂತ್ಯಗೊಳಿಸಿದರು. ಫಹಾದ್ ಹಾಗೂ ಇಲ್ಯಾಸ್ ಅತಾವುಲ್ಲಾ (44) ವಿಕೆಟ್ ಪತನಗೊಳ್ಳುತ್ತಿದ್ದಂತೆ ದಿಢೀರ್ ಕುಸಿತಕ್ಕೊಳಗಾದ ಟರ್ಕಿ ತಂಡವು 19.3 ಓವರ್‌ಗಳಲ್ಲಿ 237 ರನ್‌ಗಳಿಸಿ ಆಲೌಟ್ ಆಗಿದೆ. ಈ ಮೂಲಕ ಬಲ್ಗೇರಿಯಾ ತಂಡಕ್ಕೆ 238 ರನ್‌ಗಳ ಕಠಿಣ ಗುರಿ ನೀಡಿದೆ. 238 ರನ್‌ಗಳ ಬೃಹತ್ ಮೊತ್ತ ಗುರಿ ಪಡೆದ ಬಲ್ಗೇರಿಯಾ ತಂಡವು ವಿಸ್ಫೋಟಕ ಬ್ಯಾಟಿಂಗ್‌ಗೆ ಒತ್ತು ನೀಡಿದರು. ಪರಿಣಾಮ ಆರಂಭಿಕನಾಗಿ ಕಣಕ್ಕಿಳಿದ ನಾಯಕ ಕ್ರಿಸ್ ಹಿಸ್ಟೊ ಬ್ಯಾಟ್‌ನಿಂದ 29 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್ ಹಾಗೂ 9 ಫೋರ್‌ಗಳೊಂದಿಗೆ 78 ರನ್‌ಗಳು ಮೂಡಿಬಂತು. ಆದರೆ ಉಳಿದ ಬ್ಯಾಟರ್‌ಗಳಿಂದ ನಿರೀಕ್ಷಿತ ಪ್ರದರ್ಶನ ಕಂಡು ಬಂದಿರಲಿಲ್ಲ. ಪರಿಣಾಮ 16.5 ಓವರ್‌ಗಳಲ್ಲಿ 178 ರನ್ ಗಳಿಸಿ ಬಲ್ಗೇರಿಯಾ ತಂಡವು ಆಲೌಟ್ ಆಗಿದೆ.



# ಲಾರ್ಡ್ಸ್‌ನಲ್ಲಿ ಟೀಮ್ ಇಂಡಿಯಾ ಗೆಲ್ಲೋದು ಖಚಿತ

ಲಾರ್ಡ್ಸ್ ಮೈದಾನದಲ್ಲಿ ನಡೆಯುತ್ತಿರುವ 3ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಉಭಯ ತಂಡಗಳು 387 ರನ್ ಕಲೆಹಾಕಿದೆ. ಅಂದರೆ ಈ ಪಿಚ್‌ನಲ್ಲಿ ಬ್ಯಾಟಿಂಗ್ ಕಷ್ಟಕರವೇನಲ್ಲ. ಹೀಗಾಗಿ ದ್ವಿತೀಯ ಇನಿಂಗ್ಸ್‌ನಲ್ಲಿ ಸ್ಪರ್ಧಾತ್ಮಕ ಮೊತ್ತ ಸಿಕ್ಕರೆ ಟೀಮ್ ಇಂಡಿಯಾ ಕೊನೆಯ ದಿನದಾಟದಲ್ಲಿ ಚೇಸಿಂಗ್ ಮಾಡುವುದು ಬಹುತೇಕ ಖಚಿತ ಎನ್ನಬಹುದು. ಲಾರ್ಡ್ಸ್ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಗೆಲ್ಲುತ್ತಾ ಈ ಪ್ರಶ್ನೆಗೆ ನಾಲ್ಕನೇ ದಿನದಾಟದಂದು ಸ್ಪಷ್ಟ ಉತ್ತರ ಸಿಗಲಿದೆ. ಏಕೆಂದರೆ ಭಾರತ ಮತ್ತು ಇಂಗ್ಲೆಂಡ್ ನಡುವಣ ಮೂರನೇ ಟೆಸ್ಟ್ ಪಂದ್ಯವು ನಾಲ್ಕನೇ ದಿನದಾಟಕ್ಕೆ ಕಾಲಿಟ್ಟಿದೆ. ನಾಲ್ಕನೇ ದಿನದಾಟದಲ್ಲಿ ಇಂಗ್ಲೆಂಡ್ ತಂಡವು ದ್ವಿತೀಯ ಇನಿಂಗ್ಸ್ ಆಡಲಿದ್ದು, ಈ ಇನಿಂಗ್ಸ್ ಉಭಯ ತಂಡಗಳ ಪಾಲಿಗೆ ನಿರ್ಣಾಯಕ. ಏಕೆಂದರೆ ನಾಲ್ಕನೇ ದಿನದಾಟದಲ್ಲಿ ಆಕ್ರಮಣಕಾರಿ ಬ್ಯಾಟಿಂಗ್‌ನೊಂದಿಗೆ ಬೃಹತ್ ಮೊತ್ತ ಪೇರಿಸಿದರೆ ಮಾತ್ರ ಈ ಪಂದ್ಯದಲ್ಲಿ ಇಂಗ್ಲೆಂಡ್‌ಗೆ ಗೆಲ್ಲುವ ಚಾನ್ಸ್ ಸಿಗಲಿದೆ. ಅಂದರೆ ಇಂದು ಸಂಪೂರ್ಣ ಬ್ಯಾಟ್ ಮಾಡಿ ಕನಿಷ್ಠ 380+ ಸ್ಕೋರ್‌ಗಳಿಸಿದರೆ ಇಂಗ್ಲೆಂಡ್ ಐದನೇ ದಿನದಾಟದಲ್ಲಿ ಭಾರತ ತಂಡವನ್ನು ಬ್ಯಾಟಿಂಗ್‌ಗೆ ಆಹ್ವಾನಿಸಬಹುದು. ಅತ್ತ ಭಾರತ ತಂಡವು ಇಂಗ್ಲೆಂಡ್ ತಂಡವನ್ನು 350 ರನ್‌ಗಳ ಒಳಗೆ ಇಂದು ಆಲೌಟ್ ಮಾಡಿದರೆ, ಕೊನೆಯ ದಿನದಾಟದ ಮೂಲಕ ಪಂದ್ಯ ಗೆಲ್ಲುವ ಅವಕಾಶ ಟೀಮ್ ಇಂಡಿಯಾ ಮುಂದಿರಲಿದೆ. ಏಕೆಂದರೆ ಲಾರ್ಡ್ಸ್ ಮೈದಾನದಲ್ಲಿ ಈ ಹಿಂದೆ 344 ರನ್‌ಗಳನ್ನು ಚೇಸ್ ಮಾಡಿ ಗೆದ್ದ ಇತಿಹಾಸವಿದೆ. ಹೀಗಾಗಿ ನಾಲ್ಕನೇ ದಿನದಾಟದಲ್ಲಿ ಟೀಮ್ ಇಂಡಿಯಾ ಇಂಗ್ಲೆಂಡ್ ತಂಡವನ್ನು 350 ರನ್‌ಗಳ ಒಳಗೆ ಕಟ್ಟಿಹಾಕಿದರೆ, ಭಾರತ ತಂಡವು ಗೆಲುವನ್ನು ನಿರೀಕ್ಷಿಸಬಹುದು.







# ಸಿರಾಜ್‌ಗೆ ಬೀಳುತ್ತಾ ದಂಡ

ಲಾರ್ಡ್ಸ್ ಟೆಸ್ಟ್ ಪಂದ್ಯದ ನಾಲ್ಕನೇ ದಿನದಾಟ ಆರಂಭವಾಗಿದೆ. ಮೊದಲ ಸೆಷನ್‌ನಲ್ಲಿ ಟೀಂ ಇಂಡಿಯಾ ವೇಗಿಗಳು ಆಂಗ್ಲರನ್ನು ಕಟ್ಟಿಹಾಕುವಲ್ಲಿ ಯಶಸ್ವಿಯಾಗಿದ್ದಾರೆ. ಅದರಲ್ಲೂ ವೇಗಿ ಮೊಹಮ್ಮದ್ ಸಿರಾಜ್ ಇಂಗ್ಲೆಂಡ್‌ನ ಇಬ್ಬರು ಆಟಗಾರರ ವಿಕೆಟ್ ಕಬಳಿಸಿ ಅಪಾಯಕಾರಿಯಾಗಿ ಕಾಣಿಸುತ್ತಿದ್ದಾರೆ. ಆದರೆ ಸಿರಾಜ್ ಮೊದಲ ವಿಕೆಟ್ ಉರುಳಿಸಿದ ಬಳಿಕ ಮಾಡಿದ ಆಕ್ರಮಣಕಾರಿ ಸಂಭ್ರಮಾಚರಣೆ ಅವರಿಗೆ ಅಪಾಯ ತಂದೊಡ್ಡುವ ಸಾಧ್ಯತೆಗಳಿವೆ. ಏಕೆಂದರೆ ಮಹಮ್ಮದ್ ಸಿರಾಜ್ ಐಸಿಸಿ ನಿಯಮಗಳಿಗೆ ವಿರುದ್ಧವಾಗಿ ಬ್ಯಾಟ್ಸ್‌ಮನ್ ಮುಖದ ಸಮೀಪ ಹೋಗಿ ಸಂಭ್ರಮಾಚರಣೆ ಮಾಡಿದ್ದು, ಮ್ಯಾಚ್ ರಿಫೇರಿ ಸಿರಾಜ್‌ಗೆ ದಂಡ ವಿಧಿಸುವ ಸಾಧ್ಯತೆಗಳಿವೆ. ವಾಸ್ತವವಾಗಿ ಮೂರನೇ ದಿನದ ಆಟ ಮುಗಿಯುವ ಮೊದಲು ಭಾರತ ಮತ್ತು ಇಂಗ್ಲೆಂಡ್ ಆಟಗಾರರ ನಡುವೆ ವಾಗ್ವಾದ ನಡೆದು ಅದರ ಪರಿಣಾಮ ನಾಲ್ಕನೇ ದಿನವೂ ಕಂಡುಬಂದಿತು. ಸಿರಾಜ್ ಡಕೆಟ್ ವಿಕೆಟ್ ಪಡೆದ ತಕ್ಷಣ ಅವರ ಕಡೆಗೆ ತೆರಳಿ ಆಕ್ರಮಣಕಾರಿಯಾಗಿ ಆಚರಿಸಲು ಪ್ರಾರಂಭಿಸಿದರು. ಈ ದೃಶ್ಯವನ್ನು ನೋಡಿದ ಅಭಿಮಾನಿಗಳು ಶನಿವಾರ ನಡೆದ ವಿವಾದವನ್ನು ನೆನಪಿಸಿಕೊಂಡರು. ಇದೀಗ ಅದರ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966